ಬೆಂಗಳೂರು ಸಂಪುಟ: 16 ಸಂಚಿಕೆ: 44 ಪುಟ: 06 ಮಂಗಳವಾರ 07-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಎಮರ್ಜೆನ್ಸಿ'ಗೆ ಸಿಗುತ್ತಾ ಮುಕ್ತಿ?

ಗೈರಾಗಿದ್ದೇಕೆ ನಟಿ ಕಿಯಾರಾ?

ಜೈಸ್ವಾಲ್ ಆಯ್ಕೆ ಬಹುತೇಕ ಖಚಿತ..! ↘ ಪುಟ 6

## ಜ.10ರಂದು ಅಧಿಸೂಚನೆ ಪ್ರಕಟ, ಜ.17 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ

# ಮುಹೂರ್ತ ಫಿಕ್ಸ್

ನವದೆಹಲಿ: ಭಾರತೀಯ ಚುನಾವಣಾ ಆಯೋಗವು (ಇಸಿಐ) ಮುಂಬರುವ ದೆಹಲಿ ವಿಧಾನಸಭಾ ಚುನಾವಣೆಯ ವೇಳಾಪಟ್ಟಿಯನ್ನು ಪ್ರಕಟಿಸಿದೆ.

ಫೆಬ್ರವರಿ 5ರಂದು ಚುನಾವಣೆ ನಡೆಯಲಿದ್ದು, ಫೆಬ್ರವರಿ 8ರಂದು ಫಲಿತಾಂಶ ಹೊರ ಬೀಳಲಿದೆ. 70 ಸದಸ್ಯ ಬಲದ ವಿಧಾನಸಭೆಯ ಅವಧಿ ಫೆಬ್ರವರಿ 23ಕ್ಕೆ ಕೊನೆಗೊಳ್ಳಲಿದ್ದು, ಅದಕ್ಕೂ ಮುನ್ನ ಹೊಸ ಸದನ ರಚನೆಗೆ ಚುನಾವಣೆ ನಡೆಯಬೇಕಿದೆ. ದೆಹಲಿಯಲ್ಲಿ ಸಾಂಪ್ರದಾಯಿಕವಾಗಿ ಒಂದೇ ಹಂತದಲ್ಲಿ ಮತದಾನ ನಡೆಯುತ್ತಿದೆ.

ಮಂಗಳವಾರ ಪತ್ರಿಕಾಗೋಷ್ಠಿ ನಡೆಸಿದ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್, ದೆಹಲಿ ವಿಧಾನಸಭೆ ಚುನಾವಣೆ-2025ರ ವೇಳಾಪಟ್ಟಿಯನ್ನು ಘೋಷಣೆ ಮಾಡಿದರು. 70 ಸದಸ್ಯ ಬಲದ ವಿಧಾನಸಭೆಗೆ ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ಚುನಾವಣಾ ಫಲಿತಾಂಶ ಪ್ರಕಟವಾಗಲಿದೆ ಎಂದರು.

ಜನವರಿ 10ರಂದು ಅಧಿಸೂಚನೆ ಪ್ರಕಟಗೊಳ್ಳಲಿದ್ದು, 17ರಂದು ನಾಮಪತ್ರ ಸಲ್ಲಿಕೆಗೆ ಕೊನೆಯದಿನವಾಗಿದೆ, ನಾಮಪತ್ರ ಪರಿಶೀಲನೆ 18ರಂದು ನಡೆಯಲಿದ್ದು, ನಾಮಪತ್ರ ವಾಪಸ್ ಪಡೆಯಲು ಜ.20 ಕೊನೆಯ ದಿನಾಂಕವಾಗಿದೆ.

ಚುನಾವಣೆಯಲ್ಲಿ ಸುಮಾರು 1.55 ಲಕ್ಷ ಜನ ಮತ ಚಲಾಯಿಸಿಸಲಿದ್ದು, ಸುಮಾರು 83 ಲಕ್ಷ ಪುರುಷ ಮತದಾರರಿದ್ದು, 72 ಲಕ್ಷ ಮಹಿಳಾ ಮತದಾರರಿದ್ದಾರೆ. ಇದಕ್ಕಾಗಿ 13000ಕ್ಕೂ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಲಾಗುವುದು ಎಂದರು.

ಕೇಂದ್ರಾಡಳಿತ ಪ್ರದೇಶವಾದ್ದರಿಂದ ಬಹುತೇಕ ಮತಗಟ್ಟೆಗಳನ್ನು ಸೂಕ್ಷ್ಮ ಎಂದು ಪರಿಗಣಿಸಲಾಗಿದ್ದು, ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಮತಗಟ್ಟೆಗಳಿಗೆ ಹೆಚ್ಚಿನ ಭದ್ರತೆ ಒದಗಿಸಲಾಗುವುದು



ಬಹುತೇಕ ಭದ್ರತೆಯೊಂದಿಗೆ ಚುಣಾವಣೆ ನಡೆಸಲು ಆಯೋಗ ಮಾರ್ಗಸೂಚಿ ರೂಪಿಸಿದೆ ಎಂದು ಹೇಳಿದರು.

ಚುನಾವಣಾ ಪ್ರಕ್ರಿಯೆಗಳ ಕುರಿತು ಹಲವು ಅನುಮಾನಗಳಿಗೆ ತೆರೆ ಎಳೆದ ಆಯುಕ್ತರು, ಚುನಾವಣಾ ಪ್ರಕ್ರಿಯೆ ಮತದಾನ ಪಾರದರ್ಶಕವಾಗಿ ನಡೆಯುತ್ತಿದೆ. ಯಾವುದೇ ವೈರಸ್ ಬಳಕೆ ಮಾಡಿಕೊಂಡು ಇವಿಎಂ ಹ್ಯಾಕ್ ಮಾಡಲು ಸಾಧ್ಯವಿಲ್ಲ. ಇದನ್ನು ಪದೇ ಪದೇ ಹೇಳಲಾಗುತ್ತಿದೆ. ಮತ್ತೆ ಮತ್ತೆ ಸ್ಪಷ್ಟನೆಗಳನ್ನು ನೀಡಲಾಗುತ್ತದೆ ಎಂದು ರಾಜೀವ್ ಕುಮಾರ್ ಸ್ಪಷ್ಟಪಡಿಸಿದರು.

ಪಾರದರ್ಶಕ ಚುನಾವಣೆ ನಡೆಸುವುದು ನಮ್ಮ ಜವಾಬ್ದಾರಿ, ಕರ್ತವ್ಯ. ಸಂಜೆ 6 ಗಂಟೆಯ ಬಳಿಕ ಮತಗಟ್ಟೆ ಹೊರಗೆ ನಿಂತ ಎಲ್ಲರಿಗೂ ಟೋಕನ್ ವಿತರಣೆ ಮಾಡಿ ಅವರ ಮತಗಳನ್ನು ಪಡೆದು, ಮತದಾನವನ್ನು ಮುಕ್ತಾಯ ಮಾಡಲಾಗುತ್ತದೆ ಎಂದು ರಾಜೀವ್ ಕುಮಾರ್ ಹೇಳಿದರು.

2020ರಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷ (ಎಎಪಿ) ಚುನಾವಣೆಯಲ್ಲಿ 70 ರಲ್ಲಿ 62 ಸ್ಥಾನಗಳನ್ನು ಗೆದ್ದುಕೊಂಡಿತು. ಭಾರತೀಯ ಜನತಾ ಪಕ್ಷ (ಬಿಜೆಪಿ) ಎಂಟು ಸ್ಥಾನಗಳನ್ನು ಗಳಿಸುವಲ್ಲಿ ಯಶಸ್ವಿಯಾಗಿದೆ, ಆದರೆ ಕಾಂಗ್ರೆಸ್ ತನ್ನ ಖಾತೆ ತೆರೆಯಲು ವಿಫಲವಾಗಿದೆ.

ಚುನಾವಣಾ ಆಯೋಗದ ಪ್ರಕಾರ, 62.82 ರಷ್ಟು ಮತದಾನವಾಗಿದೆ, ಇದು ದೆಹಲಿಯಲ್ಲಿ 2015 ರ ವಿಧಾನಸಭಾ ಚುನಾವಣೆಗಿಂತ ಶೇಕಡಾ 4.65 ರಷ್ಟು ಕುಸಿತವಾಗಿತ್ತು. ರಾಜಧಾನಿಯಲ್ಲಿ ಎಎಪಿ ಪ್ರಾಬಲ್ಯಕ್ಕೆ ಸವಾಲು ಹಾಕಲು ಬಿಜೆಪಿ ಮತ್ತು ಕಾಂಗ್ರೆಸ್ ಸಿದ್ಧತೆ ನಡೆಸಿವೆ. ಎಎಪಿಯ ಗೆಲುವಿನ ಓಟವನ್ನು ಕೊನೆಗೊಳಿಸಲು ಬಿಜೆಪಿ ಉತ್ಸುಕವಾಗಿದೆ, ಆದರೆ ನಗರದ ರಾಜಕೀಯ ಭೂದೃಶ್ಯದಲ್ಲಿ ಕಳೆದುಹೋದ ತನ್ನ ನೆಲೆಯನ್ನು ಮರಳಿ ಪಡೆಯಲು ಕಾಂಗ್ರೆಸ್ ಪ್ರಯತ್ನಿಸುತ್ತಿದೆ.



ಗೃಹ ಕಚೇರಿ ಕೃಷ್ಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಾಜ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ ನಡೆಸಿದರು. ಈ ವೇಳೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ನಾಳೆ ಔತಣ ಕೂಟ ಏರ್ಪಡಿಸಿದ್ದೇನೆ

ಬೆಂಗಳೂರು: ಎಸ್‌ಸಿ, ಎಸ್‌ಟಿ ಶಾಸಕರು ಮತ್ತು ಸಚಿವರಿಗೆ ನಾಳೆ ಸಂಜೆ ಔತಣಕೂಟ ಏರ್ಪಡಿಸಿದ್ದೇನೆ. ಬೇರೆ ಯಾರಿಗೂ ಆಹ್ವಾನ ಇಲ್ಲ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದರು.

ಸದಾಶಿವನಗರ ನಿವಾಸದ ಬಳಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪಕ್ಷದ ವ್ಯಾಪ್ತಿಯಲ್ಲಿಯೇ ಅನುಮತಿ ಪಡೆದು ಸಭೆ ನಡೆಸ್ತೇವೆ. ನಾಳೆ ಸಂಜೆ 7 ಗಂಟೆಗೆ ಸಭೆ ಕರೆದಿದ್ದೇವೆ. ಎಸ್‌ಸಿ, ಎಸ್‌ಟಿ ಶಾಸಕರು ಮತ್ತು ಸಚಿವರನ್ನು ಬಿಟ್ಟು ಬೇರೆಯವರಿಗೆ ಆಹ್ವಾನ ಇಲ್ಲ. ಬರಬಾರದು ಅಂತ ಇಲ್ಲ. ಹಿಂದೆ ಚಿತ್ರದುರ್ಗದಲ್ಲಿ ಎಸ್‌ಸಿ, ಎಸ್‌ಟಿ ಸಮಾವೇಶ ಆಯ್ತು. ಆ ಸಮಾವೇಶದಲ್ಲಿ ಕೆಲವು ನಿರ್ಣಯ ತೆಗೆದುಕೊಂಡಿದ್ವಿ, ಅದರ ಬಗ್ಗೆಯೂ ನಾಳೆ ಚರ್ಚೆ ಮಾಡ್ತೇವೆ ಎಂದು ಸ್ಪಷ್ಟಪಡಿಸಿದರು.

ಮುಂದೆ ಎಸ್‌ಸಿ, ಎಸ್‌ಟಿ ಸಮಾವೇಶ ಮಾಡಬೇಕು ಅನ್ಕೊಂಡಿದ್ದೇವೆ. ಅದಕ್ಕಾಗಿ ಸಮುದಾಯದ ಪುಟ 2

## ಅಗತ್ಯ ಮಾನವ ಸಂಪನ್ಮೂಲ ಒದಗಿಸಿ: ಸಿಎಂ ಸೂಚನೆ



ಬೆಂಗಳೂರು: ಸರ್ಕಾರ ಕೊಟ್ಟ ಹಣವನ್ನು ಖರ್ಚು ಮಾಡದೆ ವರ್ಷದ ಕೊನೆ ತಿಂಗಳಲ್ಲಿ ಖರ್ಚು ಮಾಡುವ ಅಧಿಕಾರಿಗಳ ಅಭ್ಯಾಸದ ವಿರುದ್ಧ ಗರಂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ಗೃಹ ಕಚೇರಿ ಕೃಷ್ಣದಲ್ಲಿ ಎರಡೂವರೆ ಗಂಟೆ ಕಾಲ ಸಮಾಜ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲಿಸಿದ ಮುಖ್ಯಮಂತ್ರಿಗಳು ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡು ಸ್ಪಷ್ಟ ಸೂಚನೆ ನೀಡಿದರು.

ವರ್ಷದ ಕೊನೆ ತಿಂಗಳಲ್ಲೇ ಖರ್ಚು ಮಾಡುವ ಅಸಹ್ಯ ಅಭ್ಯಾಸ ಬೆಳೆಸಿಕೊಂಡಿದ್ದೀರಿ. ಬಡವರಿಗೆ, ಅರ್ಹ ಫಲಾನುಭವಿಗಳಿಗೆ ಹಂಚಲು ಕೊಟ್ಟ ಹಣವನ್ನು ಖರ್ಚು ಮಾಡದೆ ಇಟ್ಟುಕೊಂಡು ಕೂರುವುದಕ್ಕಾ ನೀವು ಇರುವುದು ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಿ ಎಂದು ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಸೂಚಿಸಿದರು. 2024-25 ನೇ ಸಾಲಿನಲ್ಲಿ ಆಯವ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ರೂ. 5,377 ಕೋಟಿ ಅನುದಾನ ಒದಗಿಸಲಾಗಿದೆ. ಇದುವರೆಗೆ ಅನುದಾನ ರೂ.3,631 ಕೋಟಿ ಬಿಡುಗಡೆಯಾಗಿದ್ದು ಈ ಹಣ ಕೂಡ ಪೂರ್ತಿ ಖರ್ಚು ಮಾಡದ ಬಗ್ಗೆ ತೀವ್ರವಾಗಿ ಪ್ರಶ್ನಿಸಿದರು. ಪುಟ 2

## ಭೂಕಂಪನ: ದೆಹಲಿ, ಬಿಹಾರದಲ್ಲೂ ನಡುಗಿದ ಭೂಮಿ

ಕಠ್ಮಂಡು/ನವದೆಹಲಿ: ಭಾರತದ ನೆರೆ ದೇಶ ನೇಪಾಳದ ರಾಜಧಾನಿ ಕಠ್ಮಂಡುವಿನಲ್ಲಿ ಇಂದು ಬೆಳಗ್ಗೆ 6.30ರ ಸುಮಾರಿಗೆ ಪ್ರಬಲ ಭೂಕಂಪನ ಸಂಭವಿಸಿದ್ದು, ರಿಕ್ಟರ್ ಮಾಪಕದಲ್ಲಿ 7.1ರಷ್ಟು ತೀವ್ರತೆ ದಾಖಲಾಗಿದೆ. ಹಿಮಾಲಯ ಪ್ರದೇಶ ವ್ಯಾಪ್ತಿಯ ಮೌಂಟ್ ಎವರೆಸ್ಟ್ ಪರ್ವತಕ್ಕೆ ಸಮೀಪದಲ್ಲಿರುವ ಭೂಪ್ರದೇಶದಲ್ಲಿ ಕಂಪನದ ಅನುಭವವಾಗಿದೆ. ನೇಪಾಳದ ಲಾಬ್ಚೆ ಎಂಬಲ್ಲಿಂದ ಸುಮಾರು 93 ಕಿಲೋ ಮೀಟರ್ ದೂರದ ಪುಟ 2 ಚೀನಾದ ಟಿಬೆಟ್‌ನಲ್ಲಿ ವ್ಯಾಪಿಸಿರುವ ಪರ್ವತ ಗಡಿ ಪ್ರದೇಶಗಳಲ್ಲಿ ಭೂಕಂಪನದ ಕೇಂದ್ರ ಬಿಂದುವನ್ನು ಗುರುತಿಸಲಾಗಿದೆ ಎಂದು ಯುಎಸ್ ಜಿಯಾಲಾಜಿಕಲ್ ಸರ್ವೇ ಮಾಹಿತಿ ನೀಡಿದೆ. ಇಲ್ಲಿಂದ ಸುಮಾರು 200 ಕಿಲೋ ಮೀಟರ್ ದೂರದ ದೇಶದ ಆಗ್ನೇಯಪುಟ 2

## ಜ್ವರದಲ್ಲೂ ನಟ ವಿಶಾಲ್ ಪ್ರಚಾರ

ಚೆನ್ನೈ: ಸುಂದರ್ ಸಿ ನಿರ್ದೇಶನದ ಮದಗಜರಾಜ 12 ವರ್ಷಗಳ ನಂತರ ಇದೇ ವರ್ಷ ಪೊಂಗಲ್‌ಗೆ ಬಿಡುಗಡೆಯಾಗಲಿದೆ. ಈ ಹಿನ್ನೆಲೆಯಲ್ಲಿ ನಿನ್ನೆ ಚೆನ್ನೈನಲ್ಲಿ ಚಿತ್ರದ ಪ್ರಚಾರ ಕಾರ್ಯಕ್ರಮ ನಡೆದಿದೆ. ಕಾರ್ಯಕ್ರಮದಲ್ಲಿ ನಟ ವಿಶಾಲ್ ಭಾಗವಹಿಸಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಈ ವೇಳೆ ನಿನ್ನೆ ನಡೆದ ಚಿತ್ರಕ್ಕೆ ಸಂಬಂಧಿಸಿದ ಕಾರ್ಯಕ್ರಮದಲ್ಲಿ ವಿಶಾಲ್ ಆರೋಗ್ಯ ಸ್ಥಿತಿ ಕಂಡು ಹಲವು ಅಭಿಮಾನಿಗಳು ಶಾಕ್ ಆಗಿದ್ದಾರೆ.ಪುಟ 2

## ರಾಜ್ಯದ ಅಭಿವೃದ್ಧಿ ಬಗ್ಗೆ ಚಿಂತಿಸಿ

ಬೆಂಗಳೂರು: ಕೇಂದ್ರ ಸಚಿವರಾಗಿರುವ ಹೆಚ್.ಡಿಕುಮಾರಸ್ವಾಮಿ ಅವರು ರಾಜ್ಯ ಸರ್ಕಾರದ ಮೇಲೆ



ಸುಳ್ಳು ಆರೋಪಗಳನ್ನು ಬಿಟ್ಟು ರಾಜ್ಯದ ಅಭಿವೃದ್ಧಿಯ ಕಡೆ ಗಮನ ಹರಿಸಲಿ ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿದ್ದಾರೆ. ಕಾಂಗ್ರೆಸ್ ಸರ್ಕಾರದ ವಿರುದ್ಧ 60% ಕಮಿಷನ್ ಆರೋಪ ಮಾಡುತ್ತಾ ಕಾಲಕಳೆಯುತ್ತಿರುವ ಕುಮಾರಸ್ವಾಮಿ ಅವರು, ತಮಗೆ ಸಿಕ್ಕಿರುವ ಖಾತೆಯನ್ನು ಇನ್ನಷ್ಟು ಉನ್ನತವಾಗಿ ನಿಭಾಯಿಸಲಿ ಅದನ್ನು ಬಿಟ್ಟು ಕಾಲಹರಣ ಮಾಡುವುದನ್ನು ಬಿಡಲಿ ಎಂದು ಕುಟುಕಿದರು.

ಶನಿವಾರ, ಭಾನುವಾರ ರಾಜ್ಯಕ್ಕೆ ಬರೋದು. ಆರೋಪ ಮಾಡೋ ಕಾಯಕವನನು ಬಿಟ್ಟುಪುಟ 2

## ಕಾಂಗ್ರೆಸ್ ವಿರುದ್ಧ ಹೆಚ್‌ಡಿಕೆ ಗರಂ



ನವದೆಹಲಿ: ರಾಜ್ಯ ಕಾಂಗ್ರೆಸ್ ಸರಕಾರದ ಮೇಲೆ 60% ಕಮೀಶನ್ ಆರೋಪವನ್ನು ಮತ್ತಷ್ಟು ತೀವ್ರಗೊಳಿಸಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

60% ಕಮಿಷನ್ ಆರೋಪಕ್ಕೆ ನಾನು ಬದ್ಧನಾಗಿದ್ದೇನೆ ಎಂದು ಹೇಳಿರುವ ಅವರು, ಮಾಧ್ಯಮಗಳಲ್ಲಿ ಬಂದಿರುವ ವರದಿಗಳ ತುಣುಕುಗಳನ್ನು ಟ್ಯಾಗ್ ಮಾಡಿ ಸರಕಾರದ ವಿರುದ್ಧ ಪರ್ಸಂಟೇಜ್ ದಾಳಿ ಮಾಡಿರುವ ಅವರು; ಇಲ್ಲಿದೆ ನೋಡಿ ನಿಮ್ಮ ಲೂಟಿ ಸಾಕ್ಷಿಗುಡ್ಡೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದಾಖಲೆ ಕೊಡಿ.. ದಾಖಲೆ ಕೊಡಿ ಎನ್ನುತ್ತಿದ್ದೀರಿ.. ಇಲ್ನೋಡಿ ಸನ್ಮಾನ್ಯ ಸಿದ್ದರಾಮಯ್ಯನವರೇ.. ನಿಮ್ಮ ಖೊಟ್ಟಿ ಗ್ಯಾರಂಟಿ ಸರಕಾರದ ಲೂಟಿ ಸಾಕ್ಷಿಗುಡ್ಡೆ. ಪತ್ರಿಕೆಯವರೇ ನಿಮ್ಮ ಸಾಕ್ಷಿಗುಡ್ಡೆಯ ಸಾಕ್ಷಾತ್ಕಾರ ಮಾಡಿಸಿದ್ದಾರೆ!!

ನಿಮ್ಮ ಸರಕಾರ ಗುತ್ತಿಗೆದಾರರನ್ನು ಎಷ್ಟು ನಿರ್ಲಜ್ಜವಾಗಿ ಸುಲಿಗೆ ಮಾಡುತ್ತಿದೆ ಎನ್ನುವುದಕ್ಕೆ ಈ ಸಾಕ್ಷಿಗುಡ್ಡೆ ಸಾಕ್ಷ್ಯ ಸಾಲದೇ ಮುಖ್ಯಮಂತ್ರಿಗಳೇ..? ಎಂದು ಸಚಿವರು ಪ್ರಶ್ನೆ ಮಾಡಿದ್ದಾರೆ.

ಚೆಂಬು ಹಾಕಿ ಹಂಡೆ ಹೊಡೆದರು ಎನ್ನುವಂತೆ ಗ್ಯಾರಂಟಿ ಹೆಸರಿನಲ್ಲಿ ಬಿಡಿಗಾಸು ಕೊಟ್ಟು ಕೋಟಿ ಕೋಟಿ ಲೂಟಿ ಮಾಡುತ್ತಿದ್ದೀರಿ. ಗುತ್ತಿಗೆದಾರರ 32,000 ಕೋಟಿಯಷ್ಟು ಬಿಲ್ ಬಾಕಿ ಬಿದ್ದಿದೆ. ಈ ಬಾಕಿ ಮೇಲೆ ನಿಮ್ಮ ಪರ್ಸಂಟೇಜ್ ಕರಿನೆರಳು ಕೂಡ ಬಿದ್ದಿದೆ! ಸಾಲಸೋಲ ಮಾಡಿ ಕಾಮಗಾರಿ ಮಾಡಿರುವ ಗುತ್ತಿಗೆದಾರರು ದಯಾಮರಣಕ್ಕೆ ಅರ್ಜಿ ಬರೆಯುತ್ತಿದ್ದಾರೆ!! ಎಂದು ಕೇಂದ್ರ ಸಚಿವರು ಕಳವಳ ವ್ಯಕ್ತಪಡಿಸಿದ್ದಾರೆ.

ಗುತ್ತಿಗೆದಾರರ ಬಿಲ್ ಬಾಕಿ ಪಟ್ಟಿ ನೋಡಿ.. ಜಲ ಸಂಪನ್ಮೂಲ: 14,600 ಕೋಟಿ, ಲೋಕೋಪಯೋಗಿ: 10,000 ಕೋಟಿ, ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್: 3,100 ಕೋಟಿ, ಸಣ್ಣ ನೀರಾವರಿ: 2,800 ಕೋಟಿ, ಇತರೆ ಇಲಾಖೆ: 1,500 ಕೋಟಿ ಸೇರಿ ಒಟ್ಟು: 32,000 ಕೋಟಿ ಬಾಕಿ ಇದೆ ಎಂದು ಸಚಿವರು ಹೇಳಿದ್ದಾರೆ.ಪುಟ 2

## ಕಾಲ್ತುಳಿತ ಪ್ರಕರಣ: ಆಸ್ಪತ್ರೆಗೆ ಅಲ್ಲು ಭೇಟಿ

ಹೈದರಾಬಾದ್: 2024 ರ ಡಿಸೆಂಬರ್ 4 ರಂದು ಹೈದರಾಬಾದ್‌ನ ಸಂಧ್ಯಾ ಥಿಯೇಟರ್‌ನಲ್ಲಿ ಪುಷ್ಪ 2 ಚಿತ್ರದ ಪ್ರದರ್ಶನದ ವೇಳೆ ಉಂಟಾದ ಕಾಲ್ತುಳಿತದಲ್ಲಿ



ಗಾಯಗೊಂಡು ಭಾಗ್ಯ ನಗರದ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಎಂಟು ವರ್ಷದ ಬಾಲಕ ಶ್ರೀತೇಜ್ ಅವರನ್ನು ಅಲ್ಲು ಅರ್ಜುನ್ ಇಂದು ಭೇಟಿ ಮಾಡಿದ್ದಾರೆ.

ಇದಲ್ಲದೆ, ಶ್ರೀತೇಜ್ ಯೋಗಕ್ಷೇಮ ಕುರಿತು ವೈದ್ಯರಲ್ಲಿ ವಿಚಾರಣೆ ನಡೆಸಿ ಮಾಹಿತಿ ಪಡೆದಿದ್ದಾರೆ. ತೆಲಂಗಾಣ ಚಲನಚಿತ್ರ ಪುಟ 2

ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ನಿರ್ಮಾಪಕ ದಿಲ್ ರಾಜು ಅವರು ಅಲ್ಲು ಅರ್ಜುನ್ ಜೊತೆಗೆ ಬೇಗಂಪೇಟೆಯಲ್ಲಿರುವ ಕಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದ್ದಾರೆ.ಶ್ರೀತೇಜ್ ಆರೋಗ್ಯ ಸ್ಥಿತಿ ತಿಳಿದ ನಂತರ ನಟ ಅಲ್ಲಿಂದ ನಿರ್ಗಮಿಸಿದ್ದಾರೆ.ಪುಟ 2

## ಕಾಂಗ್ರೆಸ್‌ನಿಂದ ಅನುದಾನ ಕಡಿತ, ದಲಿತರಿಗೆ ಅನುದಾನವಿಲ್ಲ

ಬೆಂಗಳೂರು: ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರ ಪಕ್ಕಾ 60 ಪರ್ಸೆಂಟ್ ಕಮಿಶನ್ ಸರ್ಕಾರ. ಕಾಂಗ್ರೆಸ್‌ನ ಆಡಳಿತದಿಂದಾಗಿ ರಾಜ್ಯದ ದಿವಾಳಿಯ ಕಡೆಗೆ ಸಾಗುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಮಾಚಲ ಪ್ರದೇಶ ಹಾಗೂ ಕೇರಳದಂತೆಯೇ ಕರ್ನಾಟಕ ಕೂಡ ದಿವಾಳಿಯ ಕಡೆಗೆ ಹೆಜ್ಜೆ ಇಡುತ್ತಿದೆ. ಕಾಂಗ್ರೆಸ್‌ನದ್ದು ಪಕ್ಕಾ 60 ಪರ್ಸೆಂಟ್ ಕಮಿಶನ್‌ನ ಸರ್ಕಾರ. ಗುತ್ತಿಗೆದಾರರಿಗೆ ಪಾವತಿಸಲು ಸರ್ಕಾರದ ಬಳಿ ಹಣವಿಲ್ಲ. ಬಿಜೆಪಿ ಸರ್ಕಾರಕ್ಕೆ 40 ಪರ್ಸೆಂಟ್ ಎಂದು ಆರೋಪಿಸಿದ ಗುತ್ತಿಗೆದಾರರು, ಈಗ ಕಾಂಗ್ರೆಸ್ ಸರ್ಕಾರ 60% ಕಮಿಶನ್ ಸರ್ಕಾರ ಎಂದು ಹೇಳಿ ದಯಾಮರಣಕ್ಕೆ ಅರ್ಜಿ ಸಲ್ಲಿಸಲು ನೋಡುತ್ತಿದ್ದಾರೆ. ಬೆಂಗಳೂರಿನಲ್ಲಿ 30-40 ನಿವೇಶನಕ್ಕೆ 10 ಲಕ್ಷ ರೂ. 40-60 ನಿವೇಶನಕ್ಕೆ 20 ಲಕ್ಷ ರೂ., ಇದಕ್ಕೂ ಹೆಚ್ಚಿನ ನಿವೇಶನಗಳಿಗೆ 40 ಲಕ್ಷ ರೂ. ಲಂಚ ಕಮಿಶನ್ ಕೊಡಬೇಕಿದೆ ಎಂದು ದೂರಿದರು.

ಗುತ್ತಿಗೆದಾರರಿಗೆ ಸರ್ಕಾರ 32 ಸಾವಿರ ಕೋಟಿ ರೂ. ನೀಡಬೇಕಿದೆ. ಈ ಹಣ ತರಲು ಎಲ್ಲದಕ್ಕೂ ಸರ್ಕಾರ ತೆರಿಗೆ ಹಾಕುತ್ತಿದೆ. ಇಲ್ಲವಾದರೆ ಗುತ್ತಿಗೆದಾರರಿಗೆ ಕೆಲಸ ಸ್ಥಗಿತಗೊಳಿಸುತ್ತಾರೆ. ಇದರ ನಡುವೆ ಆಶಾ ಕಾರ್ಯಕರ್ತೆಯರು ಧರಣಿ ಆರಂಭಿಸಿದ್ದಾರೆ. ಜೊತೆಗೆ ತೊಗರಿ ಖರೀದಿಗೆ ಸರ್ಕಾರದ ಬಳಿ ಹಣವಿಲ್ಲ ಎಂದರು.

ರಾಜ್ಯ ಬಜೆಟ್‌ನಲ್ಲಿ 3.22 ಲಕ್ಷ ಕೋಟಿ ರೂ. ನಲ್ಲಿ 1.79 ಲಕ್ಷ ಕೋಟಿ ರೂ., ಅಂದರೆ 55.69% ಖರ್ಚಾಗಿದೆ. ಇನ್ನೂ 45% ಅನ್ನು ಎರಡು ತಿಂಗಳಲ್ಲಿ ಖರ್ಚು ಮಾಡಬೇಕಿದೆ.



ಎಸ್‌ಸಿಎಸ್‌ಪಿಯಲ್ಲಿ 28,527.02 ಕೋಟಿ ರೂ. ಇದ್ದರೆ, 13,923 ಕೋಟಿ ರೂ. ಅಂದರೆ 48.81% ಖರ್ಚು ಮಾಡಲಾಗಿದೆ. ಟಿಎಸ್‌ಪಿಯಲ್ಲಿ 11,515.39 ಕೋಟಿ ರೂ. ಇದ್ದರೆ, 4,937.59 ಕೋಟಿ ರೂ. ಅಂದರೆ 42.88% ಖರ್ಚಾಗಿದೆ. ವಿಶೇಷ ಅಭಿವೃದ್ಧಿ ಯೋಜನೆಯಡಿ, 3,077 ಕೋಟಿ ರೂ. ಇದ್ದರೆ 1,076 ಕೋಟಿ ರೂ. ಅಂದರೆ 34% ಖರ್ಚಾಗಿದೆ. ನುಡಿದಂತೆ ನಡೆದ ಎಂದು ಹೇಳಿ ಯಾವುದೇ ಅನುದಾನ ಖರ್ಚು ಮಾಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿಎಂ ಸಿದ್ದರಾಮಯ್ಯ ಬಜೆಟ್‌ನಲ್ಲಿ ಬಹಳ ಮೋಸ ಮಾಡುತ್ತಾರೆ. ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಗಂಗಾ ಕಲ್ಯಾಣ ಯೋಜನೆಗೆ 2022-23 ರಲ್ಲಿ ಬಿಜೆಪಿ ಸರ್ಕಾರ 60 ಕೋಟಿ ರೂ. ಅನುದಾನ ನೀಡಿತ್ತು. 2024-25 ರಲ್ಲಿ ಕಾಂಗ್ರೆಸ್ 40 ಕೋಟಿ ರೂ. ನೀಡಿದೆ. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಸ್ವಯಂ ಉದ್ಯೋಗ ಯೋಜನೆಗೆ ಬಿಜೆಪಿ 100 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 45 ಕೋಟಿ ರೂ. ನೀಡಿದೆ. ತಾಂಡಾ ಅಭಿವೃದ್ಧಿ ನಿಗಮದ ಸ್ವಯಂ ಉದ್ಯೋಗ ಯೋಜನೆಗೆ ಬಿಜೆಪಿ 110 ಕೋಟಿ ರೂ. ನೀಡಿದರೆ ಕಾಂಗ್ರೆಸ್ 60 ಕೋಟಿ ರೂ. ನೀಡಿದೆ. ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮಕ್ಕೆ ಬಿಜೆಪಿ 100 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 50 ಕೋಟಿ ರೂ. ನೀಡಿದೆ. ಭೋವಿ ಅಭಿವೃದ್ಧಿ ನಿಗಮಕ್ಕೆ ಬಿಜೆಪಿ 95 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 55 ಕೋಟಿ ರೂ. ನೀಡಿದೆ. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ಬಿಜೆಪಿ 190 ಕೋಟಿ ರೂ. ನೀಡಿದ್ದರೆ, ಕಾಂಗ್ರೆಸ್ 100 ಕೋಟಿ ರೂ. ನೀಡಿದೆ. ವಿಶ್ವಕರ್ಮ ಅಭಿವೃದ್ಧಿ ನಿಗಮಕ್ಕೆ ಬಿಜೆಪಿ 25 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 13 ಕೋಟಿ ರೂ. ಗೆ ಇಳಿಸಿದೆ ಎಂದರು.

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಬಿಜೆಪಿ 106 ಕೋಟಿ ರೂ. ನೀಡಿದ್ದರೆ, ಕಾಂಗ್ರೆಸ್ 50.10 ಕೋಟಿ ರೂ. ನೀಡಿದೆ. ನಿಜಶರಣ ಅಂಬಿಗರ ಚೌಡಯ್ಯ ನಿಗಮಕ್ಕೆ ಬಿಜೆಪಿ 25 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 5 ಕೋಟಿ ರೂ. ನೀಡಿದೆ. ಉಪ್ಪಾರ ನಿಗಮಕ್ಕೆ ಬಿಜೆಪಿ 15 ಕೋಟಿ ರೂ.ಪುಟ 2

# ಹನೂರು ಪಟ್ಟಣ ಪಂಚಾಯ್ತಿಯಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ..!

## ನಕಲಿ ದಾಖಲೆ ಸೃಷ್ಟಿಸಿ ಸರ್ಕಾರಿ ಜಾಗ ಖಾಸಗಿಯವರಿಗೆ ಖಾತೆ!

ಚಾಮರಾಜನಗರ: ಲಕ್ಷಾಂತರ ರೂಪಾಯಿ ಲಂಚದಾಸೆಯಿಂದ ಕೋಟ್ಯಾಂತರ ರೂಪಾಯಿ ಬೆಲೆ ಬಾಳುವ ಸರ್ಕಾರಿ ಜಾಗವನ್ನು ನಕಲಿ ದಾಖಲೆ ಸೃಷ್ಟಿಸಿ ಖಾಸಗಿಯವರಿಗೆ ಖಾತೆ ಮಾಡಿಕೊಟ್ಟಿರುವ ಪ್ರಕರಣವೊಂದು ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದಲ್ಲಿ ದಾಖಲೆ ಸಮೇತ ಬಹಿರಂಗಗೊಂಡಿದೆ.

ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣ ಪಂಚಾಯ್ತಿ ಮುಖ್ಯಾಧಿಕಾರಿ ಆರ್. ಅಶೋಕ್ ಹಾಗೂ ದ್ವಿತೀಯ ದರ್ಜೆ ಸಹಾಯಕ ಪ್ರತಾಪ್ ಅಕ್ರಮವೆಸಗಿದವರಾಗಿದ್ದಾರೆ ಎಂದು ದೂರಲಾಗುತ್ತಿದೆ.

ಚಾಮರಾಜನಗರ ಜಿಲ್ಲೆಯ ಹನೂರುಪಟ್ಟಣದ ತಹಶಿಲ್ದಾರ್ ಕಚೇರಿಯ ಎದುರಿನ ಎಕರೆಗಟ್ಟಲೆ ಸರ್ಕಾರಿ ಜಾಗದಲ್ಲಿ ಸುಮಾರು 8 ಸೆಂಟಿನಷ್ಟು ಜಾಗವನ್ನು ನಕಲಿ ದಾಖಲೆ ಸೃಷ್ಟಿಸಿ ಚಿಗತಾಪುರದ ಮುಕ್ಬಲ್ ಪಾಶ ಎಂಬುವರಿಗೆ, ಮಾರುತಿ ಚಿತ್ರ ಮಂದಿರದ ಹಿಂಭಾಗದ ಪ್ರದೇಶದ 7ನೇ ವಾರ್ಡಿನಲ್ಲಿರುವ ಸ್ವತ್ತಿನ ಸಂಖ್ಯೆ 1–502–10/8 ಹಾಗೂ 1–508–10/9 ಎಂದು ಸ್ವತ್ತಿನ ಹಳೆಯ ಸಂ. 381/ಎ/05 ಹಾಗೂ 382/ಬಿ/07 ಎಂದು ನಮೂದಿಸಿ ದಿನಾಂಕ 23–12–2024 ರಂದು ಎರಡು ಅಕ್ರಮ ಇ– ಸ್ವತ್ತು ಮಾಡಿಕೊಡಲಾಗಿದೆ.

ಇದರಲ್ಲಿ ಗಮನಿಸಬೇಕಾದ ಪ್ರಮುಖ ಅಂಶಗಳೆಂದರೆ ಈ ಎರಡೂ ಅಸ್ತಿಗಳಿರುವುದು 11 ನೇ ವಾರ್ಡಿನಲ್ಲಿ ಹಾಗೂ ಸರ್ಕಾರಿ ಜಾಗವಾದ ಹನೂರು ಸ.ನಂ.247/2 ರಲ್ಲಿ. ಸದರಿ ಪಟ್ಟಣ ಪಂಚಾಯ್ತಿಯವರು ನಮೂದಿಸಿರುವ ಸ್ವತ್ತಿನ ಸಂಖ್ಯೆಯನ್ನು ಪೌರಾಡಳಿತ ನಿರ್ದೇಶನಾಲಯದ ವೆಬ್ ಸೈಟ್ ನಲ್ಲಿ ಪರಿಶೀಲಿಸಿದರೆ ಸದರಿ ಸ್ವತ್ತಿನ ಸಂಖ್ಯೆಗಳು ಕನ್ನಿಕಾ ಪರಮೇಶ್ವರಿ ದೇವಸ್ಥಾನದ ಬೀದಿಯಲ್ಲಿ ಬರುವ ರಾಜಗೋಪಾಲಶೆಟ್ಟಿ ಎಂಬುವರ ಹೆಸರಿನಲ್ಲಿ ತೋರುತ್ತಿದೆ.ಸದರಿ ಇ–ಆಸ್ತಿಯ ನಮೂನೆ–3 ರಲ್ಲಿನ ಹಳೆಯ ಸ್ವತ್ತಿನ ಸಂಖ್ಯೆ 381/ಎ/05 ಹಾಗೂ 382/ಬಿ/07 ಗಳನ್ನು ಪರಿಶೀಲಿಸಿದಾಗ ನೋ ಡಾಕುಮೆಂಟ್ ಫೌಂಡ್ ಎಂದು ತೋರಿಸುತ್ತದೆ.



ಈ ಎಲ್ಲಾ ದಾಖಲಾತಿಗಳ ಆದಾರದ ಮೇಲೆ ಅಂಗೈ ಹುಣ್ಣಿಗೆ ಕನ್ನಡಿ ಬೇಕಾಗಿಲ್ಲ ಎಂಬಂತೆ ಇದು ನಕಲಿ ನಮೂನೆ–3 ಹಾಗೂ ನಕಲಿ ಇ– ಸ್ವತ್ತು ಎಂದು ಕರಾರುವಾಕ್ಕಾಗಿ ನಿರ್ಧರಿಸಬಹುದಾಗಿದೆ.

ಈ ಪ್ರಕರಣ ಒಂದು ಸಣ್ಣ ಉದಾಹರಣೆಯಾಗಿದ್ದು ಇದು ಸೇರಿದಂತೆ ಇದರ ನೂರರಷ್ಟು ಅಕ್ರಮ ಇ–ಸ್ವತ್ತುಗಳು ಪ.ಪಂ.ನಲ್ಲಿ ನಡೆದಿದ್ದು ಸ.ನಂ. ಗಳಲ್ಲಿನ, ಸರ್ಕಾರದ ಯಥೇಚ್ಛ ಜಾಗಗಳನ್ನು ಯಾವುದೇ ಅನ್ಯಕ್ರಾಂತವಿಲ್ಲದೆ ಅಕ್ರಮ ಇ– ಸ್ವತ್ತುಗಳನ್ನಾಗಿ ಪರಿವರ್ತಿಸಿ ಸರ್ಕಾರಕ್ಕೆ ಸಲ್ಲಬೇಕಾದ ಶುಲ್ಕವನ್ನು ವಂಚಿಸಿ ಕೋಟ್ಯಾಂತರ ರೂಪಾಯಿ ಲೂಟಿ ಮಾಡಲಾಗಿದೆ.

ಅಶೋಕ್ ಮುಖ್ಯಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಾಗಿನಿಂದ ಇಲ್ಲಿಯ ತನಕದ ಖಾತೆ, ಕಾಮಗಾರಿ, ಪರವಾನಗಿ ಸೇರಿದಂತೆ ಎಲ್ಲಾ ವಹಿವಾಟುಗಳ ಕಡತಗಳನ್ನು ಪರಿಶೀಲಿಸಿದರೆ ಕೋಟ್ಯಾಂತರ ರೂ ಲೂಟಿ ಬೆಳಕಿಗೆ ಬರುವುದರಲ್ಲಿ ಸಂಶಯವೇ ಇಲ್ಲ ಎಂಬುದು ಸಾಮಾನ್ಯರಲ್ಲಿ ಅತಿ ಸಾಮಾನ್ಯರಿಂದ ಕೇಳಿ ಬರುತ್ತಿರುವ ಮಾತಾಗಿದ್ದರೂ ಜಿಲ್ಲಾಡಳಿತ ಮಾತ್ರ ಜಾಣ ಮೌನ ತಳೆದಿರುವುದು ಅನುಮಾನಕ್ಕೆ ಕಾರಣವಾಗಿದೆ.

ಇದೇ ಅಕ್ರಮ ಖಾತೆ ವಿಷಯಕ್ಕೆ ಸಂಬಂಧಿಸಿದಂತೆ ಮಹಿಳಾ ಸದಸ್ಯೆಯ ಪತಿಯೋರ್ವ ಪ.ಪಂ.ನ ಬಿಲ್ ಕಲೆಕ್ಟರ್ ಭರತ್ ನೊಂದಿಗೆ ಜಟಾಪಟಿ ನಡೆಸಿ ಹಲ್ಲೆಗೆ ಮುಂದಾಗಿರುವ ವಿಡಿಯೋ ಸಾಮಾಜಿಕ ಜಾಲ ತಾಣದಲ್ಲಿ ವೈರಲ್ ಆಗಿ ಮಾಧ್ಯಮಗಳಲ್ಲಿ ವರದಿಯಾಗಿದ್ದರೂ ಜಿಲ್ಲಾಡಳಿತ ಯಾವುದೇ ಕ್ರಮ ಜರುಗಿಸದೆ ನಿಷ್ಕ್ರಿಯವಾಗಿ ಉಳಿದದ್ದನ್ನು ಇಲ್ಲಿ ಉಲ್ಲೇಖಿಸಬಹುದಾಗಿದೆ.

ಈಗಾಗಲೆ ಈ ಮುಖ್ಯಾಧಿಕಾರಿ ಅಶೋಕ್ ವಿರುದ್ಧ ಈ ಹಿಂದೆ ಕರ್ತವ್ಯ ನಿರ್ವಹಿಸಿರುವ ಟಿ.ನರಸೀಪುರ, ಮದ್ದೂರುಗಳಲ್ಲಿ ನಡೆಸಿರುವ ಬ್ರಹ್ಮಾಂಡ ಭ್ರಷ್ಟಾಚಾರಗಳ ಬಗ್ಗೆ ವಿಚಾರಣೆ ನಡೆದು 1–4 ನೀಡಿ ದೋಷಾರೋಪಣ ಪಟ್ಟಿ ಸಲ್ಲಿಸಲಾಗಿದೆ. ಹಲವಾರು ಪ್ರಕರಣಗಳು ವಿಚಾರಣೆ ಹಂತದಲ್ಲಿವೆ.

ಅದರಲ್ಲಿ ಹನೂರು ಪ.ಪಂ.ನ ಅಕ್ರಮ ವಿತರಣೆ ಸೇರಿದಂತೆ ಎರಡು ಮೂರು ಪ್ರಕರಣಗಳಲ್ಲಿ ಒಂದು ಕೊಳ್ಳೇಗಾಲದ ಉಪವಿಭಾಗಾಧಿಕಾರಿಗಳ ಹಾಗೂ ತಹಶೀಲ್ದಾರರ ಬಳಿ ಹಾಗೂ ಮತ್ತೊಂದು ಪ್ರಕರಣ ನ್ಯಾಯಾಲಯದ ಮೆಟ್ಟಿಲೇರಿದ್ದರೂ ಈತ ಕ್ಯಾರೇ ಅನ್ನದೆ ಸರಣಿ ಅಕ್ರಮಗಳಲ್ಲಿ ನಿರತನಾಗಿರುವುದನ್ನು ಗಮನಿಸಿದರೆ ಜಿಲ್ಲಾಡಳಿತ ಹಾಗೂ ಜಿಲ್ಲಾ ನಗರಾಭಿವೃದ್ಧಿ ಕೋಶ ಮೌನವಾಗಿರಲು ಅನೇಕ ಸಂಶಯ ಮೂಡುತ್ತಿದೆ ಎಂದು ನಾಗರೀಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೆಲ ಪ.ಪಂ.ಸದಸ್ಯರು ಅದರಲ್ಲಿ ಮಹಿಳಾ ಸದಸ್ಯೆಯ ಪತಿ ಓರ್ವನದೇ ಪ್ರಮುಖ ಪಾತ್ರವಿದ್ದು ಈತ ಮುಖ್ಯಾಧಿಕಾರಿಯ ಗೈರಿನಲ್ಲೂ ಆತನ ಡಿಜಿಟಲ್ ಕೀಯನ್ನು ತನ್ನ ಬಳಿ ಇರಿಸಿಕೊಂಡು ಮುಖ್ಯಾಧಿಕಾರಿ ಎಲ್ಲೇ ಇದ್ದರೂ ಆತ ನೀಡುವ ಓಟಿಪಿ ಕೋಡನ್ನು ಬಳಸಿ ಪಂಚಾಯ್ತಿಯಲ್ಲಿ ಇ– ಸ್ವತ್ತು ತೆಗೆಸುವಷ್ಟು ಸಲುಗೆ ಹೊಂದಿದ್ದು ಈ ಅಕ್ರಮಕ್ಕೆ ಸಾಥ್ ನೀಡುತ್ತಿರುವುದು ಸೇರಿದಂತೆ ಎಲ್ಲರ ಆಟಾಟೋಪಗಳನ್ನು ಪ.ಪಂ.ನಲ್ಲಿನ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿರುವ ದೈನಂದಿನ ಚಟುವಟಿಕೆಗಳನ್ನು ಪರಿಶೀಲಿಸಿದರೆ ಪತ್ತೆ ಹಚ್ಚಿ ನಿಖರ ಕ್ರಮ ಕೈಗೊಳ್ಳಬಹುದು.

ಆದರೆ ಬೆಕ್ಕಿಗೆ ಗಂಟೆ ಕಟ್ಟುವವರಾರು ಎಂಬಂತೆ. ಜಿಲ್ಲಾಡಳಿತ ನಿದ್ರೆಗೆ ಜಾರಿದ್ದರೆ ಇವರುಗಳು ಎಚ್ಚರವಾಗಿದ್ದು ಲಕ್ಷಾಂತರ ರೂ ಲೂಟಿಯಲ್ಲಿ ತೊಡಗಿದ್ದಾರೆ ಎಂದು ಪ್ರಬುದ್ದ ನಾಗರೀಕರು ವ್ಯಂಗ್ಯವಾಡಿದ್ದಾರೆ.

ಇಷ್ಟೆಲ್ಲಾ ಅಕ್ರಮ ಅವ್ಯವಹಾರ ನಡೆಯುತ್ತಿದ್ದರೂ ಕ್ಷೇತ್ರದ ಶಾಸಕ ಎಂ ಆರ್ ಮಂಜುನಾಥ್ ಮೌನ ಸಹಮತವೇ ನಿರ್ಲಕ್ಷ್ಯತನವೇ ಒಂದೂ ತಿಳಿಯದಾಗಿದೆ.

ಮೊದಲ ಪುಟದಿಂದ

## ಏರ್ಪಡಿಸಿದ್ದೇನೆ

ಎಲ್ಲ ಸಚಿವರು, ಶಾಸಕರನ್ನು ಕರೆದಿದ್ದೇವೆ. ನಾಳೆ ನಾನು ಡಿನ್ನರ್ ಮಾತ್ರ ಕೊಡ್ತಿದ್ದೇನೆ, ಡಿನ್ನರ್ ಪಾರ್ಟಿ ಅಲ್ಲ. ಹಿಂದೆ ಚಿತ್ರದುರ್ಗದಲ್ಲಿ ಸಮಾವೇಶ ಮಾಡಿದ್ದೆವು. ಅದು ಯಶಸ್ವಿ ಆಗಿತ್ತು. ಆಮೇಲೆ ನಮ್ಮ ಸರ್ಕಾರ ಬಂತು. ನಂತರ ನಾವು ಒಂದೆಡೆ ಸೇರಲು ಆಗಿರಲಿಲ್ಲ. ಆದ್ದರಿಂದ ನಾಳೆ ಸೇರುತ್ತಿದ್ದೇವೆ. ಮುಂದೆ ಸಮಾವೇಶ ಮಾಡುವ ಬಗ್ಗೆ ಚರ್ಚೆ ಮಾಡಲಿದ್ದೇವೆ, ಸ್ಥಳ ಎಲ್ಲಿ ಅಂತ ಚರ್ಚೆ ಮಾಡ್ತೇವೆ ಎಂದರು.

ಕುಮಾರಸ್ವಾಮಿ ಅವರ ಶೇ.60 ಕಮೀಷನ್ ಆರೋಪಕ್ಕೆ ಪ್ರತಿಕ್ರಿಯಿಸಿ, ರಾಜ್ಯದಲ್ಲಿ ಕುಮಾರಸ್ವಾಮಿ ಸಿಎಂ ಆಗಿದ್ದವರು, ಕೇಂದ್ರದ ಸಚಿವರು. ಅವರು ಆರೋಪ ಮಾಡಿದ್ದಾರೆ ಅಂದ್ರೆ ನಾವು ಗಂಭೀರವಾಗಿಯೇ ತೆಗೆದುಕೊಳ್ಳುತ್ತೇವೆ. ಈ ಆರೋಪವನ್ನು ಸಿಎಂ ನಿರಾಕರಿಸಿ, ದಾಖಲೆ ಕೊಡಿ ಅಂದಿದ್ದಾರೆ. ನಾನೂ ಕುಮಾರಸ್ವಾಮಿ ಅವರಿಗೆ ಕೇಳ್ತೀನಿ, ಯಾರು ಶೇ.60 ಕಮಿಷನ್ ಪಡೆದಿದ್ದಾರೆ ಅಂತ ನಿರ್ದಿಷ್ಟ ದಾಖಲೆ ಇದ್ರೆ ಕೊಡಿ, ನಾವು ಕ್ರಮ ಕೈಗೊಳ್ಳುತ್ತೇವೆ. ಶೇ.40 ಕಮಿಷನ್ ಆರೋಪ ನಾವು ಮಾಡಿದ್ದಲ್ಲ, ಅದನ್ನು ಮೊದಲು ಗುತ್ತಿಗೆದಾರರ ಸಂಘ ಆರೋಪ ಮಾಡಿತ್ತು. ಕುಮಾರಸ್ವಾಮಿ ಅವರಿಗೆ ಸಲಹೆ ಕೊಡ್ತೇನೆ, ರಾಜ್ಯಕ್ಕೆ ಸ್ಟೀಲ್ ಫ್ಯಾಕ್ಟರಿ ತನ್ನಿ. ನಿಮ್ಮ ಪ್ರಭಾವವನ್ನು ಕೇಂದ್ರದಲ್ಲಿ ಬಳಸಿ ದೊಡ್ಡ ಕೈಗಾರಿಕೆಯನ್ನು ರಾಜ್ಯಕ್ಕೆ ತಂದರೆ ನಿಮ್ಮ ಹೆಸರು ರಾಜ್ಯದಲ್ಲಿ ಶಾಶ್ವತವಾಗಿ ಉಳಿಯುತ್ತೆ ಎಂದು ತಿಳಿಸಿದರು.

ಭದ್ರಾವತಿ ಕೈಗಾರಿಕೆ ಸೊರಗುತ್ತಿದೆ, ಅದು ಮುಚ್ಚುವ ಸ್ಥಿತಿಯಲ್ಲಿದೆ. ಭದ್ರಾವತಿ ಕೈಗಾರಿಕೆ ಪುನರುಜ್ಜೀವನ ಮಾಡಿ. ಬೇಕಾದಷ್ಟು ಕೈಗಾರಿಕೆಗಳಿದ್ದು, ಎಲ್ಲದಕ್ಕೂ ಶಕ್ತಿ ತುಂಬಿ. ದೊಡ್ಡ ದೊಡ್ಡ ಕೈಗಾರಿಕೋದ್ಯಮಿಗಳನ್ನು ರಾಜ್ಯಕ್ಕೆ ತಂದು ಬಂಡವಾಳ ಹೂಡುವಂತೆ ಮಾಡಿ. ಸುಮ್ಮನೆ ರಾಜಕೀಯಕ್ಕೆ ಆರೋಪ ಮಾಡೋದು ಸರಿಯಲ್ಲ ಎಂದರು.

2028ಕ್ಕೆ ನಾನು ಸಿಎಂ ಸ್ಥಾನಕ್ಕೆ ಪೈಪೋಟಿ ಕೊಡ್ತೇನೆ ಎಂಬ ಸತೀಶ್ ಜಾರಕಿಹೊಳಿ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿ, ಆಯ್ತಲ್ಲ, ಅವರು ಹೇಳಿದ ಮೇಲೆ ಆಯಿತು. ಇನ್ನು ನಾನೇನು ಹೇಳೋದು ಎಂದು ಹೇಳಿದರು.

ನಕ್ಸಲರ ಶರಣಾಗತಿ ವಿಚಾರವಾಗಿ ಮಾತನಾಡಿ, ವಿಕ್ರಮ್ ಗೌಡ ಎನ್‌ಕೌಂಟರ್ ನಂತರ ಉಳಿದ ನಕ್ಸಲರಿಗೆ ಶರಣಾಗಲು ಕರೆ ಕೊಟ್ಟಿದ್ದೇವೆ. ಈ ಪ್ರಕ್ರಿಯೆ ಬೇರೆ ಬೇರೆ ಹಂತಗಳಲ್ಲಿ ನಡೆಯುತ್ತಿದೆ. ಶರಣಾಗತಿ ಬಳಿಕ ಅವರಿಗೆ ಕಲ್ಪಿಸಿಕೊಡಬೇಕಾದ ಅನುಕೂಲತೆಗಳ ಬಗ್ಗೆಯೂ ಪರಿಶೀಲಿಸ್ತಿದ್ದೇವೆ. ಸದ್ಯದ ಪರಿಸ್ಥಿತಿಯಲ್ಲಿ ಹೊರಗಿಂದ ಯಾರೂ ನಕ್ಸಲರು ಬರದಿದ್ರೆ, ಈಗ ರಾಜ್ಯದಲ್ಲಿ ಇರೋರು ಶರಣಾದ್ರೆ ನಕ್ಸಲ್ ಮುಕ್ತ ಆಗಬಹುದು ಎಂದರು.

## ಅನುದಾನವಿಲ್ಲ

ನೀಡಿದರೆ ಕಾಂಗ್ರೆಸ್ 8 ಕೋಟಿ ರೂ. ನೀಡಿದೆ. ವೀರಶೈವ–ಲಿಂಗಾಯತ ಅಭಿವೃದ್ಧಿ ನಿಗಮಕ್ಕೆ ಬಿಜೆಪಿ 100 ಕೋಟಿ ರೂ. ನೀಡಿದ್ದರೆ, ಕಾಂಗ್ರೆಸ್ 60 ಕೋಟಿ ರೂ.ಗೆ ರಿಯಾಯಿತಿ ಮಾಡಿದೆ. ದೇವಾಲಯಗಳು ಮತ್ತು ಇತರೆ ಧಾರ್ಮಿಕ ಸಂಸ್ಥೆಗಳಿಗೆ ಅನುದಾನ ಬಿಜೆಪಿ 274.68 ಕೋಟಿ ರೂ. ನೀಡಿದರೆ, ಕಾಂಗ್ರೆಸ್ ಕೇವಲ 17.50 ಕೋಟಿ ರೂ. ನೀಡಿದೆ. ವಿವಿಧ ಮಠ ಹಾಗೂ ದೇವಾಲಯಗಳಿಗೆ ಮುಖ್ಯಮಂತ್ರಿಗಳ ವಿಶೇಷ ಸಹಾಯಧನದಡಿ ಬಿಜೆಪಿ 154.85 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 30 ಕೋಟಿ ರೂ. ನೀಡಿ ಅನ್ನಕ್ಕೂ ಕನ್ನ ಹಾಕಿದೆ ಎಂದು ದೂರಿದರು.

ಹಿಂದೂ ರುದ್ರಭೂಮಿಗಳ ನಿರ್ವಹಣೆಗೆ ಬಿಜೆಪಿ 25 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 10 ಕೋಟಿ ರೂ. ಗೆ ಇಳಿಸಿದೆ. ನೇಕಾರರ ಯೋಜನೆಗೆ ಬಿಜೆಪಿ 125.77 ಕೋಟಿ ರೂ. ಕೊಟ್ಟರೆ, ಕಾಂಗ್ರೆಸ್ 10 ಕೋಟಿ ರೂ. ಕೊಟ್ಟಿದೆ. ಕಮಿಶನ್ ದಂಧೆಗಾಗಿ ಸರ್ಕಾರ ಇಡೀ ರಾಜ್ಯವನ್ನು ಕತ್ತಲೆಗೆ ದೂಡಿದೆ ಎಂದು ಹೇಳಿದರು.

ಸಚಿವ ಪ್ರಿಯಾಂಕ್ ಖರ್ಗೆಯವರ ಆಪ್ತರನ್ನು ಇನ್ನೂ ಬಂಧಿಸಿಲ್ಲ. ಬಹುಶಃ ಸುರಕ್ಷತೆ ದೃಷ್ಟಿಯಿಂದ ಅವರನ್ನು ಪೊಲೀಸರು ಕಬ್ಬಿನ್ ಗದ್ದೆಯಲ್ಲಿ ಇರಿಸಿರಬಹುದು. ಅವರ ಆಪ್ತರು ರೌಡಿಶೀಟರ್ ಪಟ್ಟಿಯಲ್ಲಿದ್ದು, ಆ ಪಟ್ಟಿಯಿಂದ ಹೆಸರು ತೆಗೆಸಿದ್ದೇ ಕಾಂಗ್ರೆಸ್ ನಾಯಕರು. ಸಚಿವ ರಾಮಲಿಂಗಾರೆಡ್ಡಿ ಹಳೆಯ ಸುದ್ದಿ ಹೇಳಿದ್ದಾರೆ. ನಾನು ಸಚಿವನಾಗಿದ್ದಾಗ ಸಾರಿಗೆ ನಿಗಮಗಳನ್ನು ನಷ್ಟಕ್ಕೆ ದೂಡಲಿಲ್ಲ. ಎಲ್ಲ ಕಡೆ ಬಸ್ ನಿಲ್ದಾಣ ನಿರ್ಮಿಸಿ ಬಾಡಿಗೆ ಮೂಲಕ ಆದಾಯ ಬರುವಂತೆ ಮಾಡಲಾಗಿತ್ತು. ಈಗ ಸರ್ಕಾರ ಎಲ್ಲೂ ನಿಲ್ದಾಣ ನಿರ್ಮಿಸಿಲ್ಲ. ನಾನು ಸಚಿವ ಸ್ಥಾನದಿಂದ ಹೊರಬಂದಾಗ ಬಿಎಂಟಿಸಿ ಲಾಭದಲ್ಲಿತ್ತು. ಕೋವಿಡ್ ಸಮಯದಲ್ಲಿ ಆರ್ಥಿಕ ನಷ್ಟವಾಗಿದ್ದಾಗಲೂ ಟಿಕೆಟ್ ದರ ಏರಿಸಲಿಲ್ಲ. ಗ್ಯಾರಂಟಿಗಳಿಂದಾಗಿ ಈಗ ಟಿಕೆಟ್ ದರ ಏರಿಸಿದ್ದಾರೆ ಎಂದರು. ಹೊಸ ವೈರಸ್ ಹರಡುತ್ತಿರುವುದರಿಂದ ಸರ್ಕಾರ ಟಾಸ್ಕ್ ಫೋರ್ಸ್ ರಚಿಸಿ ಸಿದ್ಧತೆ ಮಾಡಿಕೊಳ್ಳಬೇಕು. ಆಕ್ಸಿಜನ್ ವ್ಯವಸ್ಥೆ ಮಾಡಬೇಕು. ಜಿಲ್ಲಾ, ತಾಲೂಕು ಕೇಂದ್ರದಲ್ಲಿ ಅಧಿಕಾರಿಗಳು ಆಡಿಟ್ ಮಾಡಬೇಕು. ಸರ್ಕಾರ ಕೂಡಲೇ ಸಿದ್ಧತೆ ಮಾಡಿಕೊಳ್ಳಲಿ ಎಂದು ಆಗ್ರಹಿಸಿದರು.

## ನಡುಗಿದ ಭೂಮಿ

ದಿಕ್ಕಿನಲ್ಲಿರುವ ಕಠ್ಮಂಡುವಿನಲ್ಲಿ ಕಟ್ಟಡಗಳು ನಡುಗಿವೆ. ಭೂಮಿಯ 10 ಕಿಲೋ ಮೀಟರ್ ಆಳದಲ್ಲಿ ಕಂಪನ ಉಂಟಾಗಿದೆ ಎಂದು ತಿಳಿದು ಬಂದಿದೆ.
ಭೂಕಂಪನದಿಂದ ತಕ್ಷಣಕ್ಕೆ ಪ್ರಾಣ ಹಾನಿ ಅಥವಾ ಆಸ್ತಿ ನಷ್ಟದ ಕುರಿತು ಯಾವುದೇ ವರದಿಯಾಗಿಲ್ಲ. ಭಯಭೀತರಾದ ಜನರು ತಮ್ಮ ಮನೆಗಳಿಂದ ಹೊರಬಂದಿದ್ದರು ಎಂದು ವರದಿಯಾಗಿದೆ.ಭಾರತದಲ್ಲೂ ಭೂಕಂಪನ: ನೇಪಾಳದಲ್ಲಿ ಸಂಭವಿಸಿದ ಭೂಕಂಪನದ ತೀವ್ರತೆ ಭಾರತದಲ್ಲೂ ಕಂಡುಬಂದಿದೆ. ದೆಹಲಿ ಎನ್‌ಸಿಆರ್ ಮತ್ತು ಬಿಹಾರದಲ್ಲಿ ಭೂಮಿ ನಡುಗಿದ ಅನುಭವವಾಗಿದೆ.

## ವಿಶಾಲ್ ಪ್ರಚಾರ

ಆ ವೇಳೆ ವಿಶಾಲ್ ಆರೋಗ್ಯ ತುಂಬಾ ಹದಗೆಟ್ಟ ಹಾಗೆ ಕಾಣಿಸಿದೆ. ಮೈಕ್ ಹಿಡಿಯಲು ಸಾಧ್ಯವಾಗದೆ ಒಂದು ರೀತಿಯ ನಡುಕ ಮತ್ತು ಅಸ್ಪಷ್ಟ ಭಾಷಣ ಮಾಡಿದ್ದಾರೆ.ಪದಗಳ ಉಚ್ಚಾರಣೆ ಕೂಡ ಸರಿಯಾಗಿ ಇರಲಿಲ್ಲ. ಮದಕಡರಾಜ ಮತ್ತು ಚಿತ್ರದಲ್ಲಿನ ಅವರ ಗಾಯನದ ಬಗ್ಗೆ ಮಾತನಾಡಿದ್ದಾರೆ . ಪುಟ 2 ವಿಶಾಲ್ ನನಗೆ ವೈರಲ್ ಫೀವರ್ ಇದೆ.ತೀವ್ರ ಜ್ವರದಿಂದ ಬಳಲುತ್ತಿದ್ದು ಅದನ್ನು ಲೆಕ್ಕಿಸದೆ ಚಿತ್ರದ ಪ್ರಚಾರಕ್ಕೆ ಬಂದಿದ್ದೆ ಎಂದು ವಿವರಿಸಿದ್ದಾರೆ.
ನಿನ್ನೆ ಚೆನ್ನೈನಲ್ಲಿ ಚಿತ್ರದ ಪ್ರಚಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ .ಇದರಲ್ಲಿ ಚಿತ್ರತಂಡದ ಹಲವರು ಭಾಗವಹಿಸಿದ್ದರೆ, ವಿಶಾಲ್ ಕೂಡ ಕಾರ್ಯಕ್ರಮಕ್ಕೆ ಬಂದಿದ್ದರು.ಇದೇ ವೇಳೆ ವಿಶಾಲ್ ನಡುಗುತ್ತಾ ಮಾತನಾಡಿರುವ ವಿಡಿಯೋವೊಂದು ಅಂತರ್ಜಾಲದಲ್ಲಿ ವೈರಲ್ ಆಗಿದೆ. ಇದನ್ನು ನೋಡಿದ ಅಭಿಮಾನಿಗಳು ನಟ ವಿಶಾಲ್ ಗೆ ಏನಾಯಿತು ಎಂದು ಅಂತರ್ಜಾಲದಲ್ಲಿ ಕಾಮೆಂಟ್ ಮಾಡುತ್ತಿದ್ದಾರೆ. ವಿಶಾಲ್ ತೀವ್ರ ಗುಣಮುಖರಾಗಿ ಹಳೇ ವಿಶಾಲ್ ಆಗಿ ವಾಪಸ್ ಬರಲಿ ಎಂದು ಹಾರೈಸಿದ್ದಾರೆ.
ಮದಗಜರಾಜ ಚಿತ್ರದಲ್ಲಿ ವಿಶಾಲ್, ಸಂತಾನಂ, ವರಲಕ್ಷ್ಮಿ ಶರತ್‌ಕುಮಾರ್, ಸತೀಶ್, ನಿತಿನ್ ಸತ್ಯ, ಸೋನುಸೂದ್, ಅಂಜಲಿ, ದಿವಂಗತ ನಟರಾದ ಮಣಿವಣ್ಣನ್, ಮನೋಬಾಲಾ, ಮೈಲಸ್ವಾಮಿ, ಚಿಟ್ಟಿಬಾಬು ಮುಂತಾದವರು ನಟಿಸಿದ್ದಾರೆ. ಚಿತ್ರಕ್ಕೆ ವಿಜಯ್ ಆಂಟೋನಿ ಸಂಗೀತ ಸಂಯೋಜಿಸಿದ್ದಾರೆ.
ಅಲ್ಲದೇ ಜೆಮಿನಿ ಫಿಲ್ಮ್ ಸರ್ಕ್ಯೂಟ್ ನಿರ್ಮಾಣದ 'ಮದಕಟರಾಜ' ಚಿತ್ರದಲ್ಲಿ ಆರ್ಯ ಅತಿಥಿ ಪಾತ್ರದಲ್ಲಿ ನಟಿಸಿದ್ದರು. ಸದಾ ಒಂದು ಹಾಡಿಗೆ ಕುಣಿದಿದ್ದಾರೆ.

## ಸಂಪನ್ಮೂಲ ಒದಗಿಸಿ: ಸೂಚನೆ

ಜೊತೆಗೆ ಅಂಬೇಡ್ಕರ್ ನಿಗಮದಲ್ಲಿ 900 ಕೋಟಿ, ಭೋವಿ ನಿಗಮದಲ್ಲಿ 107 ಕೋಟಿ ಸೇರಿ ಎಲ್ಲಾ ನಿಗಮಗಳಲ್ಲಿ ನೂರಾರು ಕೋಟಿ ಹಣ ಇದ್ದರೂ ಖರ್ಚು ಮಾಡದ ನಿಗಮದ ಎಂಡಿ ಗಳಿಗೆ ನೋಟಿಸ್ ನೀಡಿ, ಅಗತ್ಯ ಬಿದ್ದರೆ ಸಸ್ಪೆಂಡ್ ಮಾಡುವಂತೆ ಖಡಕ್ ಸೂಚನೆ ನೀಡಿದರು.

ಇಲಾಖೆಗೆ ಸರ್ಕಾರದಿಂದ ಕೊಟ್ಟ ಹಣದಲ್ಲಿ 2,892 ಕೋಟಿ ಮಾತ್ರ ವೆಚ್ಚ ಮಾಡಲಾಗಿದೆ. ಉಳಿದದ್ದು ಹಾಗೇ ಇರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ, ಮಾರ್ಚ್ ಅಂತ್ಯದ ವರೆಗೆ ಕಾಯದೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನ ಸಮರ್ಪಕವಾಗಿ ವೆಚ್ಚ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

## ಕಾಂಗ್ರೆಸ್ ವಿರುದ್ಧ ಗರಂ

ಭಂಡತನ ಏಕೆ? ಆಗಿರುವ ತಪ್ಪು ಸರಿಪಡಿಸಿಕೊಳ್ಳಿ. ವಿನಾಕಾರಣ ಸಮರ್ಥನೆ ಲಾಯಕ್ಕಲ್ಲ. ಗುತ್ತಿಗೆದಾರರ ಬದುಕು ಉಳಿಸಿ ರಾಜ್ಯದ ಅಭಿವೃದ್ಧಿ ಕಡೆಗೆ ಗಮನ ಹರಿಸಿ. ಇದ್ದಿದ್ದನ್ನು ಇದ್ದಹಾಗೆ ಹೇಳಿದ್ದೇನೆ. ನೀವೂ, ನಿಮ್ಮ ಸಂಪುಟ ನನ್ನ ಮೇಲೆ ವಾಗ್ಯುದ್ಧಕ್ಕಿಳಿದರೆ ಉಪಯೋಗವೇನು? ಗುತ್ತಿಗೆದಾರರ ಬಾಕಿ ಪಾವತಿಗಿಂತ ನನ್ನನ್ನು ಟಾರ್ಗೆಟ್ ಮಾಡುವುದು ಮುಖ್ಯವಲ್ಲ ಎಂದು ಸಿಎಂ ಮತ್ತು ಸಚಿವರಿಗೆ ಕೇಂದ್ರ ಸಚಿವರು ಕಿವಿಮಾತು ಹೇಳಿದ್ದಾರೆ.

## ಆಸ್ಪತ್ರೆಗೆ ಅಲ್ಲು ಭೇಟಿ

ಅಲ್ಲು ಅರ್ಜುನ್ ಆಸ್ಪತ್ರೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಆಸ್ಪತ್ರೆ ಆವರಣದಲ್ಲಿ ಭಾರೀ ಭದ್ರತಾ ಪಡೆಗಳನ್ನು ನಿಯೋಜಿಸಲಾಗಿದೆ. ಬಿಗಿ ಭದ್ರತೆ ಏರ್ಪಡಿಸಲಾಗಿದೆ.
ಶ್ರೀತೇಜ್ ಸ್ಥಿತಿ ಈಗ ಸುಧಾರಿಸುತ್ತಿದೆ. ಮಗು ವೈದ್ಯರ ಮೇಲ್ವಿಚಾರಣೆಯಲ್ಲಿದೆ. ಸಂಧ್ಯಾ ಥಿಯೇಟರ್ ಕಾಲ್ತುಳಿತ ಪ್ರಕರಣದಲ್ಲಿ ಅಲ್ಲು ಅರ್ಜುನ್ ವಿರುದ್ಧ ಕಾನೂನು ಪ್ರಕ್ರಿಯೆಗಳು ನಡೆಯುತ್ತಿವೆ. ಅಷ್ಟರಲ್ಲಿ ಅಲ್ಲು ಅರ್ಜುನ್ ಶ್ರೀತೇಜ್ ಅವರನ್ನು ಭೇಟಿಯಾಗಲು ಬಂದಿದ್ದಾರೆ . ಕಾಲ್ತುಳಿತದ ಘಟನೆಯ ನಂತರ ಹಲವು ವಾರಗಳವರೆಗೆ ವೆಂಟಿಲೇಟರ್‌ನಲ್ಲಿದ್ದ ಗಾಯಗೊಂಡ ಮಗು ಶ್ರೀತೇಜ್ ಬಗ್ಗೆ ಅಲ್ಲು ಅರ್ಜುನ್ ಕಳವಳ ವ್ಯಕ್ತಪಡಿಸಿದ್ದಾರೆ. ಮಗುವಿನ ಸ್ಥಿತಿ ಈಗ ಸುಧಾರಿಸುತ್ತಿದೆ. ಡಿಸೆಂಬರ್ 24 ರಂದು, ಮಗುವಿನ ಸ್ಥಿತಿಯಲ್ಲಿ ಸುಧಾರಣೆಯ ಚಿಹ್ನೆಗಳು ಕಂಡುಬಂದಿದೆ.
ಸುಮಾರು 20 ದಿನಗಳ ನಂತರ ಮಗು ಪ್ರತಿಕ್ರಿಯಿಸಿದೆ ಎಂದು ಶ್ರೀತೇಜ್ ತಂದೆ ಭಾಸ್ಕರ್ ಹೇಳಿದ್ದಾರೆ .ಈ ವೇಳೆ ಅಲ್ಲು ಅರ್ಜುನ್ ಮತ್ತು ತೆಲಂಗಾಣದಿಂದ ಸಂಪೂರ್ಣ ಬೆಂಬಲ ಸಿಗುತ್ತಿದೆ ಎಂದು ಹೇಳಿದ್ದಾರೆ.

## ಅಭಿವೃದ್ಧಿ ಬಗ್ಗೆ ಚಿಂತಿಸಿ

ಕರ್ನಾಟಕಕ್ಕೆ ಏನು ಕೊಡುಗೆ ಕೊಡಬೇಕೆಂಬುದರ ಬಗ್ಗೆ ಯೋಚಿಸಿ ಎಂದು ಟೀಕಿಸಿದರು.ಚುನಾವಣೆ ಇನ್ನು ದೂರ ಇದೆ. ಅಲ್ಲಿವರೆಗೂ ಕೆಲಸ ಮಾಡಲಿ. ಚುನಾವಣೆ ಬಂದಾಗ ಆರೋಪ ಮಾಡುವುದಕ್ಕೆ ಇದನ್ನೆಲ್ಲ ಸಿದ್ದಪಡಿಸಿಟ್ಟುಕೊಳ್ಳಿ ಎಂದು ಟಾಂಗ್ ಕೊಟ್ಟರು

# ಐಶ್ವರ್ಯ ವಿರುದ್ಧ ಮತ್ತೊಂದು ಎಫ್‌ಐಆರ್

**ಬೆಂಗಳೂರು:** ಮಾಜಿ ಸಂಸದ ಡಿ.ಕೆ.ಸುರೇಶ್ ಅವರ ಸಹೋದರಿ ಎಂದು ವಂಚಿಸುತ್ತಿದ್ದ ಐಶ್ವರ್ಯ ಗೌಡ ವಿರುದ್ಧ ಮತ್ತೊಂದು ಎಫ್‌ಐಆರ್ ದಾಖಲಾಗಿದೆ.



ಹಣ ಮತ್ತು ಚಿನ್ನಾಭರಣಗಳು ಸೇರಿದಂತೆ 5.03 ಕೋಟಿ ರೂ ವಂಚಿಸಿ ರುವುದಾಗಿ ಡಾ.ಮಂಜುಳಾ ಪಾಟೀಲ್ ಎಂಬವರು ಆರ್.ಆರ್.ನಗರ ಠಾಣೆಗೆ ದೂರು ನೀಡಿದ್ದು, ಐಶ್ವರ್ಯಾ ಗೌಡ, ಅವರ ಪತಿ ಹರೀಶ್ ಕೆ.ಎನ್, ಕಾರು ಚಾಲಕ ಧನಂಜಯ್ ಹಾಗೂ ಅಶ್ವಥ್ ಎಂಬವರ ವಿರುದ್ಧ ಪ್ರಕರಣ ದಾಖಲಾಗಿದೆ.

ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞೆಯಾಗಿರುವ ಮಂಜುಳಾ ಪಾಟೀಲ್ ಅವರಿಗೆ 2020–21ನೇ ಸಾಲಿನಲ್ಲಿ ಚಿಕಿತ್ಸೆಗಾಗಿ ಬರುತ್ತಿದ್ದಾಗ ಐಶ್ವರ್ಯಾ ಗೌಡ ಪರಿಚಯ ವಾಗಿತ್ತು. ತಾನು, ಡಿ.ಕೆ.ಸುರೇಶ್ ಹಾಗೂ ಡಿ.ಕೆ.ಶಿವಕುಮಾರ್ ಅವರ ಸಹೋದರಿ ಎಂದು ಪರಿಚಯಿಸಿಕೊಂಡಿದ್ದ ಐಶ್ವರ್ಯಾ ಗೌಡ, ತನಗೆ ದೊಡ್ಡಮಟ್ಟದಲ್ಲಿ ರಿಯಲ್ ಎಸ್ಟೇಟ್, ಗೋಲ್ಡ್ ಬ್ಯುಸಿ ನೆಸ್, ಕೆಸಿನೋ ವ್ಯವಹಾರ ಇರುವುದಾಗಿ ನಂಬಿಸಿದ್ದಳು.

2022ರಿಂದ 2024ರವೆಗೂ ಹೂಡಿಕೆ, ಮತ್ತಿತರ ಕಾರಣಗಳನ್ನು ನೀಡಿ ಹಂತಹಂತವಾಗಿ 2.52 ಕೋಟಿ ರೂ ಹಣ ಹಾಗೂ 2.50 ಕೋಟಿ ಮೌಲ್ಯದ ಒಟ್ಟು 2 ಕೆ.ಜಿ 350 ಗ್ರಾಂ ಚಿನ್ನಾಭರಣ ಪಡೆದಿದ್ದ ಐಶ್ವರ್ಯಾ ಗೌಡ ಹಿಂದಿರುಗಿಸದೇ ಸಬೂಬು ಹೇಳುತ್ತಿದ್ದಳು. ಈ ನಡುವೆ ಇತ್ತೀಚಿಗೆ ಐಶ್ವರ್ಯಾ ಗೌಡ ಮತ್ತಿತರ ವಿರುದ್ಧ ಚಂದ್ರಾ ಲೇಔಟ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುವುದು ಹಾಗೂ ಆರೋಪಿಗಳು ಜಾಮೀನು ಪಡೆದಿರುವುದು ಮಂಜುಳಾ ಪಾಟೀಲ್ ಅವರ ಗಮನಕ್ಕೆ ಬಂದಿತ್ತು.

# ಅರಣ್ಯ ಒತ್ತುವರಿ, ಕಳ್ಳಬೇಟೆ ತಡೆಗೆ ಗರುಡಾಕ್ಷಿ ಅಸ್ತ್ರ: ಈಶ್ವರ ಖಂಡ್ರೆ




**ಬೆಂಗಳೂರು:** ಇಂದಿನ ಆಧುನಿಕ ಯುಗಮಾನದ ಅಗತ್ಯಕ್ಕೆ ಅನುಗುಣವಾಗಿ ಅರಣ್ಯ ಇಲಾಖೆ ಬದಲಾಗುತ್ತಿದ್ದು, ಅರಣ್ಯ ಒತ್ತುವರಿ, ಅಕ್ರಮ ಮರ ಕಡಿತಲೆ, ಕಳ್ಳಬೇಟೆ, ಅತಿಕ್ರಮ ಪ್ರವೇಶ ಇತ್ಯಾದಿ ಅರಣ್ಯ ಅಪರಾಧಗಳಿಗೆ ಇನ್ನು ಮುಂದೆ ಗರುಡಾಕ್ಷಿ ಅಸ್ತ್ರ ಪ್ರಯೋಗಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದರು.

ವಿಧಾನಸೌಧದಲ್ಲಿಂದು ಅರಣ್ಯ ಇಲಾಖೆ ಘುಟಜ ಖಜಿಜ ಖಿಡಿಣಣ ಠಜಿ ಖಟಜುಚಿ (ಘುಖಿಖ) ಸಹಯೋಗದೊಂದಿಗೆ ಅಭಿವೃದ್ಧಿಪಡಿಸಿರುವ ಗರುಡಾಕ್ಷಿ ಆನ್‌ಲೈನ್ / ಡಿಜಿಟಲ್ ಈಖಖ ವ್ಯವಸ್ಥೆಗೆ ಚಾಲನೆ ನೀಡಿ ಮಾತನಾಡಿದ ಅವರು, ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಅರಣ್ಯ ಅಪರಾಧ ತಡೆಯಲು, ತಪ್ಪಿತಸ್ಥರಿಗೆ ಶಿಕ್ಷೆ ಆಗುವುದನ್ನು ಖಾತ್ರಿ ಪಡಿಸಲು ಹಾಗೂ ಆ ಮೂಲಕ ಅರಣ್ಯ ಮತ್ತು ವನ್ಯಜೀವಿ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಈ ವ್ಯವಸ್ಥೆ ಜಾರಿಗೆ ತರಲಾಗಿದೆ ಎಂದರು. ತಾವು ಅರಣ್ಯ ಸಚಿವರಾದ ಬಳಿಕ ಇಲಾಖೆಯಲ್ಲಿ ಹಂತ ಹಂತವಾಗಿ ಸುಧಾರಣೆ ತರುತ್ತಿದ್ದು, ಪೊಲೀಸ್ ಇಲಾಖೆಯಲ್ಲಿ ಇರುವ ರೀತಿಯಲ್ಲೇ ಅರಣ್ಯ ಇಲಾಖೆಯ್ಲೂ ಆನ್ ಲೈನ್ ಎಫ್.ಐ.ಆರ್. ವ್ಯವಸ್ಥೆ ಜಾರಿಗೆ ತರಲು ತಂತ್ರಾಂಶ ರೂಪಿಸುವಂತೆ 22.09.2023ರಲ್ಲಿಯೇ ಸೂಚನೆ ನೀಡಿದ್ದೆ, ಇಂದು ಅದು ಕಾರ್ಯರೂಪಕ್ಕೆ ಬಂದಿದೆ ಎಂದರು. ಈ ತಂತ್ರಾಂಶ ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣಾ ಕಾನೂನುಗಳ ಅಡಿಯಲ್ಲಿ ಅರಣ್ಯ ಅಪರಾಧ ಪ್ರಕರಣಗಳನ್ನು ನಿರ್ವಹಿಸಲು ಮತ್ತು ಪರಿಣಾಮಕಾರಿಯಾಗಿ ಮೇಲ್ವಿಚಾರಣೆ ಮಾಡಲು ಸಹಕಾರಿಯಾಗಲಿದೆ.

ಪ್ರಸ್ತುತ ಗರುಡಾಕ್ಷಿ ತಂತ್ರಾಂಶವನ್ನು ಪ್ರಾಯೋಗಿಕವಾಗಿ ಬೆಂಗಳೂರು ನಗರ ವಿಭಾಗ, ಬೆಂಗಳೂರು ಅರಣ್ಯ ಸಂಚಾರಿ ದಳ ವಿಭಾಗ, ಭದ್ರಾವತಿ ವಿಭಾಗ, ಶಿರಸಿ ವಿಭಾಗ ಮತ್ತು ಮಲೈ ಮಹದೇಶ್ವರ ವನ್ಯ ಜೀವಿ ವಿಭಾಗಗಳಲ್ಲಿ ಪ್ರಾಯೋಗಿಕವಾಗಿ (ಕುಟಂಣ) ಜಾರಿಗೊಳಿಸಲಾಗುತ್ತದೆ. ಈ ತಂತ್ರಾಂಶದ ಕಾರ್ಯನಿರ್ವಹಣೆಯ ಬಗ್ಗೆ ಕ್ಷೇತ್ರ ಮಟ್ಟದ ಪ್ರತಿಕ್ರಿಯೆ ಆಧಾರದ ಮೇಲೆ ಇನ್ನೂ ಹೆಚ್ಚು ಕ್ರಿಯಾಶೀಲಗೊಳಿಸಿ ಹಂತ ಹಂತವಾಗಿ ರಾಜ್ಯದ ಎಲ್ಲ ವಿಭಾಗಕ್ಕೂ ವಿಸ್ತರಿಸಲಾಗುವುದು ಮತ್ತು ಆಫ್.ಐ.ಆರ್. ಅನ್ನೂ ಗರುಡಾಕ್ಷಿ ತಂತ್ರಾಂಶದ ಮೂಲಕವೇ ದಾಖಲಿಸುವುದನ್ನು ಕಡ್ಡಾಯಗೊಳಿಸಲಾಗುವುದು ಎಂದರು.

ಗರುಡಾಕ್ಷಿ ಆನ್ ಲೈನ್ ಎಫ್..ಆರ್. ವ್ಯವಸ್ಥೆ ಅರಣ್ಯ ಮತ್ತು ವನ್ಯಜೀವಿ ಅಪರಾಧಗಳ ನಿರ್ವಹಣೆಯಲ್ಲಿ ಅತ್ಯಂತ ಮಹತ್ವದ ಮೈಲಿಗಲ್ಲಾಗಿದ್ದು, ಪಾರದರ್ಶಕ, ಸುವ್ಯವಸ್ಥಿತ, ಪರಿಹಾರವಾಗಿ ಅರಣ್ಯ ಅಪರಾಧ ತಡೆಯಲು ಇಲಾಖೆಗೆ ಬಲ ತುಂಬುತ್ತದೆ. ಇಷ್ಟು ದಿನ ಎ–4 ಹಾಳೆಯ ಅರ್ಧಭಾಗದಷ್ಟು ಅಳತೆಯ ಎಫ್.ಐ.ಆರ್. ನಲ್ಲಿ ಕಾರ್ಬನ್ ಶೀಟ್ ಹಾಕಿ ಕೈಬರಹದಲ್ಲಿ ಪ್ರಕರಣ ದಾಖಲಿಸಲಾಗುತ್ತಿತ್ತು. ಸಾವಿರಾರು ಪ್ರಕರಣಗಳು ದಾಖಲಾದರೂ ಎಷ್ಟು ಪ್ರಕರಣದಲ್ಲಿ ಚಾರ್ಜ್ ಶೀಟ್ ಹಾಕಲಾಗತ್ತಿದೆ ಎಂದು ಕಾಲ ಕಾಲಕ್ಕೆ ಮೇಲ್ವಿಚಾರಣೆ ಮಾಡಲು ಆಗುತ್ತಿರಲಿಲ್ಲ. ಆನ್ ಲೈನ್ ಎಫ್.ಐ.ಆರ್. ವ್ಯವಸ್ಥೆ ಜಾರಿ ಆದ ಮೇಲೆ ಎಷ್ಟು ಪ್ರಕರಣದಲ್ಲಿ ಚಾರ್ಜ್ ಶೀಟ್ ಹಾಕಲಾಗಿದೆ, ಇಲ್ಲ ಎಂಬುದು ತಿಳಿಯುತ್ತದೆ. ಇದನ್ನು ಇಲಾಖೆಯ ಅಧಿಕಾರಿಗಳು ತಾವು ಕುಳಿತ ಜಾಗದಿಂದಲೇ ಎಲ್ಲ ವಲಯಗಳ ಅರಣ್ಯ ಅಪರಾಧ ಪ್ರಕರಣಗಳ ಬಗ್ಗೆ ನಿಗಾ ಇಡಬಹುದು ಎಂದರು.

**ಅಪರಾಧಿಗಳಿಗೆ ಶಿಕ್ಷೆ ಖಚಿತ:**

ಅರಣ್ಯ ಅಪರಾಧ ಕುರಿತಂತೆ ದೂರು ಕೊಟ್ಟವರಿಗೆ ಎಫ್.ಐ.ಆರ್. ಪ್ರತಿ ಲಭಿಸಲಿದೆ, ಜೊತೆಗೆ ಜಾರ್ಜ್ ಶೀಟ್ ಹಾಕಲಾಗಿದೆಯೋ ಇಲ್ಲವೋ ಎಂಬುದನ್ನು ತಿಳಿಯಲು ಅವಕಾಶ ಆಗುತ್ತದೆ. ಚಾರ್ಜ್ ಶೀಟ್ ಸಲ್ಲಿಕೆ ಆದ ಕೂಡಲೇ ನ್ಯಾಯಾಲಯದಲ್ಲಿ ಅಪರಾಧ ಸಂಖ್ಯೆ (ಸಿಸಿ ನಂಬರ್) ದಾಖಲಾಗುತ್ತದೆ, ವಿಚಾರಣೆ ನಡೆದು ತಪ್ಪಿತಸ್ಥರಿಗೆ ಶಿಕ್ಷೆ ಆಗುತ್ತದೆ ಎಂದು ವಿವರಿಸಿದರು.

ಅರಣ್ಯ ಭೂಮಿ ಒತ್ತುವರಿ, ಅಕ್ರಮ ಮರ ಕಡಿತಲೆ, ವನ್ಯಜೀವಿಗಳ ಅಕ್ರಮ ಬೇಟೆಗೆ ಸಂಬಂಧಿಸಿದಂತೆ ಆನ್ ಲೈನ್ ಎಫ್.ಐ.ಆರ್. ಹಾಕಿದರೆ, ಚಾರ್ಜ್ ಶೀಟ್ ಹಾಕಲೇ ಬೇಕಾಗತ್ತದೆ. ಲಾಂಗ್ ಪೆಂಡೆನ್ಸಿ ಇರಲು ಸಾಧ್ಯವಿಲ್ಲ. ಈ ಬಗ್ಗೆ ಹೈಕೋರ್ಟ್ ಕೂಡ ಸೂಚನೆ ನೀಡುತ್ತದೆ. ಇದರಿಂದ ಭೂ ಕಬಳಿಕೆದಾರರಿಗೆ ಶಿಕ್ಷೆ ಆಗುತ್ತದೆ. ಹೀಗಾಗಿ ಅರಣ್ಯ ಅಪರಾಧಗಳ ಸಂಖ್ಯೆ ಗಣನೀಯವಾಗಿ ತಗ್ಗುತ್ತದೆ ಎಂದರು. ವಲಯ ಅರಣ್ಯಾಧಿಕಾರಿ (ಆರ್.ಎಫ್.ಓ.)ಗಿಂತ ಕಡಿಮೆ ದರ್ಜೆಯ ಅಧಿಕಾರಿಗಳು ಈ ಹಿಂದೆ ಎಫ್.ಐ.ಆರ್. ಹಾಕುತ್ತಿದ್ದರು. ತಾಂತ್ರಿಕ ಕಾರಣದ ಮೇಲೆ ಪ್ರಕರಣಗಳು ನ್ಯಾಯಾಲಯದಲ್ಲಿ ವಜಾ ಆಗುತ್ತಿತ್ತು. ಇನ್ನು ಮುಂದೆ ಹಾಗೆ ಆಗಲು ಸಾಧ್ಯವಿರುವುದಿಲ್ಲ. ಈ ತಂತ್ರಾಂಶದಲ್ಲಿ ಆರ್.ಎಫ್.ಓ. ಡಿಜಿಟಲ್ ಸಹಿ ಇರುತ್ತದೆ ಎಂದರು.

ಅರಣ್ಯ ಭೂಮಿ ತನ್ನ ಸ್ವರೂಪ ಕಳೆದುಕೊಂಡಿದ್ದರೂ ಮತ್ತೆ ಅರಣ್ಯ ಬೆಳೆಸಬಹುದು. ಆದರೆ ಅರಣ್ಯಕ್ಕೆ ಭೂಮಿಯೇ ಇಲ್ಲದಿದ್ದರೆ ಅರಣ್ಯ ಬೆಳೆಸಲು ಸಾಧ್ಯವಾಗುವುದಿಲ್ಲ. ಹೀಗಾಗಿ ಅರಣ್ಯ ಒತ್ತುವರಿ ಆಗದಂತೆ ತಡೆಯಲು ಆನ್ ಲೈನ್ ಎಫ್.ಐ.ಆರ್. ಕ್ರಾಂತಿಕಾರಿ ಹೆಜ್ಜೆಯಾಗುತ್ತದೆ.

**ಏನು ಪ್ರಯೋಜನ:**


ಈ ತಂತ್ರಾಂಶದಲ್ಲಿ ಪ್ರಕರಣಗಳ ದಾಖಲಿಸುವಿಕೆ, ತನಿಖೆ ಮತ್ತು ಅಂತಿಮ ನಿರ್ಣಯದವರೆಗಿನ ಪ್ರತಿ ಹಂತವನ್ನು ನಿರ್ವಹಿಸಲು ಆಸ್ಪದ ಕಲ್ಪಿಸಲಾಗಿದ್ದು ಪ್ರಕರಣಗಳ ನಿರ್ವಹಣೆಗೆ ಸಂಬಂಧಿಸಿದ ಪ್ರಗತಿಯನ್ನು ಉಸ್ತುವಾರಿ ಮಾಡಲು ಸಹಕಾರಿಯಾಗಿರುತ್ತದೆ.ಪ್ರಕರಣಗಳ ನಿರ್ವಹಣೆಯಲ್ಲಿ ದಾಖಲಿಸಬೇಕಿರುವ ಮತ್ತು ಸಲ್ಲಿಸಬೇಕಿರುವ ವಿವಿಧ ವರದಿ ಮತ್ತು ನಮೂನೆಗಳನ್ನು ತಂತ್ರಾಂಶದಲ್ಲಿ ಸ್ವಯಂ ಸೃಜನೆಗೊಳ್ಳುವಂತೆ ಅಭಿವೃದ್ಧಿಪಡಿಸಲಾಗಿದ್ದು, ಅಧಿಕಾರಿಗಳು ತ್ವರಿತವಾಗಿ, ವಿಳಂಬವಿಲ್ಲದೇ ಕಾರ್ಯ ನಿರ್ವಹಿಸಲು ಅನುವು ಮಾಡಿರುತ್ತದೆ. ಈ ಬಳಕೆದಾರ–ಸ್ನೇಹಿ ಉಪಕ್ರಮವು ಅರಣ್ಯ ಕಾನೂನು ಜಾರಿ ಮತ್ತು ಸಂರಕ್ಷಣೆಗೆ ಸಂಬಂಧಿಸಿದ ವಿವಿಧ ಪ್ರಕ್ರಿಯೆಗಳನ್ನು ಪಾರದರ್ಶಕವಾಗಿ ಟ್ರ್ಯಾಕಿಂಗ್ ಮಾಡಲು ಅವಕಾಶವಿರುವ ಸಿಸ್ಟಮ್ ಆಗಿದ್ದು ಇಲಾಖೆಯ ಕಾರ್ಯಾಚರಣೆಗಳನ್ನು ಆಧುನೀಕರಿಸಲು ಮತ್ತು ಉತ್ತಮಗೊಳಿಸಲು ಹೆಚ್ಚು ಪರಿಣಾಮಕಾರಿಯಾದ ಪರಿಹಾರವಾಗಿದೆ.

ಇಲಾಖೆಯ ವಿವಿಧ ಘಟಕಗಳಲ್ಲಿ ಈಗಾಗಲೇ ದಾಖಲಿಸಲಾಗಿರುವ ಹಾಗೂ ಹಾಲಿ ಚಾಲ್ತಿಯಲ್ಲಿರುವ ಪ್ರಕರಣಗಳನ್ನು ಗಣಕೀಕರಿಸಲು ಮೊದಲ ಹಂತದಲ್ಲಿ ಕ್ರಮಕೈಗೊಳ್ಳಲಾಗಿದ್ದು, "ಐಜರಚಿಛಿಥಿ ಒಂಜಣಟಜ" ಅನ್ನು ಜಾರಿ ಮಾಡಲಾಗಿರುತ್ತದೆ ಮತ್ತು ಪ್ರಕರಣಗಳನ್ನು ಗಣಕೀಕರಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ, ಈಗಾಗಕೆ 40000 ಪ್ರಕರಣದ ದಾಖಲೀಕರಣ ಆಗಿದೆ ಎಂದು ತಿಳಿಸಿದರು.ಇದರ ಮುಂದಿನ ಹೆಗ್ಗುರುತಾಗಿ ಔಟಿಟುಟಿಜ ಈಂಡಿಞಣ ಔಜಿಜಿಜಟಿಛಿಜ ಖಜರ್ರುಣಡಿಚಿಣುಂಟ ಮಾಡ್ಯೂಲ್ ಅನ್ನು ಅಭಿವೃದ್ಧಿಪಡಿಸಲಾಗಿದ್ದು ಇದರಡಿ ಅರಣ್ಯ/ವನ್ಯಜೀವಿ ಅಪರಾಧ ಪ್ರಕರಣಗಳನ್ನು ಆನ್ ಲೈನ್ ಮೂಲಕ ದಾಖಲಿಸಲು, ನ್ಯಾಯಾಲಯದ ಅನುಮತಿಗಳನ್ನು ಪಡೆಯಲು, ಜಪ್ತಿಗಳನ್ನು ನಿರ್ವಹಿಸಲು, ಆಪಾದಿತರ ದಸ್ತಗಿರಿ ಚರ್ಯೆಗಳನ್ನು ದಾಖಲಿಸಲು ಅವಕಾಶವಿರುತ್ತದೆ ಎಂದರು.

Live Offence Registration Module ನಿಯೋಜನೆಯೊಂದಿಗೆ ತನಿಖೆ ಮತ್ತು ವರದಿ ಹಾಗೂ ವಿಶ್ಲೇಷಣೆ) ಮಾಡ್ಯೂಲ್‌ಗಳನ್ನು ಕೂಡ ಅಭಿವೃದ್ಧಿಪಡಿಸಿ ನಿಯೋಜಿಸಲು ಹಂತ ಹಂತವಾಗಿ ಕ್ರಮಕೈಗೊಳ್ಳಲು ಉದ್ದೇಶಿಸಲಾಗಿದೆ. ಜೊತೆಗೆ ಅರಣ್ಯ ಅಪರಾಧಗಳ ಕುರಿತಂತೆ ಸಾರ್ವಜನಿಕರು ತಮ್ಮ ಮೊಬೈಲ್ ಸಂಖ್ಯೆ ಅಥವಾ ಇ–ಮೇಲ್ ವಿಳಾಸದೊಂದಿಗೆ ಲಾ□□□ನ್ ಆಗಿ ಆನ್ ಲೈನ್ ಮೂಲಕವೇ ದೂರು ದಾಖಲಿಸಲೂ ಅವಕಾಶ ಕಲ್ಪಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ.

**ಆರೋಗ್ಯಕರ ಸ್ಪರ್ಧೆ:** ಯಾವ ವಲಯದಲ್ಲಿ ಹೆಚ್ಚು ಆನ್ ಲೈನ್ ಎಫ್.ಐ.ಆರ್. ದಾಖಲಿಸಿ, ನಿಗದಿತ ಕಾಲಮಿತಿಯೊಳಗೆ ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಸುತ್ತಾರೋ ಆ ವಲಯದ ಆರ್.ಎಫ್.ಓ.ಗಳಿಗೆ ಬಡ್ತಿ ನೀಡುವಾಗ, ಇದನ್ನು ದಕ್ಷತೆಯ ಮಾನದಂಡವಾಗಿ ಪರಿಗಣಿಸಲೂ ಅನುಕೂಲ ಆಗುತ್ತದೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು. ಕಾರ್ಯಕ್ರಮದಲ್ಲಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪ್ರವೇಜ್, ಅರಣ್ಯಪಡೆ ಮುಖ್ಯಸ್ಥರು ಹಾಗೂ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಬ್ರಿಜೇಶ್ ದೀಕ್ಷಿತ್, ವನ್ಯ ಜೀವಿ ವಿಭಾಗದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಸುಭಾಷ್ ಮಾಲ್ಕಡೆ ಮತ್ತಿತರರು ಹಾಜರಿದ್ದರು.

# ಹಸಿವು, ಅರಿವು, ಮರೆವು ಸಾವು, ದೇವರು ಕೊಟ್ಟ ವರ: ಬಸವರಾಜ ಬೊಮ್ಮಾಯಿ



ಹಾವೇರಿ: ಬಸವಾದಿ ಶರಣರ ವಿಚಾರ ಕನಿಷ್ಠ ಪಾಲನೆ ಮಾಡಿದರೆ ಪರಮ ಪೂಜ್ಯರ ಗೌರವ ಸಮರ್ಪಣೆ ಮಾಡಿದಂತೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಹಾವೇರಿ ಹುಕ್ಕೇರಿ ಮಠದ ನಮ್ಮೂರ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಹಾವೇರಿಯ ದಿವ್ಯ ಪರಂಪರೆ ಇರುವ ಸುಪ್ರಸಿದ್ದ, ಈ ಭಾಗದ ನಾಡಿಗೆ ದಿವ್ಯ ಮಾರ್ಗದರ್ಶನ ತೋರಿದಂತಹ, ಬಸವಾದಿ ಶರಣದ ಕಾಯಕ ಕಲ್ಪನೆ ಕೊಟ್ಟಿರುವ ಹುಕ್ಕೇರಿ ಮಠದ ಜಾತ್ರಾ ಮಹೋತ್ಸವ ಸಾಹಿತ್ಯಿಕ ಸಾಂಸ್ಕೃತಿಕ, ಭಕ್ತಿಯ ಹೊನಲು ಚೆಲ್ಲುವ ಕಾರ್ಯಕ್ರಮ. ಶಿವಬಸವ ಮಹಾಸ್ವಾಮಿಗಳ, ಶಿವಲಿಂಗ ಮಹಾಸ್ವಾಮಿಗಳ ಪುಣ್ಯ ದಿನಾಚರಣೆ ಕಾರ್ಯಕ್ರಮ ಇದಾಗಿದೆ ಎಂದು ಹೇಳಿದರು.

ಈ ಭಾಗದ ನೆಲವನ್ನು ಪಾವನ ಮಾಡಿದವರು. ಆಧುನಿಕ ಕಾಲದಲ್ಲಿ ಭಕ್ತಿ ಎಂಬ ಜ್ಯೋತಿಯನ್ನು ನಿರಂತರವಾಗಿ ಜೀವಂತ ಇಟ್ಟಿರುವಂತವರು. ಸಮಾಜದಲ್ಲಿ ಸದ್ಭಕ್ತಿಯ ಜೊತೆಗೆ ಸದ್ಭಾವವನ್ನು, ಸದ್ವಿಚಾರ, ಸದ್ ಆಚಾರವನ್ನು ನಿರಂತರವಾಗಿ ಇರುವಂತೆ ಮಾಡಿರುವ ಪರಮ ಪೂಜ್ಯರ ಪುಣ್ಯ ಸ್ಮರಣೆಯ ಜೊತೆಗೆ ಅವರ ವಿಚಾರಗಳ ಸ್ಮರಣೆ ಮಾಡಲು ಹಾವೇರಿಯ ನಮ್ಮೂರ ಉತ್ಸವ ನಡೆಯುತ್ತಿದೆ. ಈ ಮಠದ ಪರಂಪರೆಯನ್ನು ಬಹಳ ಶ್ರದ್ದೆಯಿಂದ, ದೂರದೃಷ್ಟಿಯಿಂದ ಶ್ರೀಮಠದ ಪರಮಪೂಜ್ಯ ಸದಾಶಿವ ಮಹಾಸ್ವಾಮಿಗಳು ಮುಂದುವರೆಸಿಕೊಂಡು ಬಂದಿದ್ದಾರೆ. ಅವರು ಪಟ್ಟಾಧೀಶರಾಗಿದ್ದಾಗ ಅತ್ಯಂತ ಸಣ್ಣ ವಯಸ್ಸು. ಶ್ರೇಷ್ಠ ಗುರುಗಳಲ್ಲಿ ಒಬ್ಬರು. ಅತಿ ಸಣ್ಣ ಸಮಯದಲ್ಲಿ ಬೆಳೆದು ನಿಂತಿರುವುದು ನಮಗೆಲ್ಲ ಸಂತೋಷ ಮತ್ತು ಹೆಮ್ಮೆ. ನಾನು ಈಗ ಅವರ ತಾಯಿಯನ್ನು ನೋಡಿದೆ. ಅವರಲ್ಲಿ ನನಗೆ ದೇವಿಯಂತೆ ಕಂಡರು. ಅವರು ಗುರುವಿಗೆ ಬಂದು ಕಾಲಿಗೆ ನಮಸ್ಕಾರ ಮಾಡಿದರು. ನಮ್ಮದು ಎಂತಹ ಸಂಸ್ಕೃತಿ ನೋಡಿ, ತಾಯಿ ಮಗ ಗುರುವಾದಾಗ ಗುರುವಿಗೆ ನಮಸ್ಕಾರ ಮಾಡಿರುವುದು. ಭವಿಷ್ಯದ ಕ್ರಾಂತಿಯ ನೇತೃತ್ತ ವಹಿಸಿಕೊಂಡಿದ್ದಾರೆ ಎನ್ನುವುದು ನನ್ನ ಭಾವನೆ, ಭಕ್ತಿಯ ಕ್ರಾಂತಿ, ಆಧ್ಯಾತ್ಮಿಕ ಕ್ರಾಂತಿಯ ನೇತೃತ್ವ ವಹಿಸಿಕೊಂಡಿದ್ದಾರೆ.

ವಿಶ್ವದಲ್ಲಿ ಅತಿ ಹೆಚ್ಚು ಭಕ್ತಿಯ ಕಾಂತಿಯಾಗಿರುವುದು ಭಾರತದಲ್ಲಿ ಪ್ರತಿ ನೂರು ವರ್ಷಕ್ಕೆ ಒಂದು ಕಾಂತಿಯಾಗಿವೆ. ಭಕ್ತಿಯ ಕ್ರಾಂತಿ ಶ್ರೀಮಠದ ನೇತೃತ್ವದಲ್ಲಿ ನಡೆಯುತ್ತಿದೆ ಎನ್ನುವುದು ನನ್ನ ಭಾವನೆ. ಶಿರಹಟ್ಟಿ ಫಕೀರೇಶ್ವರ ಸ್ವಾಮೀಜಿಗಳು ಎಲ್ಲರಿಗೂ ಮಾದರಿಯಾಗಿದ್ದಾರೆ. ಅವರ ಸಾನಿಧ್ಯದಲ್ಲಿ ಮಾತನಾಡಲು ನನಗೆ ಅವಕಾಶ ಸಿಕ್ಕಿರುವುದು ನನ್ನ ಭಾಗ್ಯ ಎಂದು ಹೇಳಿದರು.

ಈ ಜಾತ್ರಾ ಮಹೋತ್ಸವ ಒಂದು ನೆಪ. ಜಾತ್ರಾ ಮಹೋತ್ಸವದಲ್ಲಿ ಭಕ್ತರ ಮಧ್ಯದಲ್ಲಿ ಕುಳಿತಿರುವ ಸಾನಿಧ್ಯಗಳು, ಭವಿಷ್ಯದ ಸಾನಿಧ್ಯಗಳು, ಬದಲಾಗುತ್ತಿರುವ ನಮ್ಮ ನಾಡಿಗೆ ಹೊಸ ಚಿಂತನೆಯ, ಆಧ್ಯಾತ್ಮಿಕ ಚಿಂತನೆ ಅಗತ್ಯವಿದೆ. ಅದು ಈ ಸ್ವಾಮೀಜಿಗಳ ನೇತೃತ್ವದಲ್ಲಿ ಸಾಧ್ಯವಿದೆ. ಈ ನಾಡನ್ನು ಸುಸಂಸ್ಕೃತವಾಗಿ ಕಟ್ಟಲು ಮಹತ್ತದ ಪಾತ್ರ ವಹಿಸುತ್ತಾರೆ ಎನ್ನುವುದು ನನ್ನ ಭಾವನೆ ಎಂದರು

ಬಸವಾದಿ ಶರಣರು ಬದುಕನ್ನು ಬಹಳ ಸರಳವಾಗಿ ಬದಲಾವಣೆ ಮಾಡಿದ್ದಾರೆ. ನಮಗೆ ನಮ್ಮ ಬದುಕು ಕಷ್ಟಕರ ಅನಿಸುತ್ತದೆ. ಕೆಲವೊಮ್ಮೆ ಜಿಗುಪ್ಸೆ ಆಗುತ್ತದೆ. ಆದರೆ, ಅದು ಸತ್ಯ ಅಲ್ಲ. ಸತ್ಕ ಈ ಬದುಕು ಬಹಳ ಸರಳವಾಗಿದೆ. ಬದುಕು ಸತ್ಯ ಅಸತ್ಯದ ಮಧ್ಯ ಇರುವಂತದ್ದು, ನಮ್ಮ ನುಡಿ ಪಾಪ ಪುಣ್ಯದ ನಡುವೆ ಇದೆ. ಧರ್ಮದ ಬಗ್ಗೆ ಬಹಳಷ್ಟು ಗೊಂದಲ ಹುಟ್ಟಿಸುವ ಈ ಸಂದರ್ಭದಲ್ಲಿ ದಯವೇ ಧರ್ಮದ ಮೂಲವಯ್ಯ ಎಂದು ನಮ್ಮ ಶರಣರು ಸರಳವಾಗಿ ಹೇಳಿದ್ದಾರೆ.

ಕಾಯಕವೇ ಕೈಲಾಸ ಎಂದರೆ ವರ್ಕ ಇಸ್ ವರ್ಸಿಪ್ ಅಲ್ಲ, ಎಲ್ಲ ಜೀವಾತ್ಮಗಳಲ್ಲಿ ನಾವು ಲೇಸು ನೋಡಬೇಕು. ಇಂತಹ ಸುಸಂಸ್ಕೃತ ಹಿನ್ನಲೆ ಇದ್ದರೂ ಕೂಡ ಆಧುನಿಕ ಸಮಾಜದ ಒತ್ತಡಗಳಿಗೆ ನಮ್ಮನ್ನು ನಾವೇ ರಾಜೀ ಮಾಡಿಕೊಳ್ಳುತ್ತೇವೆ. ಜೀವನದಲ್ಲಿ ಎರಡು ವಿಷಯ ನಡೆಸುವುದು ಬಹಳ ಕಷ್ಟ ನಾವು ಹುಟ್ಟಿದಾಗ ಚಿಕ್ಕಮಕ್ಕಳ ಫೋಟೊ ಬಹಳ ಮುದ್ದಾಗಿ ಮತ್ತು ಮುಗ್ಧವಾಗಿರುತ್ತವೆ. ಹುಟ್ಟಿದಾಗಿರುವ ಮುಗ್ಧತೆ ಕೊನೆವರೆಗೂ ಉಳಿಸಿಕೊಂಡು ಹೋಗುವುದು ಬಹಳ ಕಷ್ಟ ನಮ್ಮ ಮನಸ್ಸಿನ ಭಾವಗಳು ಮುಖದಲ್ಲಿ ಅಭಿವ್ಯಕ್ತವಾಗುತ್ತವೆ. ಮುಗ್ಧತೆ ಕಾಪಾಡಿಕೊಂಡು ಹೋಗುವುದು ಬಹಳ ಸವಾಲು. ಎರಡನೇಯದ್ದು ಆತ್ಮಸಾಕ್ಷಿಯಾಗಿ ನಡೆದುಕೊಳ್ಳುವುದು ಬಹಳ ಕಷ್ಟ, ರಾಜಕಾರಣಿಗಳು ಆತ್ಮಸಾಕ್ಷಿಯನ್ನು ದೇವರ ಜಗುಲಿಗೆ ಕಟ್ಟಿ ಹೋಗುತ್ತೇವೆ. ಇವೆರಡು ಬಹಳ ದೊಡ್ಡ ಸವಾಲು. ಇವೆರಡನ್ನು ಯಾರು ಜಯಸುತ್ತಾರೆ. ಅವರು ಯೋಗಿಗಳು. ತಪಸ್ಸು ಅಂದರೆ, ಕಣ್ಣು ಮುಚ್ಚಿ ಧ್ಯಾನ ಮಾಡುವುದಲ್ಲ. ನಿನ್ನ ಒಳಧ್ವನಿಯನ್ನು ನೀನು ಕೇಳುವುದು. ಆಗ ಅಷ್ಟು ಪರಿಶುದ್ಧ ಇರುತ್ತೀರಿ. ದೇವರ ಜಗುಲಿಯ ಮುಂದೆ ಐದು ನಿಮಿಷ ಯಾವುದೇ ದೇವರನ್ನು ನೆನೆಸದೇ ಸುಮ್ಮನೆ ಕುಳಿತರೆ ಅಮೃತ ಗಳಿಗೆ. ಹೃದಯ ಮತ್ತು ಬುದ್ಧಿ ಶಕ್ತಿ ಒಂದಾದಾಗ ಅಮೃತ ಗಳಿಗೆ. ಪ್ರತಿ ದಿನ ಅಮೃತ ಗಳಿಗೆ ಪಡೆದರೆ ನೀವು ಧನ್ಯ. ಇಂತಹ ದಿವ್ಯ ಪರಂಪರೆ ಸಮಾಜದಲ್ಲಿರುವ ಎಲ್ಲ ಸಮಸ್ಯೆಗಳಿಗೆ ಪರಿಹಾರ ಇದೆ. ಸಮಸ್ಯೆಯ ಜೊತೆಗೆ ಪರಿಹಾರ ಇರುತ್ತದೆ ಎಂದರು

ಇಂದಿನ ಎಲ್ಲ ಸಮಸ್ಯೆಗಳಿಗೆ ಉತ್ತರ ಇದೆ. ಅದನ್ನು ಅರ್ಥ ಮಾಡಿಕೊಂಡು ಹೋದರೆ ಪರಸ್ಪರ ಪ್ರೀತಿ ವಿಶ್ವಾಸದಿಂದ ಜೀವನ ಮಾಡಲು ಸಾಧ್ಯವಿದೆ. ನಾವು ಇತ್ತೀಚಿನ ದಿನಗಳಲ್ಲಿ ನಾಗರೀಕತೆ ಸಂಸ್ಕೃತಿ ವ್ಯತ್ಯಾಸ ನಮಗೆ ಗೊತ್ತಿಲ್ಲ. ಪಾಶ್ಚಿಮಾತ್ಯದ ಒಬ್ಬ ತತ್ವಜ್ಞಾನಿ ನಮ್ಮ ಬಳಿ ಏನಿದೆಯೋ ಅದು ನಾಗರೀಕತೆ, ನಮ್ಮ ಬಳಿ ಸೈಕಲ್ ಇತ್ತು. ನಂತರ ಕಾರು ಬಂದು, ವಿಮಾನ ಬಂದು. ಬೀಸಿಕಲ್ಲು ಇತ್ತು. ಮಿಕ್ಕಿ ಬಂತು. ನಾಗರೀಕತೆ ಬೆಳೆದಿದೆ. ಜಗತ್ತು ಬೆಳೆದಿದೆ. ಅದು ನಾಗರಿಕತೆ, ನಾಗರೀಕತೆಯ ಬೆಳವಣಿಗೆಯಲ್ಲಿ ನಾವೇನಾಗಿದ್ದೇವೆ ಅದು ಸಂಸ್ಕೃತಿ. ನಮ್ಮ ಆಚಾರ, ವಿಚಾರ, ಭಕ್ತಿ ಭಾವ ಬದಲಾವಣೆ ಮಾಡದಿದ್ದರೆ ದಿವ್ಯ ಜ್ಯೋತಿ ಬೆಳಗುತ್ತದೆ ಎಂದರು

ಬಸವಾದಿ ಶರಣರು ಎಂಟು ದಿಕ್ಕುಗಳಲ್ಲಿ ವಚನಗಳನ್ನು ಪಸರಿಸಿದರು. ಈ ನೆಲದಲ್ಲಿ ಬಸವಾದಿ ಶರಣರ ಚಿಂತನೆಗಳನ್ನು ಹಾಕಿದ್ದು, ಅವೇ ಶ್ರೀಮಠಗಳಾಗಿ ಬೆಳೆದಿವೆ. ಮಾನವೀಯತೆಯನ್ನು ನೋಡುವ ಪರಂಪರೆ ಯಾವ ರಾಜ್ಯ ಹಾಗೂ ವಿದೇಶದಲ್ಲಿ ಇಲ್ಲ. ನಮ್ಮಲ್ಲಿ ಜಿಜ್ಞಾಸೆ ಇದೆ. ಬಸವಣ್ಣ ಇಂದಿಗೂ ಪ್ರಸ್ತುತ ಎಂದು ಹೇಳುತ್ತಾರೆ. ಈ ಬಗ್ಗೆ ವಿಚಾರ ಮಾಡಬೇಕು. ಬಸವಣ್ಣ ದೇವರು ಮತ್ತು ಭಕ್ತರ ನಡುವೆ ಮಧ್ಯಸ್ಥಿಕೆ ದೂರ ಮಾಡಿದ್ದ, ಮೂಢ ನಂಬಿಕೆ ದೂರ ತೊಡೆದು ಹಾಕಿದ್ದ. ಅವರ ವಿಚಾರಗಳು ಇಂದಿಗೂ ಜೀವಂತ ಇವೆ ಎಂದರೆ, ಬಸವಾದಿ ಶರಣರ ವಿಚಾರ ಕನಿಷ್ಠ ಪಾಲನೆ ಮಾಡಿದರೆ ಪರಮ ಪೂಜ್ಯರ ಗೌರವ ಸಮರ್ಪಣೆ ಅಂಥ ತಿಳಿದುಕೊಂಡಿದ್ದೇನೆ ಎಂದರು.

ಹಸಿವು ದೇವರು ಕೊಟ್ಟ ವರವೇ ಶಾಪವೇ. ನಾವೆಲ್ಲ ಹಸಿವು ಎಂದರೆ ಬಡತನ, ಶಾಪ ಎಂದು ತಿಳಿದುಕೊಳ್ಳುತ್ತೇವೆ. ಇಷ್ಟು ದೊಡ್ಡ ವಿಕಾಸವಾಗಿದ್ದರೆ ಅದಕ್ಕೆ ಮೂಲ ಕಾರಣ ಹಸಿವು. ಹಸಿವು ದೇವರು ಕೊಟ್ಟ ವರ. ಅರಿವು ದೇವರು ಕೊಟ್ಟ ವರ. ಮರಿವು ಇಲ್ಲದಿದ್ದರೆ, ನಕಾರಾತ್ಮಕವಾಗಿ ನಮ್ಮ ತಲೆಯಲ್ಲಿ ಇರುತ್ತದೆ. ಮರಿವು ದೇವರು ಕೊಟ್ಟ ವರ. ಕೊನೆಯದಾಗಿ ಸಾವು ದೇವರು ಕೊಟ್ಟ ವರ. ಹುಟ್ಟಿಗೆ ಯಾವ ರೀತಿಯ ಉದ್ದೇಶ ಇರುತ್ತದೆಯೋ, ಸಾವಿಗೂ ಅದೇ ರೀತಿಯ ಉದ್ದೇಶ ಇರುತ್ತದೆ. ಅದಕ್ಕಾಗಿ ಸಾವು ಬಂದಾಗ ದುಖ ಪಡಬೇಕಾಗಿಲ್ಲ. ವ್ಯವಹಾರಿಕ ಜಿಜ್ಞಾಸೆ ಇರಬಾರದು, ದಯೆ ಇರುವ ಧರ್ಮ ಇರಬೇಕು. ಕಾಯಕದ ಬದುಕಿರಬೇಕು. ಸಕಲ ಜೀವಾತ್ಮರಿಗೆ ಲೇಸು ಬಯಸುವಂತಿರಬೇಕು. ಇದೇ ಅಂತರಂಗ ಶುದ್ದಿ ಇದೇ ಬಹಿರಂಗ ಶುದ್ದಿ ಎಂದು ಅಭಿಪ್ರಾಯ ಪಟ್ಟರು.

ಕ ಾರ್ಯಕ್ರಮದಲ್ಲಿ ಹೊಸಮಠದ ಶ್ರೀ ಬಸವಶಾಂತ ಸ್ವಾಮೀಜಿ, ರುದಚನ್ನ ಶಿವಾಚಾರ್ಯ ಸ್ವಾಮೀಜಿ, ಮಾಜಿ ವಿಧಾನ ಪರಿಷತ್ ಸದಸ್ಯ ಶಿವರಾಜ ಸಜ್ಜನ, ಜಾತ್ರಾ ಮಹೋತ್ಸವದ ಅಧ್ಯಕ್ಷ ಅಶೋಕ್ ಮಾಗನೂರು ಹಾಜರಿದ್ದರು.

# ಬಾಣಂತಿಯರ ಸಾವಿನ ಮರಣಮೃದಂಗ: ಡಾ.ಶೈಲೇಂದ್ರ ಬೆಲ್ದಾಳೆ

**ರಾಯಚೂರು:** ರಾಜ್ಯದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಕಳಪೆ ಔಷಧಿ ವಿಚಾರವನ್ನು ಗಂಭೀರವಾಗಿ ಪರಿಗಣಿಸಿಲ್ಲ ಎಂದು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಆರೋಪಿಸಿದರು.

ಜಿಲ್ಲೆಯ ಸಿಂಧನೂರಿನಲ್ಲಿ ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡಿದ ವೇಳೆ ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು.

ರಾಜ್ಯದ ವಿವಿಧೆಡೆ ಸಂಭವಿಸಿದ ಬಾಣಂತಿಯರ ಸರಣಿ ಸಾವಿನ ಹಿನ್ನೆಲೆಯಲ್ಲಿ ಪಕ್ಷದ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಸತ್ಯಶೋಧನಾ ಸಮಿತಿ ರಚಿಸಿದ್ದಾರೆ. ಬಾಣಂತಿಯರ ಸಾವಿನ ಪ್ರಕರಣ ಆಗಿರುವಲ್ಲಿಗೆ ಸಮಿತಿ ಭೇಟಿ ಕೊಡುತ್ತಿದೆ ಎಂದರು.

ಮಹಿಳಾ ಮೋರ್ಚಾ ರಾಜ್ಯ ಅಧ್ಯಕ್ಷೆ ಕು.ಮಂಜುಳಾ, ಮುಖಂಡ ಡಾ. ಬಸವರಾಜ್ ಕ್ಯಾವಟರ್, ಡಾ. ಅರುಣಾ, ಡಾ.ನಾರಾಯಣ್, ಕ್ಷೇತ್ರದ ನಾಯಕರಾದ ಕರಿಯಪ್ಪ, ವಿರೂಪಾಕ್ಷಪ್ಪ ಅವರು, ಜಿಲ್ಲಾ ಪಂಚಾಯಿತಿ ಸದಸ್ಯರು ಆಸ್ಪತ್ರೆಗೆ ಭೇಟಿ ಕೊಟ್ಟಿದ್ದೇವೆ. ಕೋಲ್ಕತ್ತ ಕಂಪೆನಿಯಿಂದ ಸರಬರಾಜಾದ ಔಷಧಿಯ ಪರಿಣಾಮವಾಗಿ ಬಳ್ಳಾರಿಯಲ್ಲಿ 6 ಜನರು ಮೃತಪಟ್ಟ ಮಾದರಿಯಲ್ಲೇ ಹಲವೆಡೆ ಸಾವು ಸಂಭವಿಸುತ್ತಿದೆ ಎಂದರು.

ಬಾಣಂತಿಯರ ಸಾವು ಮರಣಮೃದಂಗದಂತೆ ಮುಂದುವರೆದಿದೆ ಎಂದು ಆಕ್ಷೇಪಿಸಿದ ಅವರು, ಸರಕಾರ ಇದನ್ನು ಇನ್ನೂ ಗಂಭೀರವಾಗಿ ಪರಿಗಣಿಸಿಲ್ಲ ಎಂದು ಟೀಕಿಸಿದರು. ಎಫ್‌ಎಸ್‌ಎಲ್ ವರದಿಯ ವಿವರವನ್ನು ಸರಕಾರ ಇನ್ನೂ ಬಹಿರಂಗಪಡಿಸಿಲ್ಲ ಎಂದು ಅವರು ದೂರಿದರು.

ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು; ಮೃತರ ಕುಟುಂಬಕ್ಕೆ 25 ಲಕ್ಷ ಪರಿಹಾರ ನೀಡಬೇಕು ಎಂದು ಅವರು ಆಗ್ರಹಿಸಿದರು. ಅಗತ್ಯ ವೈದ್ಯರು, ಸಿಬ್ಬಂದಿ ನೇಮಕಾತಿಗೆ ಆಗ್ರಹಿಸುವುದಾಗಿ ಅವರು ಪ್ರಶ್ನೆಗೆ ಉತ್ತರ ಕೊಟ್ಟರು. ರಾಯಚೂರು ಜಿಲ್ಲೆಯಲ್ಲಿ 12 ಬಾಣಂತಿಯರು ಸತ್ತಿದ್ದು ನವಜಾತ ಶಿಶುಗಳು ಅನಾಥವಾಗಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಆರೋಗ್ಯ ಸಚಿವರು ಭ್ರಷ್ಟಾಚಾರದಲ್ಲಿ ಮುಳುಗಿಹೋಗಿದ್ದಾರೆ. ಅವರು ದುಡ್ಡು ಹೊಡೆಯುವುದರಲ್ಲಿ ನಿಸ್ಸೀಮರಾಗಿದ್ದಾರೆ. ಸ್ವತಃ ವೈದ್ಯರಾದ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಮಾನವೀಯತೆ ದೃಷ್ಟಿಯಿಂದ ರಿಮ್ಸ್ ಆಸ್ಪತ್ರೆಯ ಮುಖ್ಯಸ್ಥರ ಸಭೆ ನಡೆಸಿ ಕಾರಣಗಳನ್ನು ತಿಳಿದುಕೊಂಡಿಲ್ಲ ಎಂದು ಟೀಕಿಸಿದರು. ಅವರು ಆ ಹುದ್ದೆಗೆ ಅರ್ಹರಲ್ಲ ಎಂದು ತಿಳಿಸಿದರು. ರಿಮ್ಸ್ ಆಸ್ಪತ್ರೆ ಸಾವಿನ ಕೂಟವಾಗಿದೆ ಎಂದು ಹೇಳಿದರು.

ಮಹಿಳಾ ಮೋರ್ಚಾ ರಾಜ್ಯ ಅಧ್ಯಕ್ಷೆ ಕು. ಮಂಜುಳಾ ಅವರು ಮಾತನಾಡಿ, ಸರಕಾರ ಎಫ್‌ಎಸ್‌ಎಲ್ ವರದಿಯನ್ನು ಮುಚ್ಚಿಡುತ್ತಿದೆ ಎಂದು ಟೀಕಿಸಿದರು. ಸರಕಾರದ ಅವಿವೇಕತನ ಜನರಿಗೆ ತಿಳಿಯಲಿದೆ ಎಂದು ಪಲಾಯನವಾದ ಮಾಡುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಶೈಲೇಂದ್ರ ಬೆಲ್ದಾಳೆ, ಕು. ಸಿ. ಮಂಜುಳಾ, ಡಾ. ಬಸವರಾಜ ಕ್ಯಾವಟರ್, ಡಾ. ನಾರಾಯಣ್, ಡಾ. ಅರುಣ, ವಿಜಯಲಕ್ಷ್ಮಿ ಕರೂರ, ಡಾ. ಲಕ್ಷ್ಮಣ್, ರತನ್ ರಮೇಶ್ ಪೂಜಾರಿ, ಮಾಜಿ ಸಂಸದ ವಿರೂಪಾಕ್ಷಪ್ಪ, ಮುಖಂಡ ಕೆ. ಕರಿಯಪ್ಪ, ಪಕ್ಷದ ಸ್ಥಳೀಯ ಪದಾಧಿಕಾರಿಗಳು, ಮುಖಂಡರು, ಪ್ರಮುಖರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.




ಮಹಾಲಕ್ಷ್ಮಿಪುರಂನ ಬಿಜಿಎಸ್ ಆಡಿಟೋರಿಯಂನಲ್ಲಿ ಆಯೋಜಿಸಿದ್ದ ಪಿಯು ಕಾಲೇಜಿನ ವಾರ್ಷಿಕೋತ್ಸವ ಹಾಗು ಸಾಂಸ್ಕೃತಿಕ ಉತ್ಸವ ಕಾರ್ಯಕ್ರಮವನ್ನು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪರಮಪೂಜ್ಯ ಜಗದ್ಗುರು ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಉದ್ಘಾಟಿಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿದರು. ಸಮಾರಂಭದಲ್ಲಿ ಶ್ರೀ ಶ್ರೀ ಸೌಮ್ಯನಾಥ ಸ್ವಾಮೀಜಿ, ಸ್ಥಳೀಯ ಶಾಸಕ ಕೆ ಗೋಪಾಲಯ್ಯ ಪಾಲಿಕೆ ಮಾಜಿ ಉಪ ಮೇಯರ್ ಹೇಮಲತಾ ಗೋಪಾಲಯ್ಯ ಬೆಂಗಳೂರು ದೇವರಾಜ್ ಪ್ರೊಫೆಸರ್. ಗಿರೀಶ್ ಲಿಂಗಣ್ಣ ಸೇರಿದಂತೆ ಉಪನ್ಯಾಸಕರು. ವಿದ್ಯಾರ್ಥಿಗಳು ಪೋಷಕಕರು ಪಾಲ್ಗೊಂಡಿದ್ದರು.

# ವಿಮಾನ ನಿಲ್ದಾಣ ವಿಸ್ತರಣೆ ಸಂಬಂಧ ಸಿಎಂ ಧನಾತ್ಮಕ ಸ್ಪಂದನೆ: ಸಂಸದ ಒಡೆಯರ್

**ಬೆಂಗಳೂರು:** ಮೈಸೂರಿನ ವಿಮಾನ ನಿಲ್ದಾಣ ವಿಸ್ತರಣೆ, ನೀರಾವರಿ ಕಾಲುವೆ, ಕೆಪಿಟಿಸಿಎಲ್ ಲೈನಿನ ಸಮಸ್ಯೆ ಪರಿಹಾರ ಕುರಿತಂತೆ ತ್ವರಿತ ಕ್ರಮಕ್ಕೆ ಇಂದು ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಜೊತೆ ಚರ್ಚೆ ನಡೆಸಿದ್ದೇನೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ತಿಳಿಸಿದ್ದಾರೆ.

ಮೈಸೂರಿನಲ್ಲಿ ಕರ್ನಾಟಕ ಕ್ರಿಕೆಟ್ ಅಸೋಸಿಯೇಶನಿಂದ ಒಂದು ಕ್ರಿಕೆಟ್ ಸ್ಟೇಡಿಯಂ ನಿರ್ಮಿಸಲು ಮುಂದಾಗಿದೆ. ಜಮೀನಿನ ಕೊರತೆ ಇದ್ದು, ಈ ಸಂಬಂಧ ಮುಖ್ಯಮಂತ್ರಿಗಳು ಕ್ಯಾಬಿನೆಟ್ ನಿರ್ಧಾರ ಮಾಡಬೇಕೆಂದು ಕೋರಿದ್ದಾಗಿ ಅವರು ಮಾಧ್ಯಮ ಪ್ರತಿನಿಧಿಗಳಿಗೆ ತಿಳಿಸಿದರು. ಈ ವಿಷಯಗಳಿಗೆ ಧನಾತ್ಮಕವಾಗಿ ಸ್ಪಂದಿಸುವುದಾಗಿ ಮುಖ್ಯಮಂತ್ರಿಗಳು ತಿಳಿಸಿದ್ದಾಗಿ ಹೇಳಿದರು.

ಪ್ರಿನ್ಸೆಸ್ ರಸ್ತೆ ಹೆಸರನ್ನು ಪುನರ್ ನಾಮಕರಣ ಮಾಡುವುದನ್ನು ಖಂಡಿಸುವುದಾಗಿ ಅವರು ತಿಳಿಸಿದರು. ಮಹಾರಾಜರ ತಂಗಿಯ ನೆನಪಿನಲ್ಲಿ ರಸ್ತೆಗೆ ನಾಮಕರಣ ಮಾಡಲಾಗಿದೆ.



ಅಲ್ಲಿ ಟಿ.ಬಿ. ಸ್ಯಾನಿಟೋರಿಯಂ ಕೂಡ ನಿರ್ಮಿಸಿದ್ದಾರೆ ಎಂದ ಅವರು, ಆ ವಿಚಾರವಾಗಿ ಸಿಎಂ ಜೊತೆ ಮಾತನಾಡಿಲ್ಲ ಎಂದು ಪ್ರಶ್ನೆಗೆ ಉತ್ತರ ಕೊಟ್ಟರು. ಈ ಸಂಬಂಧ ಪ್ರತಿಭಟನೆಗಳು ನಡೆಯುತ್ತಿದ್ದು, ಅದನ್ನು ಮುಂದುವರೆಸುವುದಾಗಿ ಹೇಳಿದರು. ಹಗರಣಗಳು, ಬೆಲೆ ಏರಿಕೆ ಸರಕಾರಕ್ಕೆ ಕಪ್ಪು ಚುಕ್ಕಿಯಂತಿದೆ. ಅಂಗನವಾಡಿ ಸಿಬ್ಬಂದಿ, ಅನೇಕ ಸರಕಾರಿ ನೌಕರರು, ಶಾಲಾ ನೌಕರರಿಗೆ ವೇತನ ಸಿಗುತ್ತಿಲ್ಲ; ಇದೆಲ್ಲವೂ ಸರಕಾರಕ್ಕೆ ಕಪ್ಪು ಚುಕ್ಕಿಯಂತಿದೆ ಎಂದು ಅವರು ಪ್ರಶ್ನೆಗೆ ಉತ್ತರ ಕೊಟ್ಟರು. ದುರಾಡಳಿತ ಆಗುವುದನ್ನು ಸರಿಪಡಿಸಬೇಕು ಎಂದು ಜವಾಬ್ದಾರಿಯುತ ವಿಪಕ್ಷ ಸ್ಥಾನದಿಂದ ಒತ್ತಾಯಿಸುವುದಾಗಿ ಹೇಳಿದರು. ಜನರ ಪರವಾಗಿ ಹೋರಾಟ ಮಾಡುವುದಾಗಿ ತಿಳಿಸಿದರು.

# ರಾಜ್ಯದಲ್ಲಿ 5.52 ಕೋಟಿ ಮತದಾರರು ಪುರುಷರಿಗಿಂತ ಮಹಿಳೆಯರೇ ಹೆಚ್ಚು

**ಬೆಂಗಳೂರು:** ಕರ್ನಾಟಕದಲ್ಲೇ ಇತಿಹಾಸದಲ್ಲೇ ಮೊದಲ ಬಾರಿಗೆ ಪುರುಷರಿಗಿಂತ ಮಹಿಳಾ ಮತದಾರರ ಸಂಖ್ಯೆ ಹೆಚ್ಚಾಗಿದ್ದು, ಒಟ್ಟು ರಾಜ್ಯದಲ್ಲಿ 5,52,08,565 ಮತದಾರರು ಹಕ್ಕು ಹೊಂದಿದ್ದಾರೆ.

ರಾಜ್ಯ ಚುನಾವಣಾ ಆಯೋಗವು ಪರಿಷ್ಕೃತ 2025 ಮತದಾರರ ಪಟ್ಟಿಯನ್ನು ಸೋಮವಾರ ಪ್ರಕಟಿಸಿದ್ದು, ಈ ಬಾರಿ ಇತಿಹಾಸದಲ್ಲೇ ಮೊದಲ ಬಾರಿಗೆ ಪುರುಷರಿಗಿಂತ ಮಹಿಳಾ ಮತದಾರರೇ ಹೆಚ್ಚಾಗಿರುವುದು ವಿಶೇಷವಾಗಿದೆ.

2025ರ ಅಂತಿಮ ಪರಿಷ್ಕೃತ ಪಟ್ಟಿ ಪ್ರಕಾರ, ರಾಜ್ಯದಲ್ಲಿ 5,52,08,565 ಮತದಾರರು ಇದ್ದಾರೆ. ಇದರಲ್ಲಿ 2,76,40,836 ಮಹಿಳಾ ಮತದಾರರು ಹಾಗೂ 2,75,62,634 ಸೇರಿದಂತೆ ಪುರುಷ ಮತದಾರರು ಇದ್ದಾರೆ. 2024ರಲ್ಲಿ 5,37,83,534 ಮತದಾರರು ಇದ್ದರು. ಈ ಬಾರಿ ಸರಿಸುಮಾರು 1 ಲಕ್ಷಕ್ಕೂ ಹೆಚ್ಚು ಹೊಸ ಮತದಾರರು ಸೇರ್ಪಡೆಯಾಗಿದ್ದಾರೆ.

ಹೊಸದಾಗಿ ಸೇರ್ಪಡೆಯಾದ ಪಟ್ಟಿಯಲ್ಲಿ 30,999 ಪುರುಷ ಮತದಾರರು, 72,754 ಮಹಿಳಾ ಮತದಾರರು 30 ಇತರರು ಸೇರಿದಂತೆ ಒಟ್ಟು 1,03,776 ಮತದಾರರು ಮತದಾನದ ಹಕ್ಕು ಪಡೆದಿದ್ದಾರೆ.

ಒಟ್ಟು 61,320 ಪುರುಷರು, 59,906 ಮಹಿಳೆಯರು, 65 ತೃತೀಯ ಲಿಂಗಿಗಳು ಸೇರಿದಂತೆ ಒಟ್ಟು ನಿವ್ವಳ 1,21,226ಕ್ಕೆ ಹೆಚ್ಚಳವಾಗಿದೆ. ಈ ಬಾರಿ 1483 ಸಾಗೋತ್ತರ ಮತದಾರರು,

6,36,551 ಮಂದಿ 85 ವರ್ಷಕ್ಕಿಂತ ಮೇಲ್ಪಟ್ಟವರು, 21,551 ಶತಾಯುಷಿಗಳು, 6,28,554 ದಿವ್ಯಾಂಗರು ಸೇರ್ಪಡೆಯಾಗಿದ್ದಾರೆ.

2025ರ ಪರಿಷ್ಕೃತ ಪಟ್ಟಿ ಪ್ರಕಾರ ಒಂದು ಸಾವಿರ ಜನಸಂಖ್ಯೆ ಲಿಂಗಾನುಪಾತಕ್ಕೆ 973 ಮತದಾರರು ಇದ್ದಾರೆ. ಕರಡು ಮತದಾರರ ಪಟ್ಟಿ 2025ರ ಪ್ರಕಾರ ರಾಜ್ಯದಲ್ಲಿ 5,51,04,782 ಸಾಮಾನ್ಯ ಮತದಾರರು ಇದ್ದಾರೆ.

ಇದರಲ್ಲಿ 2,75,31,635 ಪುರುಷ ಮತದಾರರು, 2,75,68,082 ಮಹಿಳೆಯರು, 5065 ಇತರೆ ಮತದಾರರು ಸೇರ್ಪಡೆಯಾಗಿದ್ದಾರೆ.

ಅಂತಿಮ ಪಟ್ಟಿಯಲ್ಲಿ 5,52,08, 565 ಏರಿಕೆಯಾಗಿದೆ. ಇದರಲ್ಲಿ 2,75,62,634 ಪುರುಷ ಮತದಾರರು, 2,76,40,836 ಮಹಿಳಾ ಮತದಾರರು, 5,095 ಇತರ ಮತದಾರರು ಸೇರಿದ್ದಾರೆ ಎಂದು ಆಯೋಗ ತಿಳಿಸಿದೆ.

ಕರಡುಪಟ್ಟಿಗೆ ಹೋಲಿಸಿದರೆ 1,03,783 ಹೆಚ್ಚಳವಾಗಿದೆ. ಇದರಲ್ಲಿ ಅತಿಹೆಚ್ಚು ಅಂದರೆ ಮಹಿಳೆಯರ ಸಂಖ್ಯೆ 72,754 ಹಾಗೂ 3,999 ಪುರುಷರು, 30 ಇತರೆ ಮತದಾರರು ಇದ್ದಾರೆ.

ಈ ಬಾರಿಯು ರಾಜ್ಯದ 224 ಕ್ಷೇತ್ರಗಳ ಪೈಕಿ ಬೆಂಗಳೂರು ದಕ್ಷಿಣ ಅತಿಹೆಚ್ಚು ಮತದಾರರನ್ನು ಹೊಂದಿರುವ ವಿಧಾನಸಭಾ ಕ್ಷೇತ್ರವಾಗಿದೆ. ಇಲ್ಲಿ 7,67,416 ಮತದಾರರು ಇದ್ದಾರೆ. ರಾಜ್ಯದಲ್ಲೆ ಅತಿಹೆಚ್ಚು ಚಿಕ್ಕ ವಿಧಾನಸಭಾ ಕ್ಷೇತ್ರವಾಗಿ ಚಿಕ್ಕಮಗಳೂರು ಜಿಲ್ಲೆ ಶೃಂಗೇರಿ ಕ್ಷೇತ್ರ ಹೊಂದಿದೆ. ಇಲ್ಲಿ 1,68,886 ಮತದಾರರು ಇದ್ದಾರೆ.

# ಇಂತಹ ಕೀಳುಮಟ್ಟದ ಸರ್ಕಾರವನ್ನು ಇತಿಹಾಸದಲ್ಲೇ ನೋಡಿಲ್ಲ ನಿಖಿಲ್ ಕಿಡಿ

**ದೊಡ್ಡಬಳ್ಳಾಪುರ:** ಇತ್ತೀಚಿಗೆ ನಿಧನರಾದ ದೊಡ್ಡಬಳ್ಳಾಪುರ ತಾಲ್ಲೂಕು ಜೆಡಿಎಸ್ ಹಿರಿಯ ಮುಖಂಡರಾದ ಶ್ರೀ ಹಾಡೋನಹಳ್ಳಿ ಅಪ್ಪಯ್ಯಣ್ಣನವರ ನಿವಾಸಕ್ಕೆ ನಿಖಿಲ್ ಕುಮಾರಸ್ವಾಮಿ ಭೇಟಿ ನೀಡಿ ಅವರ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

ನಂತರ ಮಾಧ್ಯಮಗಳ ಜತೆ ಮಾತನಾಡಿದ ಅವರು, ವಿಧಾನಸಭಾ ಚುನಾವಣಾ ಸಮಯದಲ್ಲಿ ಪೇ ಸಿಎಂ ಎಂಬ ಕ್ಯಾಂಪೇನ್ ಶುರು ಮಾಡಿದ್ರು, ಬಹಳ ಗಂಟಾ ಘೋಷವಾಗಿ ಇಡೀ ರಾಜ್ಯಕ್ಕೆ ಮನ ಮುಟ್ಟುವ ಕ್ಯಾಂಪೇನ್ ಮಾಡಿದ್ದರು. ಭ್ರಷ್ಟಾಚಾರವನ್ನ ಸಂಪೂರ್ಣವಾಗಿ ಹೋಗಲಾಡಿಸುತ್ತೇವೆ ಎಂದು ಸಿಎಂ ಮತ್ತು ಡಿಸಿಎಂ ಶಪಥ ಮಾಡಿದ್ದರು ಎಂದು ಕಾಂಗ್ರೆಸ್ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದರು.



ಕರ್ನಾಟಕವನ್ನು ಅನೇಕ ನಾಯಕರು, ಪಕ್ಷಗಳು ಆಳ್ವಿಕೆ ಮಾಡಿವೆ.ಆದರೆ ಈ ರೀತಿ ಒಂದೂವರೆ ವರ್ಷದಲ್ಲಿ ಭ್ರಷ್ಟಾಚಾರದಲ್ಲಿ ಮುಳುಗಿದೆ. ಈ ಸರಕಾರ ಪ್ರತಿನಿತ್ಯ ಹಗರಣದಲ್ಲಿ ಮುಳುಗಿದೆ,ರಾಜ್ಯದಲ್ಲಿ ನೇರವಾಗಿ ಸಿಎಂ ಅವರು ಸಿಲುಕಿರುವುದು ನೋಡಿದ್ದೀರಿ. ಅನೇಕ ಸಮುದಾಯದ ಅಭಿವೃದ್ಧಿಗೆ ಮೀಸಲಿಟ್ಟಿರುವ ಹಣವನ್ನು ದುರ್ಬಳಕೆ ಮಾಡಿದ್ದಾರೆ, ಆ ಹಣವನ್ನ ಪಕ್ಕದ ರಾಜ್ಯಗಳ ಚುನಾವಣೆಗೆ ಬಳಕೆ ಮಾಡಿಕೊಂಡಿದ್ದಾರೆ.ಇಂಥ ಕೀಳು ಮಟ್ಟದ ಸರಕಾರವನ್ನು ಇದೇ ಮೊದಲ ಬಾರಿಗೆ ನೋಡಿರುವುದು ಎಂದು ನಿಖಿಲ್ ಕಿಡಿಕಾರಿದರು.

ಪ್ರಿಯಾಂಕ್ ಖರ್ಗೆ ಪೆನ್ ಡ್ರೈವ್ ಪ್ರಶ್ನೆ ವಿಚಾರಕ್ಕೆ ಮಾತನಾಡಿದ ಅವರು, ಬೇರೆ ಪೆನ್ ಡ್ರೈವ್ ನ್ನು ಯಾವ ಒಬ್ಬ ಮಹಾನುಭಾವ ಬಿಡುಗಡೆ ಮಾಡಿದ ಎಂದು ಎಲ್ಲರಿಗೂ ಗೊತ್ತಿದೆ. ಹೆಣ್ಣು ಮಕ್ಕಳ ಮಾನವನ್ನ ಸಾರ್ವಜನಿಕವಾಗಿ ಕಳೆಯುವಂತ ಪ್ರಯತ್ನ ಆಗಿದೆ. ಕನಿಷ್ಠ ಪಕ್ಷ ಹೆಣ್ಣು ಮಕ್ಕಳ ಬ್ಲರ್ ಮಾಡಿ ಬಿಡುಗಡೆ ಮಾಡಬೇಕು ಎಂಬ ಪರಿಜ್ಞಾನ ಇಲ್ಲದೇ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ಅವರಿಗೆ ಜನನೇ ಪಾಠ ಕಲಿಸುತ್ತಾರೆ ಎಂದರು. ನಿಖಿಲ್ ಸೋಲಿನ ವಿಚಾರಕ್ಕೆ ಕುಮಾರಸ್ವಾಮಿ ಹತಾಶೆಯಾಗಿದ್ದಾರೆ ಎಂ.ಬಿ ಪಾಟೀಲ್ ಹೇಳಿಕೆಗೆ ನಿಖಿಲ್ ಕುಮಾರಸ್ವಾಮಿ ಅವರು ಟಾಂಗ್ ಕೊಟ್ಟರು. ಕುಮಾರಸ್ವಾಮಿಯವರು ಕೇಂದ್ರದ ಸಚಿವರಾಗಿ ಇತ್ತೀಚಿಗೆ ಪಾರ್ಲಿಮೆಂಟ್ ಸೆಷನ್ ನಲ್ಲಿ ಬಹಳ ಕ್ರಿಯಾಶೀಲರಾಗಿ ಕೆಲಸ ಮಾಡುತ್ತಿದ್ದಾರೆ.ರಾಜ್ಯಕ್ಕೆ ಯಾವ ರೀತಿ ಕೊಡುಗೆ ನೀಡಬೇಕು, ಉದ್ಯೋಗ, ಕೈಗಾರಿಕೆ ತರಬೇಕು ಎಂದು ನಿದ್ದೆಗೆಡುತ್ತಿದ್ದಾರೆ ನಿಖಿಲ್ ಕುಮಾರಸ್ವಾಮಿ ಸೋಲಿಗಲ್ಲ ನಿದ್ದೆಗೆಡುತ್ತಿರುವುದು ಎಂದು ತಿಳಿಸಿದರು.

# ಮೆದುಳಿನ ಶಸ್ತ್ರಚಿಕಿತ್ಸೆಗೆ ಒಳಗಾದ ತಮಿಳು ನಟ ಪ್ರಭು ಗಣೇಶನ್

**ಚೆನ್ನೈ:** ತಮಿಳು ಚಿತ್ರರಂಗದ ಖ್ಯಾತ ನಟ ಪ್ರಭು ಗಣೇಶನ್ ಅವರು ಮೆದುಳು ಶಸ್ತ್ರ ಚಿಕಿತ್ಸೆಗೆ ಒಳಗಾಗಿದ್ದಾರೆ.ಮೆದುಳಿನ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದ ನಟ ಪ್ರಭು ಗಣೇಶನ್ ಡಿಸ್ಚಾರ್ಜ್ ಆಗಿ ಮನೆಗೆ ಬಂದಿದ್ದಾರೆ ಹಾಗೂ ಆರೋಗ್ಯವಾಗಿದ್ದಾರೆ ಎಂದು ತಿಳಿದು ಬಂದಿದೆ.



ಪ್ರಭು ಸರ್ ಒಂದು ಸಣ್ಣ ಕಾರ್ಯವಿಧಾನಕ್ಕೆ ಒಳಗಾಗಿದ್ದರು. ಶೀಘ್ರದಲ್ಲೇ ಅವರನ್ನು ಬಿಡುಗಡೆ ಮಾಡಲಾಯಿತು. ಅವರು ಈಗ ಮನೆಯಲ್ಲಿ ಚೇತರಿಸಿಕೊಳ್ಳುತ್ತಿದ್ದಾರೆ ಎಂದು ಅವರ ಪಿಆರ್‌ಓ ತಿಳಿಸಿದ್ದಾರೆ.

ವರದಿಯ ಪ್ರಕಾರ, ಪ್ರಭು ಅವರನ್ನು ಜ್ವರ ಮತ್ತು ತಲೆನೋವಿನ ಲಕ್ಷಣಗಳೊಂದಿಗೆ ಮೆಡ್ವೆ ಹಾರ್ಟ್ ಇನ್ಸಿಟ್ಯೂಟ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೆದುಳಿನ ಹೆಚ್ಚಿನ ಭಾಗಕ್ಕೆ ರಕ್ತವನ್ನು ಪೂರೈಸುವ ಪ್ರಮುಖ ರಕ್ತನಾಳವಾದ ಮಧ್ಯ ಸೆರೆಬ್ರಲ್ ಅಪಧಮನಿಯ ವಿಭಜನೆಯಲ್ಲಿ ಆಂತರಿಕ ಕರೋಟಿಡ್ ಅಪಧಮನಿಯ ಮೇಲ್ಭಾಗದಲ್ಲಿ ಉಬ್ಬು ಅಥವಾ ಬಲೂನ್ ಇರುವುದು ತನಿಖೆಯ ನಂತರ ತಿಳಿದುಬಂದಿದೆ ಎಂದು ಆಸ್ಪತ್ರೆಯ ಅಧ್ಯಕ್ಷ ಡಾ.ಟಿ.ಪಳನಿಯಪ್ಪನ್ ಹೇಳಿದ್ದಾರೆ.

ಪ್ರಭು 1980 ಮತ್ತು 90 ರ ದಶಕದಲ್ಲಿ ತಮಿಳು ಚಿತ್ರರಂಗದ ಪ್ರಮುಖ ತಾರೆಗಳಲ್ಲಿ ಒಬ್ಬರಾಗಿದ್ದರು. ಅವರು ತಮಿಳು ಚಿತ್ರರಂಗದ ಖ್ಯಾತ ಚಿತ್ರ ನಟ ಶಿವಾಜಿ ಗಣೇಶನ್ ಅವರ ಪುತ್ರ ಎನ್ನುವುದು ವಿಶೇಷವಾಗಿದೆ.

# ಎಲ್ಲರೂ ಒಗ್ಗಟ್ಟಾಗಿ ಸರ್ಕಾರಿ ಶಾಲೆ ಉಳಿಸಿ, ಬೆಳೆಸಿ



**ಮಾಲೂರು:** ಎಸ್ ಡಿ ಎಂ ಸಿ ಸದಸ್ಯರು, ಶಿಕ್ಷಕರು ಎಲ್ಲರೂ ಒಗ್ಗಟ್ಟಾಗಿ ಸರ್ಕಾರಿ ಶಾಲೆ ಉಳಿಸಿ ಬೆಳೆಸುವ ಉದ್ದೇಶದಿಂದ ಪ್ರತಿಯೊಬ್ಬರು ಶ್ರಮವಹಿಸುವಂತೆ ರಾಜ್ಯ ಅಧ್ಯಕ್ಷರ ಉಮೇಶ್ ಜಿ ಗಂಗವಾಡಿ ಕರೆ ನೀಡಿದರು.

ಪಟ್ಟಣದ ಸರಕಾರಿ ಜೂನಿಯರ್ ಕಾಲೇಜು ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳ ಸಮನ್ವಯ ವೇದಿಕೆ ತಾಲೂಕು ಮಟ್ಟದ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಹಾಕುವುದರ ಮುಖಾಂತರ ಉದ್ಘಾಟಿಸಿ ಮಾತನಾಡಿದರು.

ಮಾಲೂರು ತಾಲೂಕಿನಲ್ಲಿ ಶಾಲೆ ಬಿಟ್ಟಿರುವ ಮಕ್ಕಳನ್ನು ಸೇರಿಸುವುದು ಮತ್ತು ಸರ್ಕಾರಿ ಶಾಲೆಯನ್ನು ಯಾವುದೇ ತೊಂದರೆ ಇಲ್ಲದೆ ನಡೆಸುವ ಅಗತ್ಯವಿದೆ ಡಾ. ಬಿ.ಆರ್ ಅಂಬೇಡ್ಕರ್ ಅವರು ಮಾಡಿರುವ ಶಿಕ್ಷಣ ಇಡೀ ಪ್ರಪಂಚದಲ್ಲಿ ಯಾರು ಸಹ ಮಾಡಲಾರರು ಇವರು ಸರ್ಕಾರಿ ಶಾಲೆಯಲ್ಲಿ ಓದಿರುವುದು ಇವರ ಹೋರಾಟವು ಬಡವರ ಬಗ್ಗೆ ತುಂಬಾ ಕಾಳಜಿ ವಹಿಸಿ ಶಿಕ್ಷಣದಲ್ಲಿ ಉತ್ತಮ ಅಂಕ ಗಳಿಸಿ ಮುಂದಿನ ವಿದ್ಯಾಭ್ಯಾಸಕ್ಕೆ ಮಕ್ಕಳು ತಂದೆ ತಾಯಿಯ ಆಶ್ರಯ ಪಡೆದು ಉತ್ತಮ ಜೀವನ ರೂಪಿಸಲು ಸಹಾಯಕವಾಗುತ್ತದೆ ಎಂದು ಆದ್ದರಿಂದ ಪ್ರತಿಯೊಬ್ಬ ಎಸ್.ಡಿ.ಎಂ.ಸಿ ಸದಸ್ಯರು ನಿಮ್ಮ ನಿಮ್ಮ ಊರಿನಲ್ಲಿ ಸರ್ಕಾರಿ ಶಾಲೆಗೆ ಮಕ್ಕಳು ಬರುವ ಹಾಗೆ ಮಾಡಬೇಕು ಎಂದರು.

ತಾಲೂಕಿನ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಕೃಷಿ ಅಧಿಕಾರಿಯಾದ ಮಧುರಾಜ್ ಮಾತನಾಡಿ ಸ್ಕೂಲಿನ ಅಭಿವೃದ್ಧಿಗಾಗಿ ನಮ್ಮ ಧರ್ಮಸ್ಥಳ ಸಂಸ್ಥೆ ವತಿಯಿಂದ ಬೆಂಚು ಡೆಸ್ಕ್ ಜ್ಞಾನದೀಪ ಶಿಕ್ಷಕರು ಶಾಲಾ ಕಾಂಪೌಂಡ್ ವ್ಯವಸ್ಥೆ ಶೌಚಾಲಯ ಇನ್ನು ಮುಂತಾದ ಸೌಲಭ್ಯಗಳನ್ನು ಒದಗಿಸಲಾಗುತ್ತದೆ ಇದರ ಉಪಯೋಗವನ್ನು ಎಸ್. ಡಿ.ಎಂ .ಎಂ.ಸಿ .ಸದಸ್ಯರು ಒಗಟ್ಟಾಗಿ ಇದರ ಪ್ರಯೋಜನವನ್ನು ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಬೈರಾರೆಡ್ಡಿ, ಜಿಲ್ಲಾ ಅಧ್ಯಕ್ಷರು ಜಿ.ಕೆ ಶ್ರೀನಿವಾಸಲು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಶಿಕುಮಾರ್, ಜಿಲ್ಲಾ ಉಪಾಧ್ಯಕ್ಷರು ಸೈಯಾದ್ ಜಹಾಂಗೀರ್, ತಾಲೂಕು ಅಧ್ಯಕ್ಷ ಮೂರ್ತಿ, ಚಂದ್ರಶೇಖರ್, ನಾಗೇಶ್ ಕುಮಾರ್, ಮುನಿಕೃಷ್ಣ, ನಟರಾಜು, ಶ್ರೀನಿವಾಸ್ ಹಾಗೂ ತಾಲೂಕಿನ ಎಲ್ಲಾ ಎಸ್.ಡಿ.ಎಂ.ಸಿ ಸದಸ್ಯರು ಭಾಗವಹಿಸಿದರು.

# ಗಾಂಧಿ ತತ್ವ–ಆದರ್ಶ ಮೈಗೂಡಿಸಿಕೊಂಡವರು ಶ್ರೀನಿವಾಸಯ್ಯ

**ನಾಗಮಂಗಲ:** ಮಹಾತ್ಮ ಗಾಂಧೀಜಿಯವರ ತತ್ವ ಅವರ ಆದರ್ಶಗಳನ್ನ ಮೈಗೂಡಿಸಿಕೊಂಡು ತಮ್ಮ ಜೀವನದುದ್ದಕ್ಕೂ ಗಾಂಧಿ ಮಾಯವನ್ನೇ ಮಾಡಿಕೊಂಡವರು ಡಾ.ಹೊ. ಶ್ರೀನಿವಾಸಯ್ಯನವರು ಎಂದು ಪರಮಪೂಜ್ಯ ಶ್ರೀ ನಿರ್ಮಲಾನಂದ ನಾಥ ಸ್ವಾಮೀಜಿ ಅವರು ಮಾತನಾಡಿದರು.

ನಾಗಮಂಗಲ ತಾಲೂಕು ದೇವಲಾಪುರ ಹೋಬಳಿಯ ಚೌದರಿ ಕೊಪ್ಪಲು ಗ್ರಾಮದಲ್ಲಿ ಡಾ. ಹೊ.ಶ್ರೀನಿವಾಸಯ್ಯ ಚಾರಿಟೇಬಲ್ ಟ್ರಸ್ಟ್ ಚೌದ್ರಿ ಗ್ರಾಮೀಣಾಭಿವೃದ್ಧಿ ಟ್ರಸ್ಟ್ ಮತ್ತು ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಬೆಂಗಳೂರು ಇವರ ಸಹಯೋಗದಲ್ಲಿ ಆಯೋಜಿಸಿದ್ದ ಡಾ. ಶ್ರೀನಿವಾಸಯ್ಯ ಜನ್ಮ ಶತಮಾನೋತ್ಸವ ಆಚರಣೆ ಹಾಗೂ ಜಯಲಕ್ಷ್ಮಿ ಮತ್ತು ಡಾ. ಹೊ.ಶ್ರೀನಿವಾಸಯ್ಯ ಸಮುದಾಯ ಭವನ ಉದ್ಘಾಟಿಸಿ ಅವರು ಮಾತನಾಡಿದರು.

ಹೊ.ಶ್ರೀನಿವಾಸಯ್ಯನವರು ಸಣ್ಣ ಗ್ರಾಮದಲ್ಲಿ ಜನಿಸಿ ಮಹಾತ್ಮ ಗಾಂಧೀಜಿಯವರನ್ನ ಭೇಟಿ ಮಾಡಿದ ನಂತರ ಅವರು ತಮ್ಮ ಜೀವನವನ್ನೇ ಗಾಂಧಿ ಮಯವಾಗಿ ರೂಪಿಸಿಕೊಂಡು ಗಾಂಧಿಯವರ ಆದರ್ಶಗಳನ್ನ ಪಾಲಿಸಿ ಸಮಾಜ ಸೇವೆ ಮುಖಾಂತರ ರಾಜ್ಯ ರಾಷ್ಟ್ರಾದ್ಯಂತ ಗಾಂಧಿ ಪ್ರಚಾರಗಳನ್ನು ಮಾಡುವ ಮುಖಾಂತರ ಗಾಂಧೀಜಿ




ಹಾಗೂ ಶ್ರೀನಿವಾಸಯ್ಯನವರನ್ನ ಬೇರ್ಪಡಿಸಲು ಸಾಧ್ಯವಾದಷ್ಟು ಮಟ್ಟಿಗೆ ಬೆಳೆದಿದ್ದಾರೆ ಅಂತವರು ನಮ್ಮೊಟ್ಟಿಗೆ ಇಲ್ಲದಿದ್ದರೂ ಅವರ ಪಾಲನೆ ಸೇವೆ ಶ್ರೀ ಕ್ಷೇತ್ರಕ್ಕೂ ಮರೆಯಲಾಗದ ನಂಟು ಇಂದಿಗೂ ಅಮರವಾಗಿದೆ ಎಂದು ನೆನಪಿಸಿದರು.

ಶ್ರೀ ಕ್ಷೇತ್ರ ಆದಿಚುಂಚನಗಿರಿಯ ಪರಮ ಭಕ್ತರಾಗಿಯೂ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಯವರ ಜೊತೆಗೂಡಿ ಮನೆ ಮನೆಗಳಿಗೂ ತೆರಳಿ ಮಠದ ಪ್ರಚಾರ ಮಾಡಿದವರು ಹೊ.ಶ್ರೀನಿವಾಸಯ್ಯನವರು ಜನಮಾನಸದಲ್ಲಿ ಶ್ರೀ ಕ್ಷೇತ್ರದ ಬಗ್ಗೆ ಭಕ್ತಿ ಬೆಳೆಸಲು ಕಾರಣಕರ್ತರಾಗಿದ್ದಾರೆ ಎಂದು ತಿಳಿಸಿದರು.

ಗಾಂಧೀಜಿ ಮತ್ತು ಶ್ರೀನಿವಾಸಯ್ಯನವರು ಒಂದೇ ರೂಪ ಎಂದರೆ ತಪ್ಪಾಗಲಾರದು ಗಾಂಧೀಜಿಯವರ ಸೇವಾ ಕ್ಷೇತ್ರಗಳನ್ನು ಅನುಸರಿಸಿ ಗಾಂಧೀಜಿಯವರ ಬಗ್ಗೆ ಅರಿವು ಮೂಡಿಸುವ ಮಹಾನ್ ಕಾರ್ಯಗಳನ್ನು ಅನುಷ್ಠಾನಕ್ಕೆ ತರುವ ಮಹನೀಯರ ಸಾಲಿನಲ್ಲಿ ನಮ್ಮ ತಾಲೂಕಿನವರೇ ಇಷ್ಟು ಎತ್ತರಕ್ಕೆ ಬೆಳೆದಿರುವ ನಮಗೂ ಹೆಮ್ಮೆ ನಮ್ಮ ಜಿಲ್ಲೆಗೂ ಕೀರ್ತಿಯಾಗಿದ್ದು ಇಂಥ ಮಹನೀಯರ ಹೆಸರು ನಿತ್ಯ ನಿರಂತರವಾಗಿರಲು ನಾಗಮಂಗಲದ ಕೇಂದ್ರ ಆಯುಷ್ ಆಸ್ಪತ್ರೆ ಹಾಗೂ ಪ್ರಕೃತಿ ಚಿಕಿತ್ಸಾಲಯಕ್ಕೆ ಇವರ ಹೆಸರನ್ನು ಇಡಲು ಮನವಿ ಮಾಡಿದ್ದು ಈ ವಿಚಾರವನ್ನು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಪ್ರಯತ್ನ ಮಾಡುವುದಾಗಿ ಕೃಷಿ ಸಚಿವರಾದ ಚೆಲುವರಾಯಸ್ವಾಮಿ ಅವರು ತಿಳಿಸಿದರು.

ಶ್ರೀನಿವಾಸಯ್ಯನವರ ಹತ್ತಿರದಿಂದ ಅವರ ಒಡನಾಟ ಅವರ ಸೇವೆ ಗಾಂಧೀಜಿಯವರ ಸೇವಾ ಮಾರ್ಗಗಳ ಅನುಕರಣೆಯಿಂದ ನಮ್ಮಂತವರು ಗಾಂಧಿ ತತ್ವಗಳನ್ನ ಅನುಸರಿಸುವ ದಾರಿ ತೋರಿಸಿದ ದಾರಿ ತೋರಿಸುವ ಮಹನೀಯರಾಗಿದ್ದು ಇಂಥವರ ಸೇವೆ ಸದಾ ಇರಲಿ ಎಂದು ಮಾಜಿ ಶಾಸಕರಾದ ಬಿ ಆರ್ ಪಾಟೀಲ್ ರವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಗಾಂಧಿ ಹೊ ಶ್ರೀನಿವಾಸಯ್ಯ ಪುಸ್ತಕ ಬಿಡುಗಡೆಯನ್ನು ಮಾಡಲಾಯಿತು.

ಸಮಾರಂಭದಲ್ಲಿ ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷರಾದ ವೂಡೋ ಪಿ.ಕೃಷ್ಣ ಮಾಜಿ ವಿಧಾನ ಪರಿಷತ್ ಸದಸ್ಯರಾದ ಅಪ್ಪಾಜಿ ಗೌಡ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರಾಜೇಶ್.ಕೃಷ್ಣೆಗೌಡ ಶ್ರೀನಿವಾಸಯ್ಯ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಶಶಿಕೃಷ್ಣ ಗ್ರಾಮ ಪಂಚಾಯಿತಿ ಅಧ್ಯಕ್ಷ ಶ್ರುತಿ ಕೃಷ್ಣ ಉಪಸ್ಥಿತರಿದ್ದು ಕರ್ನಾಟಕ ಗಾಂಧಿ ಸ್ಮಾರಕನಿಧಿ ನಿರ್ದೇಶಕರಾದ ಜಿ.ಬಿ ಶಿವರಾಜ್ ಸ್ವಾಗತಿಸಿದರು

# ಹಾವನ್ನೇ ನುಂಗಿದ ಹಾವು




**ಚಾಮರಾಜನಗರ:** ನಾಗರ ಹಾವು ಮೊಟ್ಟೆ, ಕಪ್ಪೆಯನ್ನು ನುಂಗಿದ ಘಟನೆಯನ್ನು ನೋಡಿದ್ದೀವೆ. ನಾಗರ ಹಾವು ಮತ್ತೊಂದು ನಾಗರ ಹಾವನ್ನು ನುಂಗಿ ದ ಅಪರೂಪದ ಘಟನೆಗೆ ಚಾಮರಾಜನಗರ ತಾಲ್ಲೂಕಿನ ತಾವರಕಟ್ಟೆ ಮೋಳೆ ಸಾಕ್ಷಿಯಾಯಿತು.

ಚಾಮರಾಜನಗರ ತಾಲ್ಲೂಕಿನ ತಾವರಕಟ್ಟೆಮೋಳೆ ಯ ಮಹೇಶ್ ರವರ ತೋಟದಲ್ಲಿ ನಾಗರಹಾವೊಂದು ಮತ್ತೊಂದು ನಾಗರಹಾವನ್ನು ನುಂಗಿದ್ದನ್ನು ಕಂಡ ಅಲ್ಲಿನ ನಿವಾಸಿಗಳು ಚಾಮರಾಜನಗರದ ಸ್ನೇಕ್ ಅಶೋಕ್ ರವರಿಗೆ ಕರೆ ಮಾಡಿ ಮಾಹಿತಿ ನೀಡಿದರು.

ಗ್ರಾಮಸ್ಥರ ಮನವಿಗೆ ಸ್ಪಂಧಿಸಿದ ಸ್ನೇಕ್ ಅಶೋಕ್ ರವರು ಕೂಡಲೇ ತಾವರಕಟ್ಟೆ ಮೋಳೆಗೆ ಆಗಮಿಸಿ, ನಾಗರಹಾವು ವನ್ನು ಪರಿಶೀಲನೆ ನಡೆಸಿದ ಬಳಿಕ ನಾಗರ ಹಾವಿನಿಂದ ನುಂಗಿದ ಹಾವನ್ನು ಬಲು ಸೂಕ್ಷ್ಮವಾಗಿ ಹೊರ ಹಾಕಿಸಿದರು. ಆದರೆ ನುಂಗಿದ್ದ ಹಾವು ಉಸಿರಾಟಕ್ಕೆ ತೊಂದರೆಯಾಗಿ ಮೃತಪಟ್ಟಿತ್ತು.

ಒಟ್ಟಿನಲ್ಲಿ ನಾಗರ ಹಾವು ಹಸಿವಿಗಾಗಿ ಹಾವನ್ನೇ ನುಂಗಿದ ಅಪರೂಪದ ಘಟನೆಗೆ ತಾವರಕಟ್ಟೆ ಮೋಳೆ ಗ್ರಾಮ ಹಾಗೂ ಸ್ನೇಕ್ ಅಶೋಕ್ ಸಾಕ್ಷಿಯಾದರು. ಈ ಘಟನೆಯ ವೀಡಿಯೋ ಸಖತ್ ವೈರಲ್ ಆಗುತ್ತಿದೆ.

# ಗುರುವಂದನಾ,ಸ್ನೇಹಸಮ್ಮಿಲನಕಾರ್ಯಕ್ರಮ



**ಶಿಡ್ಲಘಟ್ಟ:** ತಂದೆ ತಾಯಿ ಮೊದಲ ಗುರು. ನಂತರ ಅಕ್ಷರ ಕಲಿಸುವ ಗುರುಗಳೇ ಶಿಕ್ಷಕರು. ತಾವುಗಳು ಅತ್ಯುನ್ನತ ಸ್ಥಾನಗಳಲ್ಲಿದ್ದರೂ ಒಂದೆಡೆ ಸೇರಿ ನಮ್ಮನ್ನು ಸ್ಮರಿಸಿಕೊಳ್ಳುವ ಮೂಲಕ ಗುರುವಂದನೆ ಸಲ್ಲಿಸುತ್ತಿರುವುದು ಮನಸ್ಸಿಗೆ ಉಲ್ಲಾಸ ತಂದಿದೆ ಎಂದು ನಿವೃತ್ತ ಮುಖ್ಯ ಶಿಕ್ಷಕರಾದ ಟಿ.ಕೃಷ್ಣಪ್ಪ ತಿಳಿಸಿದರು.

ತಾಲ್ಲೂಕಿನ ಮೇಲೂರು ಗ್ರಾಮದ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ 1992–93 ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಂದ ಹಮ್ಮಿಕೊಂಡಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗುರು ಹಿರಿಯರನ್ನು ಗೌರವಿಸಿ ಸಂಸ್ಕಾರದಿಂದ ನಡೆದುಕೊಂಡಾಗ ಮಾತ್ರ ನೀವು ಕಲಿತ ವಿದ್ಯೆಗೆ ಗೌರವ ಹಾಗು ತಂದೆ, ತಾಯಿ, ಗುರುಗಳಿಗೆ ಕೀರ್ತಿ ಬಂದಂತಾಗುತ್ತದೆ ಎಂದು ಕಿವಿಮಾತು ಹೇಳಿದರು. ಗುರುಗಳನ್ನು ಸ್ಮರಿಸಿ ಅವರಿಗೆ ಗೌರವಿಸುವ ಪರಂಪರೆ ಈಗೇ ಮುಂದುವರಿಯಲಿ ಎಂದು ಆಶಿಸಿದರು.

1992–93ರ ಬ್ಯಾಚ್‌ನ ವಿದ್ಯಾರ್ಥಿಗಳನ್ನು ನಾವು ಮರೆಯಲು ಸಾಧ್ಯವೇ ಇಲ್ಲ. ಕಾರಣ ಮೇಲೂರು ಸರ್ಕಾರಿ ಪ್ರೌಢಶಾಲೆಯನ್ನು ಎಸ್ಸೆಸ್ಸೆಲ್ಸಿ ಪರೀಕ್ಷಾ ಕೇಂದ್ರವನ್ನಾಗಿಸಬೇಕೆಂಬ ನಮ್ಮ ಶ್ರಮ ಇದೇ ಶಾಲೆಯಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆದು ಅತ್ಯುತ್ತಮ ಫಲಿತಾಂಶ ತಂದುಕೊಟ್ಟಿದ್ದರು ಎಂದು ಈ ವೇಳೆ ಸ್ಮರಿಸಿದರು.

ನಿವೃತ್ತ ಶಿಕ್ಷಕ ಎಚ್.ಡಿ.ಹನುಮಂತ ಮಾತನಾಡಿ, ವಿದ್ಯಾರ್ಥಿಗಳು ಎಷ್ಟೇ ಉನ್ನತ ಸ್ಥಾನಕ್ಕೇರಿದರೂ ದೇವರನ್ನು ದೇವಸ್ಥಾನದಲ್ಲಿ ನೋಡುವ ನಾವು ಮನೆಯಲ್ಲಿರುವ ತಂದೆ, ತಾಯಿಯನ್ನು ದೇವರಂತೆ ಬಾವಿಸಿ ಸೇವೆ ಮಾಡಬೇಕು ಅದಾದಗಲೇ ನಿಮ್ಮ ಜೀವನ ಸಾರ್ಥಕವಾಗುತ್ತದೆ ಎಂದು ನುಡಿದರು.

ಇದೇ ವೇಳೆ ಪಾಠ ಕಲಿಸಿದ ಗುರುಗಳನ್ನು ಸತ್ಕರಿಸಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ನಿವೃತ್ತ ಶಿಕ್ಷಕರಾದ ಎಲ್. ಅಶ್ವತ್ಥನಾರಾಯಣ, ಪಿ.ವೆಂಕಟೇಶ್, ಕೆ.ಪಿ. ಚಂದ್ರೇಗೌಡ. ಬಿ.ವಿ.ಶ್ರೀರಾಮಯ್ಯ ನಾಗರತ್ನಮ್ಮ, ಮುಖ್ಯಶಿಕ್ಷಕ ಭಾಸ್ಕರ್, ಹಳೆ ವಿದ್ಯಾರ್ಥಿಗಳಾದ ಮಂಜುನಾಥ್, ಮನೋಹರ್, ಡಿವಿಡಿ.ಸ್ವಾಮಿ, ಭಕ್ತರಹಳ್ಳಿ ಗೋಪಾಲ್, ಎಚ್.ಕೆ.ಮಹೇಶ್,ಬಾಲಾಜಿ, ಕೊಂಡೇನಹಳ್ಳಿ ಮಂಜುನಾಥ್, ಶಿವಕುಮಾರ್, ನಾಗೇಶ್, ಗ್ರಾ.ಪಂ.ಮಾಜಿ ಅಧ್ಯಕ್ಷರಾದ ಆರ್.ಎ.ಉಮೇಶ್, ಈ ಶಾಲೆಯಲ್ಲಿ ಕ್ಲರ್ಕ್ ಆಗಿ ಕಾರ್ಯ ನಿರ್ವಹಿಸಿ ಈಗ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾಗಿರುವ ಕೆ.ಎನ್.ಸುಬ್ಬಾರೆಡ್ಡಿ, ಎಸ್‌ಡಿಎಂಸಿ ಅಧ್ಯಕ್ಷೆ ನಂದಿನಿ ಮಹೇಶ್, ಸದಸ್ಯರಾದ ಚಂದ್ರೇಗೌಡ, ಗುಂಡಪ್ಪ, ಎಂ.ಶ್ರೀನಿವಾಸ್ ಸೇರಿದಂತೆ ಹಳೆ ವಿದ್ಯಾರ್ಥಿಗಳು, ಶಿಕ್ಷಕರು ಪಾಲ್ಗೊಂಡಿದ್ದರು.

# ಅಂತಿಮ ಮತದಾರರ ಪಟ್ಟಿ ಪ್ರಕಟ: ಜಿಲ್ಲೆಯಲ್ಲಿ 8,80,630 ಮತದಾರರು

**ಚಾಮರಾಜನಗರ:** ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿನ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸ ಲಾಗಿದ್ದು, ಒಟ್ಟಾರೆ ಜಿಲ್ಲೆಯಲ್ಲಿ 8,80,630 ಮತದಾರರಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಭಾವಚಿತ್ರವಿರುವ ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಸಂಬಂಧ ಅಂತಿಮ ಮತದಾರರ ಪಟ್ಟಿ ಪ್ರಚುರ ಪಡಿಸುವ ಸಲುವಾಗಿ ವರ್ಚುವೆಲ್ ಮೂಲಕ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಮತದಾರರ ಪಟ್ಟಿ ವೀಕ್ಷಕರಾದ ಮೇಜರ್ ಪಿ. ಮಣಿವಣ್ಣನ್ ಅವರ ಸಮ್ಮುಖದಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿಯವರಾದ ಶಿಲ್ಪಾ ನಾಗ್ ಅವರು ಮಾತನಾಡಿ ಈ ವಿವರ ನೀಡಿದರು.

ದಿನಾಂಕ 01–01–2025ಕ್ಕೆ ಅರ್ಹತಾ ದಿನಾಂಕ ನಿಗದಿಪಡಿಸಿ ಭಾವಚಿತ್ರವಿರುವ ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದ್ದು, ಕರಡು ಮತದಾರರ ಪಟ್ಟಿಯಲ್ಲಿ ನಾಲ್ಕು ವಿಧಾನಸಭಾ ಕ್ಷೇತ್ರಗಳು ಸೇರಿದಂತೆ ಒಟ್ಟಾರೆ ಜಿಲ್ಲೆಯಲ್ಲಿ 8,78,895 ಮತದಾರರಿದ್ದರು. ಅಂತಿಮ ಮತದಾರರ ಪಟ್ಟಿಯಲ್ಲಿ 8,80,630 ಮತದಾರರಿದ್ದಾರೆ. ಪರಿಷ್ಕರಣಾ ಅವಧಿಯಲ್ಲಿ ಒಟ್ಟು 4,801 ಮತದಾರರನ್ನು ಪಟ್ಟಿಗೆ ಸೇರ್ಪಡೆಗೊಳಿಸಲಾಗಿದೆ. 3,066 ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ. ಒಟ್ಟಾರೆ ಕರಡು ಮತದಾರರ ಪಟ್ಟಿ ಪ್ರಕಟಿತ ದಿನಾಂಕದಿಂದ ಈವರೆಗೆವಿಗೆ 1,735 ಮತದಾರರು ಹೆಚ್ಚುವರಿಯಾಗಿ ಅಂತಿಮ ಮತದಾರರ ಪಟ್ಟಿಗೆ ಸೇರ್ಪಡೆಗೊಂಡಿದ್ದಾರೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕರಡು ಮತದಾರರ ಪಟ್ಟಿ ಪ್ರಕಾರ 2,24,660 ಮತದಾರರಿದ್ದರು. ಅಂತಿಮ ಮತದಾರರ ಪಟ್ಟಿಯಲ್ಲಿ 2,24,809 ಮತದಾರರಿದ್ದಾರೆ. ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕರಡು ಮತದಾರರ ಪಟ್ಟಿ ಪ್ರಕಾರ 2,20,177 ಮತದಾರರಿದ್ದರು. ಅಂತಿಮ ಮತದಾರರ ಪಟ್ಟಿಯಲ್ಲಿ 2,20,486 ಮತದಾರರಿದ್ದಾರೆ. ಚಾಮರಾಜನಗರ



ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕರಡು ಮತದಾರರ ಪಟ್ಟಿ ಪ್ರಕಾರ 2,17,001 ಮತದಾರರಿದ್ದರು. ಅಂತಿಮ ಮತದಾರರ ಪಟ್ಟಿಯಲ್ಲಿ 2,17,638 ಮತದಾರರಿದ್ದಾರೆ. ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕರಡು ಮತದಾರರ ಪಟ್ಟಿ ಪ್ರಕಾರ 2,17,057 ಮತದಾರರಿದ್ದರು. ಅಂತಿಮ ಮತದಾರರ ಪಟ್ಟಿಯಲ್ಲಿ 2,17,697 ಮತದಾರರಿದ್ದಾರೆ.

ಜಿಲ್ಲೆಯ ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 254 ಮತಗಟ್ಟೆಗಳು, ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 241, ಚಾಮರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 239, ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 249 ಮತಗಟ್ಟೆಗಳು ಸೇರಿದಂತೆ ಒಟ್ಟಾರೆ ಜಿಲ್ಲೆಯಲ್ಲಿ 983 ಮತಗಟ್ಟೆಗಳಿವೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಕರಡು ಮತದಾರರ ಪಟ್ಟಿಯಲ್ಲಿದ್ದಂತೆ ಒಟ್ಟು 8,410 ಯುವ ಮತದಾರರಿದ್ದು, ಹೊಸದಾಗಿ 1,850 ಯುವ ಮತದಾರರು ಸೇರ್ಪಡೆಗೊಂಡಿದ್ದು ಒಟ್ಟಾರೆ ಅಂತಿಮ ಮತದಾರರ ಪಟ್ಟಿಯಲ್ಲಿ 10,260 ಯುವ ಮತದಾರರು ನೊಂದಣಿಯಾಗಿದ್ದಾರೆ. ಮತದಾರರ ಪಟ್ಟಿಯಲ್ಲಿ ಕೈಬಿಟ್ಟು ಹೋಗಿರುವ ಮತದಾರರು ಮತ್ತು 18 ಹಾಗೂ ಇದರ ಮೇಲ್ಪಟ್ಟ ಯುವ ಮತದಾರರ ಹೆಸರನ್ನು ನಿರಂತರ ಪರಿಷ್ಕರಣೆ ಅವಧಿಯಲ್ಲಿ ಅರ್ಜಿ ಪಡೆದು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಇದೇ ವೇಳೆ ಮಾತನಾಡಿದ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಮತದಾರರ ಪಟ್ಟಿ ವೀಕ್ಷಕರಾದ ಮೇಜರ್ ಪಿ. ಮಣಿವಣ್ಣನ್ ಅವರು, ಭಾವಚಿತ್ರವಿರುವ ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಸಂಬಂಧ ಪ್ರಚುರ ಪಡಿಸಲಾಗಿರುವ ಅಂತಿಮ ಮತದಾರರ ಪಟ್ಟಿಯ ಕುರಿತು ಯಾವುದೇ ಆಕ್ಷೇಪಣೆಗಳಿದ್ದರೂ ಜಿಲ್ಲಾಧಿಕಾರಿ ಕಚೇರಿಯ ಚುನಾವಣಾ ಶಾಖೆಯನ್ನು ಸಂಪರ್ಕಿಸಬೇಕು ಎಂದ ಅವರು ಅಂತರ್ಜಾಲ ಸಂಪರ್ಕ ವ್ಯವಸ್ಥೆ ಇಲ್ಲದಿರುವ ಕೆಲವು ಮತಗಟ್ಟೆಗಳಿಗೆ ಅಂತರ್ಜಾಲ ಕಲ್ಪಿಸುವ ಕೆಲಸವನ್ನು ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬಳಿಕ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ, ಹೊರಡಿಸಲಾಗಿರುವ ಅಂತಿಮ ಮತದಾರರ ಪಟ್ಟಿಯಲ್ಲಿ ಅರ್ಹ ಮತದಾರರು ಕೈಬಿಟ್ಟು ಹೋಗಿದ್ದಲ್ಲಿ, ನಿಧನ ಹೊಂದಿದ ಮತದಾರರ ಹೆಸರು ಮತದಾರರ ಪಟ್ಟಿಯಲ್ಲಿ ಉಳಿದುಕೊಂಡಿರುವುದು ಕಂಡುಬಂದಲ್ಲಿ ಈ ಮಾಹಿತಿಯನ್ನು ಆಯಾ ತಾಲೂಕು ತಹಶೀಲ್ದಾರ್ ಕಚೇರಿಗೆ ನೀಡಬೇಕು. ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಯಾರೇ ಅರ್ಹರು ಮತದಾನದಿಂದ ವಂಚಿತರಾಗದಂತೆ ಎಚ್ಚರಿಕೆ ವಹಿಸಿ ಶೇ. 100ರಷ್ಟು ದೋಷ ರಹಿತ ಮತದಾರರ ಪಟ್ಟಿ ತಯಾರಿಸಲು ಮತ್ತು ಮತದಾನದ ಶೇಕಡವಾರು ಪ್ರಮಾಣವನ್ನು ಹೆಚ್ಚಿಸಲು ರಾಜಕೀಯ ಪಕ್ಷಗಳು ಸಹಕರಿಸಬೇಕೆಂದು ಜಿಲ್ಲಾಧಿಕಾರಿಯವರು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮತದಾರರ ಪಟ್ಟಿಯನ್ನು ವಿತರಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್, ತಹಶೀಲ್ದಾರ್‌ರಾದ ಬಿ. ಗಿರಿಜ, ಐ.ಈ. ಬಸವರಾಜು, ಆರ್. ಜಯಪ್ರಕಾಶ್, ವೈ.ಕೆ. ಗುರುಪ್ರಸಾದ್, ಚುನಾವಣಾ ಶಿರಸ್ತೇದಾರ್ ಬಸವರಾಜು, ಪ್ರಕಾಶ್, ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಎ.ಹೆಚ್. ನಸ್ರುಲ್ಲಾ ಖಾನ್, ಪಿ. ವೃಷಬೇಂದ್ರಪ್ಪ, ಎನ್. ನಾಗಯ್ಯ, ಮಹದೇವಪ್ರಸಾದ್, ಹರೀಶ್, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

# ತಹಶೀಲ್ದಾರ್ ಅಮಾನತಿಗೆ ಕರವೇ ಆಗ್ರಹ



**ಮಾಲೂರು:** ಕೋಟ್ಯಾಂತರ ರೂಪಾಯಿ ಬೆಲೆ ಬಾಳುವ ಸರ್ಕಾರಿ ಭೂಮಿಯನ್ನ ತಹಶೀಲ್ದಾರ್‌ರವರು ಅಕ್ರಮ ದಾಖಲೆಗಳನ್ನು ಸೃಷ್ಟಿಸಿ ಬಿಲ್ಡರ್ಸ್‌ಗಳಿಗೆ ಮಾರಾಟ ಮಾಡಲು ಮುಂದಾಗಿದ್ದು ತಹಶೀಲ್ದಾರ್‌ರವರನ್ನು ಅಮಾನತುಗೊಳಿಸಬೇಕೆಂದು ಕರವೇ ತಾಲ್ಲೂಕು ಅಧ್ಯಕ್ಷ ಎಂ.ಎಸ್ ಶ್ರೀನಿವಾಸ್ ಆಗ್ರಹಿಸಿದ್ದಾರೆ.

ತಾಲ್ಲೂಕಿನ ತೊರ್ನಹಳ್ಳಿ ಗ್ರಾಮದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ 69 ನೇ ಕನ್ನಡ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಿದರು.

ಈ ವೇಳೆ ಕರವೇ ತಾಲ್ಲೂಕು ಅಧ್ಯಕ್ಷ ಎಂ.ಎಸ್ ಶ್ರೀನಿವಾಸ್ ಮಾತನಾಡಿ, ತಾಲ್ಲೂಕಿನಲ್ಲಿರುವ ಕಾರ್ಖಾನೆಗಳಲ್ಲಿ ತಮಿಳು. ತೆಲುಗು. ಹಾಗೂ ಹಿಂದಿ ಭಾಷೆಯ ಕಾರ್ಮಿಕರೆ ಹೆಚ್ಚಾಗಿದ್ದಾರೆ ಕನ್ನಡಿಗರಿಗೆ ಉದ್ಯೋಗ ಕಲ್ಪಿಸಲು ಕರವೇ ನಿರಂತರ ಹೋರಾಟಗಳು ನಡೆಸಿಕೊಂಡು ಬರುತ್ತಿದೆ ಎಲ್ಲ ಕನ್ನಡ ಪರ ಸಂಘಟನೆಗಳು ನಮ್ಮ ಜೊತೆ ಕೈಜೋಡಿಸಿದ್ರೆ ಪರ ಭಾಷೆಯವರನ್ನು ರಾಜ್ಯದಿಂದ ಓಡಿಸಿ ಕನ್ನಡಿಗರಿಗೆ ಉದ್ಯೋಗ ಕಲ್ಪಿಸಬಹುದು ಎಂದು ಹೇಳಿದರು.

ಅಲ್ಲದೆ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರನ್ನು ಅಲೆದಾಡಿಸುತ್ತಿದ್ದು, ಬಲಿಷ್ಠರಿಗೆ ಕೆಲಸಗಳನ್ನು ಮಾಡಿಕೊಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ ಅವರು, ಇನ್ನೂ ಸುಮಾರು ಕೋಟ್ಯಾಂತರ ಬೆಲೆಬಾಳುವ ಸರ್ಕಾರಿ ಗೋಮಳ ಭೂಮಿಯನ್ನು ಅಕ್ರಮ ಖಾತೆಗಳನ್ನು ಮಾಡಿ ಬಿಲ್ಡರ್ಸ್‌ಗಳಿಗೆ ಮಾರಾಟ ಮಾಡಲು ತಹಶೀಲ್ದಾರ್‌ರವರು ಮುಂದಾಗಿದ್ದು ರೈತರಿಗೆ ವಂಚಿಸಿ ಭ್ರಷ್ಟಾಚಾರದಲ್ಲಿ ತೊಡಗಿರುವ ಅಧಿಕಾರಿಗಳನ್ನು ಅಮಾನತು ಮಾಡುವ ವರೆಗೂ ಉಗ್ರವಾದ ಹೋರಾಟ ನಡೆಸಲಾಗುವುದು ಎಂದು ಆರೋಪಿಸಿದ್ದಾರೆ.

ಈ ಸಂದರ್ಭದಲ್ಲಿ ಕರವೇ ಜಿಲ್ಲಾಧ್ಯಕ್ಷ ಮೇಡಿಹಾಳ ರಾಘವೇಂದ್ರ, ಮಹಿಳಾ ಜಿಲ್ಲಾಧ್ಯಕ್ಷೆ ಲತಾಭಾಯಿ ಮಾಡಿಕ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುನಿರಾಜು, ಜಿಲ್ಲಾ ಉಪಾಧ್ಯಕ್ಷ ಎನ್.ವಿ.ಮುರಳೀಧರ್, ತಾಲ್ಲೂಕು ಕಾರ್ಯದರ್ಶಿ ಮುನಿರಾಜು, ಉಪಾಧ್ಯಕ್ಷ ನಾರಾಯಣಸ್ವಾಮಿ, ಡಿ.ಎಂ.ಸಿ. ಚಂದ್ರಶೇಖರ್, ಯುವ ಘಟಕ ಅಧ್ಯಕ್ಷ ಸಂತೋಷ್ , ನಗರಾಧ್ಯಕ್ಷ ಸಿ.ಎನ್.ನವೀನ್, ರಾಮಕೃಷ್ಣಪ್ಪ,ಆನಂದ್ ಯಾದವ್, ಶಿವಕುಮಾರ್, ಶಿವಶಂಕರ್, ರವಿ, ಜಬ್ಬೀ ಉಲ್ಲಾ,ಶ್ರೀನಿವಾಸ್, ಶಂಕರ್, ಎಂ.ಸಿ.ರವಿ, ಹುಲ್ಲೂರು ತಿಮ್ಮರಾಯಪ್ಪ, ಮಾದೇಗೌಡ, ಲವ,ಕುಶ ಪಿಡಿಓ ಚಂಗಲರಾಯಗೌಡ, ಸೇರಿದಂತೆ ಹಲವಾರು ಕಾರ್ಯಕರ್ತರು, ಮುಖಂಡರು, ಭಾಗವಹಿಸಿದ್ದರು.

# ಹಾಲಪ್ಪ ಆಚಾರ್ ನನ್ನ ಹಿತೈಷಿ: ಬಸವರಾಜ್ ರಾಯರಡ್ಡಿ

**ಕುಕನೂರು:** ಮಾಜಿ ಸಚಿವ ಬಿಜೆಪಿ ಪಕ್ಷದ ಹಿರಿಯ ಮುಖಂಡ ಹಾಲಪ್ಪ ಆಚಾರ್ ಅವರು ನನ್ನ ಹಿತೈಷಿ, ಮೊದಲಿನಿಂದಲೂ ಅವರು ನನ್ನ ಆತ್ಮೀಯ ಸ್ನೇಹಿತರು,ಈಗಲೂ ಅಷ್ಟೇ ಎಂದು ಕಾಂಗ್ರೆಸ್ ಶಾಸಕ, ಸಿ ಎಂ ಆರ್ಥಿಕ ಸಲಹೆಗಾರ ಬಸವರಾಜ್ ರಾಯರಡ್ಡಿ ಹೇಳಿದ್ದಾರೆ.

ಸೋಮವಾರ ಅಡೂರು ಗ್ರಾಮದ ಮೃತ ಬಾಣಂತಿ ರೇಣುಕಾ ಪ್ರಕಾಶ್ ಹಿರೇಮನಿ ಕುಟುಂಬದವರನ್ನು ಭೇಟಿ ಮಾಡಿ ನಂತರ ಕುಕನೂರು ಪ್ರವಾಸಿ ಮಂದಿರದಲ್ಲಿ ಮಾಧ್ಯಮದವರೊಂದಿಗೆ ಮುಕ್ತವಾಗಿ ಮಾತನಾಡಿದ ಶಾಸಕ ರಾಯರಡ್ಡಿ, ಬಿಜೆಪಿ ಪಕ್ಷದ ಹಾಲಪ್ಪ ಆಚಾರ್ ಸದಾ ನಮ್ಮ ವೆಲ್ ವಿಷರ್ ನಾವಿಬ್ಬರು ಆತ್ಮೀಯ ಸ್ನೇಹಿತರು ಈ ಹಿಂದೆ ಇಬ್ಬರೂ ಜೊತೆಗಿದ್ದವರು ಈಗಲೂ ಅಷ್ಟೇ ಎಂದು ಹೇಳಿದ್ದಾರೆ .

ಇತ್ತೀಚಿನ ಕುಕನೂರು ಪಟ್ಟಣದ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯ ನಂತರ ನಡೆದ ಬೆಳವಣಿಗೆ ಹಿನ್ನೆಲೆ ಮಾತನಾಡಿದ ರಾಯರಡ್ಡಿ, ಹೌದು ಹಾಲಪ್ಪ ಆಚಾರ್ ಹೇಳಿದಂತೆ ನನಗೆ ಸಹಕಾರಿ ಕ್ಷೇತ್ರದ ಯಾವುದೇ ಗಂಧ, ಗಾಳಿ ಗೊತ್ತಿಲ್ಲ, ಆದರೆ ನಾನು ಕಾನೂನು ಬಲ್ಲವನಾಗಿದ್ದೇನೆ, ಕಾನೂನಿನ ಬಗ್ಗೆ ವಿಸ್ತೃತ ಅರಿವಿದೆ ಎಂದರು.

ಕಳೆದ ತಿಂಗಳಲ್ಲಿ ನಡೆದ ಕುಕನೂರು ಪಟ್ಟಣದ ರೈತರ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯು ರಾಜಕೀಯ ಕೆಸರೇರಚಾಟಕ್ಕೆ ಕಾರಣವಾಗಿತ್ತು.

ತಾಲೂಕಿನಲ್ಲಿ ಬಿಜೆಪಿ, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ರಾಜಕೀಯ ಘರ್ಷಣೆ, ಪ್ರತಿಭಟನೆ ನಡೆದು. ಪರಸ್ಪರ ಆರೋಪ, ಪ್ರತ್ಯಾರೋಪ ಮಾತ್ರವಲ್ಲ ವಯಕ್ತಿಕ ನಿಂದನೆವರೆಗೂ ಕಾರಣವಾಗಿ ಕೊನೆಗೆ ಪೊಲೀಸ್ ಸ್ಟೇಷನ್ ಮೆಟ್ಟಿಲೇರಿತ್ತು. ಆದರೂ ಇದ್ಯಾವುದರ ಗೊಡವೆ, ಗೋಜು ನಮಗೆ ಬೇಕಿಲ್ಲ ಅನ್ನುವಂತೆ ಮಾಜಿ ಸಚಿವ ಹಾಲಪ್ಪ ಆಚಾರ್ ಮತ್ತು ತಾವು ಈಗಲೂ ಆತ್ಮೀಯ ಸ್ನೇಹಿತರು ಎಂದು ಶಾಸಕ ಬಸವರಾಜ್ ರಾಯರಡ್ಡಿ ಮಾಧ್ಯಮ ಪ್ರತಿನಿಧಿಗಳ ಮುಂದೆ ಮನಸಾರೆ ಹೇಳಿರುವುದು ತಾಲೂಕಿನಲ್ಲಿ ಮತ್ತೊಂದು ಮಜಲಿನ ಚರ್ಚೆಗೆ ನಾಂದಿ ಹಾಡಿದೆ ಎನ್ನಬಹುದು.

# ಜ.14ಕ್ಕೆ ರೈತರೊಂದಿಗೆ ಸಂಕ್ರಾಂತಿ ವಿಶೇಷ ಕಾರ್ಯಕ್ರಮ

ನಾಗಮಂಗಲ: ರೈತರೊಂದಿಗೆ ಸಂಕ್ರಾಂತಿ ಸಂಭ್ರಮ ವಿಶೇಷ ಕಾರ್ಯಕ್ರಮವನ್ನು ದೇವಲಾಪುರದಲ್ಲಿ ಜನವರಿ 14ರಂದು ನಡೆಸಲು ಜಿಲ್ಲಾಧಿಕಾರಿ ಕುಮಾರ ರವರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಯಿತು. ಅವರು ನಾಗಮಂಗಲ ತಾಲೂಕು ದೇವಲಾಪುರ ಹೋಬಳಿಯ ಕೇಂದ್ರದಲ್ಲಿ ಜಿಲ್ಲಾಡಳಿತದ ವತಿಯಿಂದ ರೈತರೊಂದಿಗೆ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮದ ಪೂರ್ವಭಾವಿ ಸಭೆಯನ್ನು ಕರ್ನಾಟಕ ಪಬ್ಲಿಕ್ ಶಾಲೆಯ ಶಾಲೆಯಲ್ಲಿ ಜಿಲ್ಲಾಧಿಕಾರಿಯವರ ನೇತೃತ್ವ ದಲ್ಲಿ ಜಿಲ್ಲೆಯ ಎಲ್ಲ ಇಲಾಖೆ ಅಧಿಕಾರಿಗಳು ತಾಲೂಕ್ ಅಧಿಕಾರಿಗಳು ಭಾಗವಹಿಸಿದ್ದರು.

ರೈತರೊಂದಿಗೆ ಸಂಕ್ರಾಂತಿ ಸಂಭ್ರಮದ ಕಾರ್ಯಕ್ರಮದ ರೂಪುರೇಷೆಗಳನ್ನು ಸಭೆಯಲ್ಲಿ ಪ್ರಸ್ತಾವನೆ ಮಾಡಿದ್ದು ಕಾರ್ಯಕ್ರಮವನ್ನು ಪೂರ್ವಭಾವಿ ಆಯೋಜನೆಗೆ ದೇವಲಾಪುರ ಹೋಬಳಿಯ ಪಂಚಾಯಿತಿ ಮಟ್ಟದಲ್ಲಿಯೂ ಹಾಗೂ ಪಂಚಾಯತಿಗೆ ಸೇರಿರುವ ಗ್ರಾಮಗಳಿಗೂ ಪ್ರಚಾರದ ವ್ಯವಸ್ಥೆ ಮುಖ್ಯವಾಗಿದ್ದು ಇಂದಿನಿಂದಲೇ ಈ



ವ್ಯವಸ್ಥೆ ಜಾರಿಯಾಗಬೇಕೆಂದು ಸಭೆಯಲ್ಲಿ ತಿಳಿಸಲಾಯಿತು.

ಸಂಭ್ರಮದ ವಿಶೇಷದಲ್ಲಿ ದೇಶಿಯ ಕ್ರೀಡೆಗಳನ್ನು ಮಾಡಲಾಗಿದ್ದು ಹಾಗೂ ಕೃಷಿ ಇಲಾಖೆಗೆ ಸಂಬಂಧಪಟ್ಟಂತಹ ಮಳಿಗೆಗಳು ಆಹಾರ ಮಳಿಗೆಗಳು ಮೆರವಣಿಗೆಯಲ್ಲಿ ಎತ್ತಿನ ಗಾಡಿಗಳ ಪೂರ್ಣ ಕುಂಭ ಸ್ವಾಗತ ಕಬಡ್ಡಿ ಹಾಗೂ ಕುಸ್ತಿ ಪಂದ್ಯಾವಳಿ. ವಾಲಿಬಾಲ್ ಪಂದ್ಯಾವಳಿ ಹಗ್ಗ ಜಗ್ಗಾಟ ಇತರೆ ಕ್ರೀಡೆಗಳನ್ನು ಏರ್ಪಡಿಸಲಾಗಿದ್ದು ಗ್ರಾಮೀಣ ಸೊಗಡಿನ ಸಂಬಂಧಪಟ್ಟಂತಹ ಆಟಗಳಿದ್ದರೂ ಅವಕಾಶವಿದ್ದು ಈ ಎಲ್ಲಾ ವ್ಯವಸ್ಥೆಗಳನ್ನು ಸಂಬಂಧಪಟ್ಟ ಅಧಿಕಾರಿಗಳ ನಿರ್ವಹಣೆಗೆ ತರಲಾಯಿತು.

ಈ ಪೂರ್ವಭಾವಿ ಸಭೆಯಲ್ಲಿ ಉಪ ವಿಭಾಗಾಧಿಕಾರಿ ಶ್ರೀನಿವಾಸ್. ಸಿಇಓ ಶೇಕ್ ತನ್ವೀರ್ ಆಸಿಫ್ ಉಪಸ್ಥಿತರಿದ್ದರು.ಜಿಲ್ಲೆಯ ಕ್ರೀಡಾ ಇಲಾಖೆ ಕೃಷಿ ಇಲಾಖೆ ಆರೋಗ್ಯ ಇಲಾಖೆ ವಾರ್ತಾ ಮತ್ತು ಪ್ರಚಾರ ಇಲಾಖೆ ತೋಟಗಾರಿಕೆ ಶಿಕ್ಷಣ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲೂಕ ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಚಿಕ್ಕ ತಿರುಪತಿಯಲ್ಲಿ ಕಣ್ಣಿನ ತಪಾಸಣೆ ಶಿಬಿರ

ಮಾಲೂರು : ತಾಲೂಕಿನ ಚಿಕ್ಕ ತಿರುಪತಿಯಲ್ಲಿ ಚಿಕ್ಕ ಮಕ್ಕಳಿನಿಂದ ವಯಸ್ಕರ ವರೆಗೆ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಆಲಂಬಾಡಿಯ ಜನನಿ ಚಾರಿಟೇಬಲ್ ಟ್ರಸ್ಟ್ ಮತ್ತು ಚಿಕ್ಕ ತಿರುಪತಿಯ ಯೋಗಿ ವೇಮನ ಚಾರಿಟೇಬಲ್ ಟ್ರಸ್ಟ್ ಹಾಗೂ ಕೋಲಾರ ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಬೆಂಗಳೂರಿನ ಶಂಕರ ಕಣ್ಣಿನ ಆಸ್ಪತ್ರೆ ವತಿಯಿಂದ ಚಿಕ್ಕ ಮಕ್ಕಳಿನಿಂದ ವಯಸ್ಕರ ವರೆಗೆ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಭಾನುವಾರ ಹಮ್ಮಿಕೊಳ್ಳಲಾಗಿತ್ತು.

ಇದೇ ಸಂದರ್ಭದಲ್ಲಿ ಚಿಕ್ಕ ತಿರುಪತಿಯ ಶ್ರೀ ಹರಿ ಕನ್ವೆನ್ಷನ್ ಹಾಲ್ ಮಾಲಿಕರಾದ ಟಿ ವಿ ಸತೀಶ್ ರವರು ಸುದ್ದಿಗಾರರೊಂದಿಗೆ ಮಾತನಾಡಿ ಕಣ್ಣು ಮಾನವನ ದೇಹದ ಅತೀ ಸೂಕ್ಷ್ಮವಾದ ಅಂಗ. ಇದನ್ನು ಅತೀ ಜಾಗರೂಕತೆಯಿಂದ ಕಾಪಾಡಿಕೊಳ್ಳಬೇಕು ಎಂದರು. ಮತ್ತೆ ಬಡ ಜನರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರಗಳು ಅನುಕೂಲವಾಗಿವೆ ಎಂದರು,

ಇಂದಿನ ಒತ್ತಡದ ಜೀವನ ಆಹಾರ ಕ್ರಮದಿಂದ



ನಿತ್ಯ ಆರೋಗ್ಯದಲ್ಲಿ ಒಂದಲ್ಲಾ ಒಂದು ವೈಪರೀತ್ಯ ಕಾಣುತ್ತಿದ್ದೇವೆ. ಪ್ರತಿಯೊಬ್ಬರು ಎರಡ್ಮೂರು ತಿಂಗಳಿಗೆ ಒಂದು ಬಾರಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಮತ್ತು ದೇಹದ ಆರೋಗ್ಯ ರಕ್ಷಣೆಯ ಜತೆಗೆ ಕಣ್ಣಿನ ಆರೋಗ್ಯವನ್ನೂ ಕಾಪಾಡಿಕೊಳ್ಳಬೇಕು, ಎಂದರು.

ಚಿಕ್ಕ ತಿರುಪತಿಯ ಶ್ರೀ ಹರಿ ಕನ್ವೆನ್ಷನ್ ಹಾಲ್ ನಲ್ಲಿ ಭಾನುವಾರ ಬೆಳಿಗ್ಗೆಯಿಂದಲೇ ನೂರಕ್ಕೂ ಹೆಚ್ಚು ಜನ ಸಾಲುಗಟ್ಟಿ ನಿಂತು ಕಣ್ಣಿನ ತಪಾಸಣೆ ಮಾಡಿಸಿಕೊಂಡರು, ಕಣ್ಣಿನ ತಪಾಸಣೆಯನ್ನು ಶಂಕರ ಕಣ್ಣಿನ ಆಸ್ಪತ್ರೆಯ ವೈದ್ಯರಾದ ಯಶಸ್ವಿನಿ ಮತ್ತು ಉರೋಜ್ ಹಾಗೂ ಲಾರಿಕ ರವರು ನಡೆಸಿದರು,

ಬೆಂಗಳೂರಿನ ಶಂಕರ ಕಣ್ಣಿನ ಆಸ್ಪತ್ರೆಯ ವೈದ್ಯರ ತಂಡ ಕಣ್ಣಿನ ತಪಾಸಣೆ ನಡೆಸಿ 35 ಜನ ಶಸ್ತ್ರ ಚಿಕಿತ್ಸೆಗೆ ಆಯ್ಕೆಯಾದರು , ಶಸ್ತ್ರ ಚಿಕಿತ್ಸೆ ಅಗತ್ಯವುಳ್ಳವರಿಗೆ ಆಸ್ಪತ್ರೆಗೆ ಉಚಿತ ಶಸ್ತ್ರ ಚಿಕಿತ್ಸೆಗೆ ಕರೆದೋಯ್ದರು ಮತ್ತು ಕನ್ನಡಕಕ್ಕೆ 32 ಜನ ಆಯ್ಕೆಯಾಗಿದ್ದು ಕೆಲವೇ ದಿನಗಳಲ್ಲಿ ಉಚಿತವಾಗಿ ವಿತರಿಸಲಾಗುವುದು ಎಂದು ತಿಳಿಸಲಾಯಿತು.

ಕಣ್ಣಿನ ತಪಾಸಣಾ ಶಿಬಿರದಲ್ಲಿ ಚಿಕ್ಕ ತಿರುಪತಿಯ ಶ್ರೀ ಹರಿ ಕನ್ವೆನ್ಷನ್ ಹಾಲ್ ನ ಮಾಲಿಕರಾದ ಟಿ ವಿ ಸತೀಶ್, ಜನನಿ ಚಾರಿಟೇಬಲ್ ಟ್ರಸ್ಟ್ ನ ಕಾರ್ಯದರ್ಶಿ ಡಾ ರಾಮಾನುಜ, ಸಹ ಕಾರ್ಯದರ್ಶಿ ನಾರಾಯಣಪ್ಪ, ಖಜಾಂಚಿ ಮೋಹನ್ ಸುಂದರಮ್, ರವಿ ಪ್ರಕಾಶ್, ಶಂಕರ ಕಣ್ಣಿನ ಆಸ್ಪತ್ರೆಯ ಸಿಬ್ಬಂದಿ ಅವಿನಾಶ್, ಮಹೇಶ್, ರಮ್ಯಾ, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಪಡೆಗಳನ್ನು ಹಿಂಪಡೆಯದಿದ್ದರೆ ಕದನ ವಿರಾಮ ಒಪ್ಪಂದ ಅಂತ್ಯ

**ಜೆರುಸಲೇಂ:** ಲಿಟಾನಿ ನದಿಯ ಉತ್ತರ ದಿಕ್ಕಿನಲ್ಲಿ ನಿಯೋಜಿಸಲಾಗಿರುವ ಪಡೆಗಳನ್ನು ಹಿಂತೆಗೆದುಕೊಳ್ಳದಿದ್ದರೆ ಇಸ್ರೇಲ್ ಕದನ ವಿರಾಮ ಒಪ್ಪಂದವನ್ನು ಮುರಿಯಲಿದೆ ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹಿಜ್ಬುಲ್ಲಾಗೆ ಕಠಿಣ ಎಚ್ಚರಿಕೆ ನೀಡಿದ್ದಾರೆ.

ಕದನ ವಿರಾಮದ ನಿಯಮಗಳ ಪ್ರಕಾರ, ಲಿಟಾನಿ ನದಿಯ ಉತ್ತರ ದಿಕ್ಕಿನಲ್ಲಿ ನಿಯೋಜಿಸಲಾಗಿರುವ ಹೋರಾಟಗಾರರು ಮತ್ತು ಶಸ್ತ್ರಾಸ್ತ್ರಗಳನ್ನು ಜನವರಿ 26ರೊಳಗೆ ಹಿಜ್ಬುಲ್ಲಾ ಹಿಂತೆಗೆದುಕೊಳ್ಳಬೇಕಿದೆ. ಅದೇ ದಿನಾಂಕದೊಳಗೆ, ವಿಶ್ವಸಂಸ್ಥೆ ಗುರುತಿಸಿರುವ ಲೆಬನಾನ್ ಮತ್ತು ಇಸ್ರೇಲ್ ನಡುವಿನ ಗಡಿಯಾಗಿರುವ ಬ್ಲೂ ಲೈನ್‌ನ ದಕ್ಷಿಣ ದಿಕ್ಕಿನಿಂದ ಇಸ್ರೇಲ್ ಕೂಡ ತನ್ನ ಪಡೆಗಳನ್ನು ಸಂಪೂರ್ಣವಾಗಿ ಹಿಂತೆಗೆದುಕೊಳ್ಳಬೇಕಿದೆ. ನಂತರ ಈ ಪ್ರದೇಶದಲ್ಲಿ ಲೆಬನಾನ್ ಸೇನೆ ತನ್ನ ಪಡೆಗಳನ್ನು ನಿಯೋಜಿಸಲಿದೆ ಎಂದು ತಿಳಿಸಿದರು. ಇಸ್ರೇಲ್‌ನ ಉತ್ತರ ಕಮಾಂಡ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಭಾನುವಾರ ಮಾತನಾಡಿದ ಕಾಟ್ಜ್, ಇಸ್ರೇಲ್ ಲೆಬನಾನ್ ಒಪ್ಪಂದವನ್ನು ಎತ್ತಿಹಿಡಿಯಲು ಬಯಸುತ್ತದೆ ಎಂದು ಹೇಳಿದರು. ಆದರೆ ಈಗಲೂ ಹಿಜ್ಬುಲ್ಲಾ ತನ್ನ ಪಡೆಗಳನ್ನು ವಾಪಸು ಕರೆಸಿಕೊಂಡಿಲ್ಲ, ಹಿಜ್ಬುಲ್ಲಾ ಷರತ್ತು ಪಾಲಿಸದಿದ್ದರೆ ಶಾಂತಿ ಒಪ್ಪಂದ ಜಾರಿಯಲ್ಲಿರುವುದಿಲ್ಲ ಎಂದು ಅವರು ಹೇಳಿದರು.

2023ರ ಅಕ್ಟೋಬರ್‌ನಲ್ಲಿ ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವೆ ಕದನ ಆರಂಭವಾಗಿತ್ತು. ಶಾಂತಿ ಒಪ್ಪಂದದ ನಂತರ ಯುದ್ಧ ನಿಂತಿದೆಯಾದರೂ, ಇಸ್ರೇಲ್ ಈಗಲೂ ಲೆಬನಾನ್ ಮೇಲೆ ಸೀಮಿತ ದಾಳಿಗಳನ್ನು ಮುಂದುವರೆಸಿದೆ. ಕದನ ವಿರಾಮ ಉಲ್ಲಂಘಿಸುತ್ತಿರುವ ಹಿಜ್ಬುಲ್ಲಾ ನೆಲೆಗಳ ಮೇಲೆ ಮಾತ್ರ ಸೀಮಿತ ದಾಳಿ ನಡೆಸುತ್ತಿರುವುದಾಗಿ ಇಸ್ರೇಲ್ ಹೇಳಿಕೊಂಡಿದೆ. ಆದರೆ ಇಸ್ರೇಲ್ ಹಲವಾರು ಬಾರಿ ಕದನ ವಿರಾಮ ಉಲ್ಲಂಘಿಸಿದೆ ಎಂದು ಲೆಬನಾನ್ ಮತ್ತು ಫ್ರಾನ್ಸ್ ಆರೋಪಿಸಿವೆ.

"ಇಸ್ರೇಲ್ ಮತ್ತು ಲೆಬನಾನ್ ಎರಡೂ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ನಿರ್ಣಯ 1701 ರ ಸಂಪೂರ್ಣ ಅನುಷ್ಠಾನಕ್ಕೆ ಮತ್ತು ಬಾಕಿ ಇರುವ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವ ಬದ್ಧತೆಯನ್ನು ದೃಢಪಡಿಸಿವೆ.

ಒಪ್ಪಂದದಲ್ಲಿ ಒಪ್ಪಿಕೊಂಡಂತೆ ಹೊಸದಾಗಿ ಸ್ಥಾಪಿಸಲಾದ ಕಾರ್ಯವಿಧಾನವನ್ನು ಅಳವಡಿಸಿಕೊಳ್ಳಲು ಎರಡೂ ಪಕ್ಷಗಳಿಗೆ ಕರೆ ನೀಡಲಾಗಿದೆ" ಎಂದು ಯುನಿಫಿಲ್ ತಿಳಿಸಿದೆ.

ಇಸ್ರೇಲ್ ಮತ್ತು ಲೆಬನಾನ್ ನಡುವಿನ ಕದನ ವಿರಾಮ ಒಪ್ಪಂದದ ಪ್ರಕಾರ ಇಸ್ರೇಲ್ ತನ್ನ ಸೈನ್ಯವನ್ನು ಸಮಯಕ್ಕೆ ಸರಿಯಾಗಿ ಹಿಂತೆಗೆದುಕೊಳ್ಳುವಂತೆ ಮತ್ತು ಲೆಬನಾನ್ ತನ್ನ ಸಶಸ್ತ್ರ ಪಡೆಗಳನ್ನು ದಕ್ಷಿಣ ಲೆಬನಾನ್‌ನಲ್ಲಿ ನಿಯೋಜಿಸುವಂತೆ ಯುನಿಫಿಲ್ ಒತ್ತಾಯಿಸಿದೆ.

# ಅಫ್ಘಾನಿಸ್ತಾನದ ಮೇಲೆ ಮತ್ತಷ್ಟು ದಾಳಿ



**ಇಸ್ಲಾಮಾಬಾದ್:** ಅಫ್ಘಾನಿಸ್ತಾನದ ಪಕ್ತಿಕಾ ಪ್ರಾಂತ್ಯದ ಮೇಲೆ ಇತ್ತೀಚೆಗೆ ತಾನು ನಡೆಸಿದ ವೈಮಾನಿಕ ದಾಳಿಯನ್ನು ಸಮರ್ಥಿಸಿಕೊಂಡಿರುವ ಪಾಕಿಸ್ತಾನ ಸರ್ಕಾರ, ಅಗತ್ಯ ಬಿದ್ದರೆ ಅಫ್ಘಾನಿಸ್ತಾನದೊಳಗಿನ ತೆಹ್ರೀಕ್-ಎ-ತಾಲಿಬಾನ್ ಪಾಕಿಸ್ತಾನ (ಟಿಟಿಪಿ) ಸಂಘಟನೆಯ ಅಡಗುತಾಣಗಳ ಮೇಲೆ ಮತ್ತೆ ದಾಳಿ ನಡೆಸುವುದಾಗಿ ಸೋಮವಾರ ಹೇಳಿದೆ.

"ಅಫ್ಘಾನಿಸ್ತಾನದ ಭೂಪ್ರದೇಶವನ್ನು ಬಳಸಿಕೊಂಡು ನಮ್ಮ ಮೇಲೆ ದಾಳಿ ಮಾಡಿದರೆ ಪಾಕಿಸ್ತಾನಕ್ಕೆ ಪ್ರತಿದಾಳಿ ನಡೆಸುವ ಕಾನೂನುಬದ್ಧ ಹಕ್ಕಿದೆ" ಎಂದು ಪ್ರಧಾನಿ ಶೆಹಬಾಜ್ ಷರೀಫ್ ಅವರ ರಾಜಕೀಯ ವ್ಯವಹಾರಗಳ ವಿಶೇಷ ಸಹಾಯಕ ರಾಣಾ ಸನಾವುಲ್ಲಾ ಸೋಮವಾರ ಸ್ಥಳೀಯ ಮಾಧ್ಯಮಗಳಿಗೆ ತಿಳಿಸಿದ್ದಾರೆ.

ತಾಲಿಬಾನ್ ದಂಗೆಕೋರರಿಗೆ ಅಫ್ಘಾನಿಸ್ತಾನ ಸುರಕ್ಷಿತ ಆಶ್ರಯವನ್ನು ಒದಗಿಸುತ್ತಿದೆ ಮತ್ತು ಪಾಕಿಸ್ತಾನದೊಳಗೆ ಭಯೋತ್ಪಾದಕ ಚಟುವಟಿಕೆ ನಡೆಸಲು ಅವರನ್ನು ಬೆಂಬಲಿಸುತ್ತಿದೆ ಎಂದು ಇಸ್ಲಾಮಾಬಾದ್ ಆರೋಪಿಸಿದೆ.

ರಾಜಕೀಯ ವ್ಯವಹಾರಗಳ ಉಪ ವಿದೇಶಾಂಗ ಸಚಿವ ಶೇರ್ ಮೊಹಮ್ಮದ್ ಅಬ್ಬಾಸ್ ಸ್ತಾನಿಕಜ್ಯೆ, ಪರಮಾಣು ಬಾಂಬ್‌ಗಿಂತಲೂ ಪ್ರಬಲವಾಗಿ ಕೆಲಸ ಮಾಡಬಲ್ಲ ಹೋರಾಟಗಾರರು ನಮ್ಮ ಬಳಿ ಇದ್ದಾರೆ ಎಂದು ಎಚ್ಚರಿಕೆ ನೀಡಿದ್ದರು.

"ಇಸ್ಲಾಮಾಬಾದ್ ತನ್ನ ಪಶ್ಚಿಮಕ್ಕಿರುವ ನೆರೆಯ ರಾಷ್ಟ್ರದ ತಾಳ್ಮೆಯನ್ನು ಪರೀಕ್ಷಿಸುವುದು ಬೇಡ. ಅಫ್ಘಾನಿಸ್ತಾನ ಸರ್ಕಾರದ ತಾಳ್ಮೆಯನ್ನು ಪಾಕಿಸ್ತಾನ ಹಗುರವಾಗಿ ತೆಗೆದುಕೊಳ್ಳುವುದು ಸರಿಯಲ್ಲ. ಪರಮಾಣು ಬಾಂಬ್‌ಗೆ ಸಮನಾದ ಸಾಮರ್ಥ್ಯ ಹೊಂದಿರುವ ಹೋರಾಟಗಾರರು ನಮ್ಮಲ್ಲಿದ್ದಾರೆ. ನಾವು ಮಹಮೂದ್ ಘಜ್ನವಿ, ಬಾಬರ್ ಮತ್ತು ಅಹ್ಮದ್ ಷಾ ಅಬ್ದಾಲಿ ಅವರ ಕೇವಲ ಐವರು ಪುತ್ರರನ್ನು ನಮ್ಮ ಗಡಿಯಿಂದ ನಿಮ್ಮ ಕಡೆಗೆ ಬಿಟ್ಟರೆ ಸಾಕು, ಹಿಂದೂ ಮಹಾಸಾಗರಕ್ಕೂ ಅವರನ್ನು ತಡೆಯಲು ಸಾಧ್ಯವಾಗದು" ಎಂದು ಹೇಳಿದರು.

# ಫ್ಲಿಪ್‌ಕಾರ್ಟ್, ಅಮೆಜಾನ್ ವಿರುದ್ಧ ಸಿಸಿಐ ತನಿಖೆ

## ಕರ್ನಾಟಕ ಹೈಕೋರ್ಟ್‌ಗೆ ಅರ್ಜಿ ವರ್ಗಾಯಿಸಿದ ಸುಪ್ರೀಂಕೋರ್ಟ್



**ನವದೆಹಲಿ:** ಇ-ಕಾಮರ್ಸ್ ಫ್ಲಾಟ್‌ಫಾರ್ಮ್‌ಗಳಾದ ಅಮೆಜಾನ್ ಮತ್ತು ಫ್ಲಿಪ್‌ಕಾರ್ಟ್‌ನಲ್ಲಿ ನಡೆದ ಅವ್ಯವಹಾರಗಳ ಕುರಿತು ಭಾರತದ ಸ್ಪರ್ಧಾ ಆಯೋಗ (ಸಿಸಿಐ) ನಡೆಸುತ್ತಿರುವ ತನಿಖೆಗೆ ತಡೆ ನೀಡಬೇಕು ಎಂದು ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಸುಪ್ರೀಂಕೋರ್ಟ್ ಕರ್ನಾಟಕದ ಹೈಕೋರ್ಟ್‌ಗೆ ವರ್ಗಾಯಿಸಿ, ಈ ಅರ್ಜಿಗಳನ್ನು ಅಲ್ಲಿಯೇ ಇತ್ಯರ್ಥ ಮಾಡಲು ಸೂಚಿಸಿದೆ.

ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ಅಭಯ್ ಎಸ್. ಓಕಾ ಮತ್ತು ನ್ಯಾಯಮೂರ್ತಿ ಉಜ್ಜಲ್ ಭುಯಾನ್ ಅವರಿದ್ದ ಪೀಠದ ಮುಂದೆ ಈ ಅರ್ಜಿಗಳ ವಿಚಾರಣೆ ಸೋಮವಾರ ನಡೆಯಿತು. ನ್ಯಾಯೋಚಿತ ವ್ಯಾಪಾರ ನಿಯಂತ್ರಕ ಸಂಸ್ಥೆಯಾದ ಭಾರತೀಯ ಸ್ಪರ್ಧಾತ್ಮಕ ಆಯೋಗವು (ಸಿಸಿಐ) ತನ್ನ ವಿರುದ್ಧ ಸಲ್ಲಿಸಲಾದ ಅರ್ಜಿಗಳ ವಿರುದ್ಧ ವಾದಿಸಿತು.

ಬಳಿಕ ಸುಪ್ರೀಂಕೋರ್ಟ್, ಎಲ್ಲ ಅರ್ಜಿಗಳನ್ನು ಕರ್ನಾಟಕ ಹೈಕೋರ್ಟ್‌ನ ಏಕಸದಸ್ಯ ಪೀಠಕ್ಕೆ ವರ್ಗಾಯಿಸಲಾಗುವುದು. ಹಾಗೊಂದು ವೇಳೆ ವರ್ಗವಾದ ಅರ್ಜಿಗಳು ಇತ್ಯರ್ಥವಾಗದೇ ಹೋದಲ್ಲಿ, ವಿಚಾರಣೆ ನಡೆಸುತ್ತಿರುವ ನ್ಯಾಯಾಧೀಶರು ಹೆಚ್ಚಿನ ಸಮಯ ಪಡೆದು ಪ್ರಕರಣ ಮುಗಿಸಬೇಕು ಎಂದು ಸಲಹೆ ನೀಡಿತು.

ಕರ್ನಾಟಕ ಹೈಕೋರ್ಟ್ ಸೇರಿದಂತೆ ಯಾವುದೇ ಹೈಕೋರ್ಟ್‌ಗಳಲ್ಲಿ ಇಂತಹ ಪ್ರಕರಣಗಳು ಬಾಕಿ ಇದ್ದಲ್ಲಿ ಆ ಕೋರ್ಟ್‌ಗಳು ನೀಡುವ ಆದೇಶಗಳು ಅಂತಿಮವಾಗಿರುತ್ತವೆ ಎಂದು ಇದೇ ವೇಳೆ ಸುಪ್ರೀಂಕೋರ್ಟ್ ಹೇಳಿದೆ.

**ರಿಟ್ ಅರ್ಜಿ ತಿರಸ್ಕರಿಸಿದ್ದ ಹೈಕೋರ್ಟ್:** ಇದಕ್ಕೂ ಮೊದಲು, ಫ್ಲಿಪ್‌ಕಾರ್ಟ್ ಮತ್ತು ಅಮೆಜಾನ್ ಇ-ಕಾಮರ್ಸ್ ಪ್ಲಾಟ್‌ಫಾರ್ಮ್‌ಗಳು ತಮ್ಮ ವಿರುದ್ಧ ನಡೆಸಲಾಗುತ್ತಿರುವ ತನಿಖೆ ರದ್ದು ಮಾಡಬೇಕು ಎಂದು ಕೋರಿ ಕರ್ನಾಟಕ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದವು. ವಿಚಾರಣೆಯ ವೇಳೆ ಸಿಸಿಐ ತನಿಖೆಯನ್ನು ಎತ್ತಿಹಿಡಿದ ಕೋರ್ಟ್, ಅರ್ಜಿಗಳನ್ನು ವಜಾಗೊಳಿಸಿತ್ತು. ಸ್ಪರ್ಧಾತ್ಮಕ ವಾತಾವರಣದ ವಿರುದ್ಧ ತನಿಖೆ ನಡೆಸುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ಹೇಳಿತ್ತು.

**ಏನಿದು ಪ್ರಕರಣ:** ಫ್ಲಿಪ್‌ಕಾರ್ಟ್ ಮತ್ತು ಅಮೆಜಾನ್ ಇ-ಕಾಮರ್ಸ್ ಪ್ಲಾಟ್‌ಫಾರ್ಮ್‌ಗಳು ಸ್ಮಾರ್ಟ್‌ಫೋನ್‌ಗಳು ಮತ್ತು ಇತರ ವಸ್ತುಗಳ ವ್ಯವಹಾರದಲ್ಲಿ ಕೆಲವರ ಜೊತೆ ಕೈಜೋಡಿಸಿವೆ. ಮಾರಾಟವು ನ್ಯಾಯಸಮ್ಮತವಾಗಿಲ್ಲ. ಭಾರತದ ಸ್ಪರ್ಧಾತ್ಮಕ ಕಾನೂನುಗಳನ್ನು ಉಲ್ಲಂಘಿಸಿವೆ ಎಂದು ದೆಹಲಿಯ ಸಣ್ಣ ಮತ್ತು ಮಧ್ಯಮ ವ್ಯಾಪಾರ ಮಾಲೀಕರನ್ನು ಪ್ರತಿನಿಧಿಸುವ ವ್ಯಾಪಾರ್ ಮಹಾಸಂಘ (ಡಿವಿಎಂ) ಎರಡು ಅತಿದೊಡ್ಡ ಇ-ಕಾಮರ್ಸ್ ಕಂಪನಿಗಳ ವಿರುದ್ಧ ಸಿಸಿಐಗೆ ದೂರು ನೀಡಿತ್ತು.

# ಚಳಿ: ಉಸಿರುಗಟ್ಟಿ ಒಂದೇ ಕುಟುಂಬದ ಐವರು ಸಾವು

**ಶ್ರೀನಗರ:** ಕಾಶ್ಮೀರದಲ್ಲಿ ತೀವ್ರ ಚಳಿಯು ಪ್ರಾಣಾಂತಕವಾಗಿದೆ. ಶೀತದ ಹೊಡೆತಕ್ಕೆ ಇಲ್ಲಿನ ಜನರು ತತ್ತರಿಸಿ ಹೋಗಿದ್ದಾರೆ. ಮರಗಟ್ಟುವ ಚಳಿ ಮತ್ತು ಅದರಿಂದ ಕಾಪಾಡಿಕೊಳ್ಳಲು ಹೀಟರ್ ಬಳಕೆಯಿಂದ ಉಸಿರುಗಟ್ಟಿ ಈವರೆಗೂ 11 ಮಂದಿ ಸಾವಿಗೀಡಾಗಿದ್ದಾರೆ.

ಶ್ರೀನಗರದಲ್ಲಿ ಬಾಡಿಗೆ ಕೊಠಡಿಯೊಂದರಲ್ಲಿ ಮೂವರು ಅಪ್ರಾಪ್ತ ಮಕ್ಕಳು, ದಂಪತಿ ಸೇರಿ ಐವರು ಮೃತಪಟ್ಟಿದ್ದಾರೆ. ಕುಟುಂಬದ ಸಾವಿಗೆ ಉಸಿರುಗಟ್ಟುವಿಕೆಯೇ ಕಾರಣ ಎಂದು ಶಂಕಿಸಲಾಗಿದೆ. ಈ ದುರಂತ ಘಟನೆಯು ಕಣಿವೆಯಲ್ಲಿನ ವಿಷಯ ಪರಿಸ್ಥಿತಿಗೆ ಸಾಕ್ಷಿಯಾಗಿದೆ.


ಕುಲ್ಗಾಮ್‌ನಲ್ಲಿಯೂ ಇಂಥದ್ದೇ ಘಟನೆ ವರದಿಯಾಗಿದೆ. ನಿಸಾರ್ ಅಹ್ಮದ್ ಖಾನ್ ಎಂಬಾತ ಉಸಿರಾಟ ತೊಂದರೆಗೀಡಾಗಿ ಸಾವನ್ನಪ್ಪಿದ್ದಾನೆ. ಆತನ ತಾಯಿ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ಕಳೆದ ತಿಂಗಳು, ಕುಪ್ವಾರದ ಇಬ್ಬರು ಕಾರ್ಮಿಕರಾದ ಪರ್ವೈಜ್ ಅಹ್ಮದ್ ಖಾನ್, ಮೊಹಮ್ಮದ್ ಯೂಸುಫ್ ಖಾನ್ ಶ್ರೀನಗರದ ಕಮರ್ವಾರಿ ಪ್ರದೇಶದಲ್ಲಿ ಮೃತಪಟ್ಟಿದ್ದರು.

ದೋಡಾ ಜಿಲ್ಲೆಯ ಅತಿಥಿ ಗೃಹದಲ್ಲಿ ಮೂವರು ವ್ಯಕ್ತಿಗಳು ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದ ಘಟನೆ ಡಿಸೆಂಬರ್ 31 ರಂದು ನಡೆದಿತ್ತು. ಅವರಿದ್ದ ಕೋಣೆಯಲ್ಲಿ ಇದ್ದಿಲು ಆಧರಿತ ಹೀಟರ್ ಪತ್ತೆಯಾಗಿತ್ತು. ಉಸಿರುಗಟ್ಟುವಿಕೆಯಿಂದ ಸಾವು ಸಂಭವಿಸಿರಬಹುದು ಎಂದು ಅನುಮಾನಿಸಲಾಗಿದೆ.

ಸರ್ಕಾರ ನೆರವು ನೀಡಲಿ: ಇನ್ನು, ಕಣಿವೆಯಲ್ಲಿ ತೀವ್ರ ಚಳಿಗೆ ಜನರು ಅನಿವಾರ್ಯವಾಗಿ ಹೀಟರ್‌ಗಳನ್ನು ಬಳಕೆ ಮಾಡುವಂತಾಗಿದೆ. ಇದರಿಂದ ಮನೆಯಲ್ಲಿ ಆಮ್ಲಜನಕ ಪ್ರಮಾಣ ಕುಗ್ಗಿ ಇದು ಜೀವಕ್ಕೂ ಅಪಾಯ ತಂದೊಡ್ಡುತ್ತಿದೆ. ಹೀಗಾಗಿ, ಕಾರ್ಬನ್ ಮೊನಾಕ್ಸೈಡ್ ಪತ್ತೆಗೆ ಸಂವೇದಕ ಯಂತ್ರಗಳನ್ನು (ಸೆನ್ಸಾರ್) ಸಬ್ಸಿಡಿ ದರದಲ್ಲಿ ಸರ್ಕಾರ ವಿತರಿಸಬೇಕು ಎಂದು ಕಮ್ಯುನಿಸ್ಟ್ ಪಕ್ಷದ ಶಾಸಕ ಮೊಹಮ್ಮದ್ ಯೂಸುಫ್ ತರಿಗಾಮಿ ಅವರು ಮನವಿ ಮಾಡಿದ್ದಾರೆ.



# ಹೊಸ ವೈರಸ್ ಭಯ ಪಡಬೇಡಿ: ಜೆಪಿ ನಡ್ಡಾ



**ನವದೆಹಲಿ:** 2001ರಲ್ಲಿ ಮೊದಲ ಬಾರಿಗೆ ಗುರುತಿಸಲ್ಪಟ್ಟ ಉಸಿರಾಟದ ವೈರಸ್ ಹ್ಯೂಮನ್ ಮೆಟಾಪ್ನ್ಯೂಮೋವೈರಸ್ ಹೊಸ ವೈರಸ್ ಏನಲ್ಲ. ಇದು ಹಲವು ವರ್ಷಗಳಿಂದ ಜಾಗತಿಕವಾಗಿ ಹರಡುತ್ತಿದೆ. ಹೀಗಾಗಿ, ಹೊಸದಾಗಿ ಆತಂಕ ಪಡಬೇಕಾದ ಅಗತ್ಯವಿಲ್ಲ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ ನಡ್ಡಾ ಇಂದು ಹೇಳಿದ್ದಾರೆ.

"ಹೆಚ್‌ಎಂಪಿವಿ ಹೊಸ ವೈರಸ್ ಅಲ್ಲ ಎಂದು ಆರೋಗ್ಯ ತಜ್ಞರು ಸ್ಪಷ್ಟಪಡಿಸಿದ್ದಾರೆ. ಇದು ಗಾಳಿಯ ಮೂಲಕ, ಉಸಿರಾಟದ ಮೂಲಕ ಹರಡುತ್ತದೆ. ಇದು ಎಲ್ಲಾ ವಯಸ್ಸಿನ ವ್ಯಕ್ತಿಗಳ ಮೇಲೆ ಪರಿಣಾಮ ಬೀರುತ್ತದೆ. ಚಳಿಗಾಲ ಮತ್ತು ವಸಂತಕಾಲದ ಆರಂಭದಲ್ಲಿ ಈ ವೈರಸ್ ಹೆಚ್ಚು ಹರಡುತ್ತದೆ" ಎಂದು ಸಚಿವ ಜೆ.ಪಿ. ನಡ್ಡಾ ಹೇಳಿದ್ದಾರೆ.

ಆರೋಗ್ಯ ಸಚಿವಾಲಯ, ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ (ಐಸಿಎಂಆರ್) ಮತ್ತು ರಾಷ್ಟ್ರೀಯ ರೋಗ ನಿಯಂತ್ರಣ ಕೇಂದ್ರ (ಎನ್‌ಸಿಡಿಸಿ) ಜೊತೆಗೆ ಚೀನಾ ಮತ್ತು ನೆರೆಯ ದೇಶಗಳಲ್ಲಿನ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆ ಈ ಸೋಂಕಿನ ಬಗ್ಗೆ ಎಚ್ಚರ ವಹಿಸಿದೆ.

ಅದರ ವರದಿಯನ್ನು ಶೀಘ್ರದಲ್ಲೇ ನಮ್ಮೊಂದಿಗೆ ಹಂಚಿಕೊಳ್ಳುತ್ತದೆ ಎಂದು ಅವರು ಹೇಳಿದ್ದಾರೆ.

# ಅಸ್ಸಾಂ: ಕಲ್ಲಿದ್ದಲು ಗಣಿಯಲ್ಲಿ ಸಿಲುಕಿದ ಕಾರ್ಮಿಕರ ರಕ್ಷಣೆಗೆ ಸೇನೆ ನೆರವು

ಅಸ್ಸಾಂ: ಅಸ್ಸಾಂನ ದಿಮಾ ಹಸಾವೊ ಜಿಲ್ಲೆಯ ಉಮ್ರಾಂಗ್ಸೊದಲ್ಲಿನ ಕಲ್ಲಿದ್ದಲು ಗಣಿಯಲ್ಲಿ ಸಿಲುಕಿರುವ 9 ಮಂದಿ ಕಾರ್ಮಿಕರ ರಕ್ಷಣೆಗೆ ಭಾರತೀಯ ಸೇನೆ ಮತ್ತು ಅಸ್ಸಾಂ ರೈಫಲ್ಸ್ ಮುಂದಾಗಿದೆ.


ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಹಿರಿಯ ಸೇನಾಧಿಕಾರಿ, ರಕ್ಷಣಾ ಸಾಧನಗಳೊಂದಿಗೆ ಇಂಜಿನಿಯರ್ ಟಾಸ್ಕ್ ಫೋರ್ಸ್, ಡೈವರ್ಸ್ (ಮುಳುಗು ತಜ್ಞರು), ವೈದ್ಯಕೀಯ ತಂಡ, ಭಾರತೀಯ ಸೇನೆ ಮತ್ತು ಅಸ್ಸಾಂ ರೈಫಲ್ಸ್ ಉಮ್ರಾಂಗ್ಸೊದಲ್ಲಿ ಜಂಟಿ ಕಾರ್ಯಾಚರಣೆ ನಡೆಸಲಿವೆ ಎಂದು ತಿಳಿಸಿದ್ದಾರೆ.

ಸೋಮವಾರ ಕಾರ್ಮಿಕರು ಸಿಲುಕಿರುವ ಕುರಿತು ಮಾಹಿತಿ ಹಂಚಿಕೊಂಡಿದ್ದ ಅಸ್ಸಾಂ ಸಿಎಂ ಹಿಮಾಂತ್ ಬಿಸ್ವಾ ಶರ್ಮಾ, ಉಮ್ರಾಂಗ್ಸೊ ಸ್ಥಳದಲ್ಲಿನ ಕಲ್ಲಿದ್ದಲು ಗಣಿಯಲ್ಲಿ ಕನಿಷ್ಠ 9 ಕಾರ್ಮಿಕರು ಸಿಲುಕಿರುವ ಸಾಧ್ಯತೆ ಇದೆ ಎಂದಿದ್ದರು.

ಎಷ್ಟು ಜನ ಗಣಿಯಲ್ಲಿ ಸಿಲುಕಿದ್ದಾರೆ ಎಂಬ ಕುರಿತು ನಿಖರ ಮಾಹಿತಿ ಲಭ್ಯವಾಗಿಲ್ಲ. ಆದರೆ 9 ಕಾರ್ಮಿಕರು ಸಿಲುಕಿರುವ ಸಾಧ್ಯತೆ ಇದ್ದು, ಈ ಪೈಕಿ ಒಬ್ಬಾತ ನೇಪಾಳ ಮತ್ತು ಇನ್ನೋರ್ವ ಪಶ್ಚಿಮ ಬಂಗಾಳ ಹಾಗೂ ಉಳಿದವರು ಅಸ್ಸಾಂನ ವಿವಿಧ ಪ್ರದೇಶದವರು ಎಂದು ಪೊಲೀಸ್ ಮೂಲಗಳು ಮಾಹಿತಿ ನೀಡಿವೆ. ಕಾರ್ಮಿಕರ ರಕ್ಷಣಾ ಕಾರ್ಯಕ್ಕೆ ರಾಜ್ಯ ಸರ್ಕಾರ ಸೇನೆಯ ಸಹಾಯ ಕೋರಿತ್ತು. ಸಾಮಾಜಿಕ ಜಾಲತಾಣದಲ್ಲಿ ಮನವಿ ಮಾಡಿದ್ದ ಸಿಎಂ ಶರ್ಮಾ, ಸದ್ಯ ರಾಜ್ಯದಲ್ಲಿ ಸಾಗುತ್ತಿರುವ ರಕ್ಷಣಾ ಕಾರ್ಯಕ್ಕೆ ನೆರವಾಗುವಂತೆ ಭಾರತೀಯ ಸೇನೆಗೆ ನಾನು ಮನವಿ ಮಾಡುತ್ತೇನೆ. ರಾಜ್ಯ ವಿಪತ್ತು ನಿರ್ವಹಣಾ ಪಡೆ ಮತ್ತು ಹಾಗೂ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಕೂಡ ಎಲ್ಲಾ ರೀತಿಯ ಪ್ರಯತ್ನ ನಡೆಸಲು ಮುಂದಾಗಿದೆ ಎಂದು ತಿಳಿಸಿದ್ದರು.

ಇದಕ್ಕೂ ಮುನ್ನ, ರಾಜ್ಯ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೌಶಿಕ್ ರೈ ಘಟನಾ ಸ್ಥಳಕ್ಕೆ ತೆರಳಿದ್ದರು. ಉಮ್ರಾಂಗ್ಸೊ ಘಟನೆ ಬೇಸರ ಮೂಡಿಸಿದೆ. ಎಷ್ಟು ಕಾರ್ಮಿಕರು ಗಣಿಯೊಳಗೆ ಸಿಲುಕಿದ್ದಾರೆ ಎಂಬ ನಿಖರ ಮಾಹಿತಿ ಇಲ್ಲ. ಡಿಸಿ, ಎಸ್‌ಪಿ ಮತ್ತು ನನ್ನ ಸಹೋದ್ಯೋಗಿ ಕೌಶಿಕ್ ರೈ ಸ್ಥಳದಲ್ಲಿದ್ದಾರೆ. ಕಾರ್ಮಿಕರು ಸುರಕ್ಷಿತವಾಗಿ ಮರಳುವಂತೆ ದೇವರಲ್ಲಿ ಪ್ರಾರ್ಥಿಸುತ್ತೇವೆ ಎಂದು ಸೋಮವಾರ ತಿಳಿಸಿದ್ದರು.

ಕಲ್ಲಿದ್ದಲು ಗಣಿಗಾರಿಕೆಯ ವೇಳೆ ನೀರು ಉಕ್ಕಿದ ಪರಿಣಾಮ 10ರಿಂದ 15 ಕಾರ್ಮಿಕರು ಸಿಲುಕಿದ್ದರು. ಇದರಲ್ಲಿ ಹಲವರು ಹೊರಬಂದಿದ್ದು, 9 ಕಾರ್ಮಿಕರು ಇನ್ನೂ ಅಲ್ಲಿಯೇ ಸಿಲುಕಿರುವ ಸಾಧ್ಯತೆ ಇದೆ.



# ವಿಮಾನದಲ್ಲಿ ಬೆಂಕಿ; ತುರ್ತು ಭೂಸ್ಪರ್ಶ


ನೇಪಾಳದ ಬುದ್ಧ ವಿಮಾನದ ಇಂಜಿನ್‌ನಲ್ಲಿ ಬೆಂಕಿ ಕಾಣಿಸಿಕೊಂಡ ಪರಿಣಾಮ ಕಠ್ಮಂಡುವಿನ ತ್ರಿಭುವನ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ ಮಾಡಲಾಯಿತು.

ವಿಮಾನದ ಎಡ ಇಂಜಿನ್‌ನಲ್ಲಿ ಬೆಂಕಿಯ ಜ್ವಾಲೆ ಕಾಣಿಸಿಕೊಂಡಿತ್ತು, ನಂತರ ತಕ್ಷಣ ವಿಮಾನವನ್ನು ಕೆಳಗಿಳಿಸಲಾಯಿತು. ವಿಮಾನದಲ್ಲಿ ಸಿಬ್ಬಂದಿ ಸೇರಿದಂತೆ 76 ಮಂದಿ ಇದ್ದರು ಎಂದು ತ್ರಿಭುವನ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ತಿಳಿಸಿದೆ.

ವಿಮಾನ ಸಂಖ್ಯೆ 953 ಕಠ್ಮಂಡುವಿನಿಂದ ಭದ್ರಾಪುರಕ್ಕೆ ತೆರಳುತ್ತಿದ್ದಾಗ ವಿಮಾನವು ಅದರ ಎಂಜಿನ್‌ನಲ್ಲಿ ತಾಂತ್ರಿಕ ಸಮಸ್ಯೆ ಎದುರಿಸಿತು ಎಂದು ಏರ್‌ಲೈನ್ಸ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

ಪರಿಣಾಮವಾಗಿ, ವಿಮಾನವನ್ನು ಕಠ್ಮಂಡುವಿಗೆ ತಿರುಗಿಸಲಾಯಿತು ಮತ್ತು ಸುರಕ್ಷಿತವಾಗಿ ತ್ರಿಭುವನ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬೆಳಿಗ್ಗೆ 11.15 ಕ್ಕೆ ಇಳಿಸಲಾಯಿತು ಎಂದು ಅದು ಹೇಳಿದೆ.

ನಮ್ಮ ತಾಂತ್ರಿಕ ತಂಡವು ಪ್ರಸ್ತುತ ವಿಮಾನವನ್ನು ಪರಿಶೀಲಿಸುತ್ತಿದೆ. ಮತ್ತೊಂದು ವಿಮಾನದಲ್ಲಿ ಪ್ರಯಾಣಿಕರನ್ನು ಭದ್ರಾಪುರಕ್ಕೆ ಕಳುಹಿಸಲು ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಬುದ್ಧ ಏರ್‌ನ ಅಧಿಕಾರಿಗಳು ತಿಳಿಸಿದ್ದಾರೆ.



# ಮಾರ್ಚ್ 2026ರೊಳಗೆ ಭಾರತದಿಂದ ನಕ್ಸಲಿಸಂ ನಿರ್ಮೂಲನೆ; ಶಾ ಭರವಸೆ

ನವದೆಹಲಿ: ಮಾರ್ಚ್ 2026ರೊಳಗೆ ಕೇಂದ್ರ ಸರ್ಕಾರವು ಭಾರತದಿಂದ ನಕ್ಸಲಿಸಂ ಅನ್ನು ತೊಡೆದುಹಾಕುತ್ತದೆ ಎಂದು ಭರವಸೆ ನೀಡುತ್ತೇವೆ. ಸೈನಿಕರ ಪ್ರಾಣ ತ್ಯಾಗ ವ್ಯರ್ಥವಾಗಲು ಬಿಡುವುದಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.



ಛತ್ತೀಸ್‌ಗಢದಲ್ಲಿ ನಕ್ಸಲರು ನಡೆಸಿದ ಐಇಡಿ ಸ್ಫೋಟದಲ್ಲಿ ಜಿಲ್ಲಾ ರಿಸರ್ವ್ ಗಾರ್ಡ್‌ನ (ಡಿಆರ್‌ಜಿ) 8 ಯೋಧರು ಮತ್ತು ಓರ್ವ ಚಾಲಕ ಸಾವನ್ನಪ್ಪಿರುವ ಘಟನೆ ಸಂಬಂಧ ತಮ್ಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, 2026ರ ಮಾರ್ಚ್ ಒಳಗೆ ನಕ್ಸಲಿಸಂ ಅನ್ನು ನಿರ್ಮೂಲನೆ ಮಾಡಿಯೇ ತೀರುತ್ತೇವೆ ಎಂದು ಹೇಳಿದ್ದಾರೆ.

ಛತ್ತೀಸ್‌ಗಢದ ಬಿಜಾಪುರದಲ್ಲಿ ಐಇಡಿ ಸ್ಫೋಟದಲ್ಲಿ ಡಿಆರ್‌ಜಿ ಯೋಧರನ್ನು ಕಳೆದುಕೊಂಡ ಸುದ್ದಿಯಿಂದ ನಾನು ತೀವ್ರ ದುಃಖಿತನಾಗಿದ್ದೇನೆ. ವೀರ ಯೋಧರ ಕುಟುಂಬಗಳಿಗೆ ನನ್ನ ಸಂತಾಪವನ್ನು ವ್ಯಕ್ತಪಡಿಸುತ್ತೇನೆ. ಈ ದುಃಖವನ್ನು ಪದಗಳಲ್ಲಿ ವ್ಯಕ್ತಪಡಿಸುವುದು ಅಸಾಧ್ಯ. ಆದರೆ, ನಮ್ಮ ಸೈನಿಕರ ತ್ಯಾಗ ವ್ಯರ್ಥವಾಗುವುದಿಲ್ಲ ಎಂದು ನಾನು ನಿಮಗೆ ಭರವಸೆ ನೀಡುತ್ತೇನೆ. ನಾವು ಮಾರ್ಚ್ 2026ರೊಳಗೆ ನಕ್ಸಲಿಸಂ ಅನ್ನು ಭಾರತದಲ್ಲಿ ಕೊನೆಗೊಳಿಸುತ್ತೇವೆ ಎಂದು ಅವರು ಹೇಳಿದ್ದಾರೆ.

# ವೃದ್ಧರನ್ನು ಗುರಿಯಾಗಿಸಿಕೊಂಡು ಮಾತನಾಡುವುದು ಎಷ್ಟು ಸರಿ?


**ನವದೆಹಲಿ:** ನನ್ನ ತಂದೆ ಅವರ ಜೀವನದುದ್ದಕ್ಕೂ ಶಿಕ್ಷಕರಾಗಿದ್ದರು. ಅವರು ಬಡ ಮತ್ತು ಕೆಳ ಮಧ್ಯಮ ವರ್ಗದ ಸಾವಿರಾರು ಮಕ್ಕಳಿಗೆ ಪಾಠ ಕಲಿಸಿದ್ದಾರೆ. ಅವರಿಗೆ ಈಗ 80 ವರ್ಷ ವಯಸ್ಸಾಗಿದೆ.



ಈಗ ಅವರು ಅನಾರೋಗ್ಯದಿಂದ ಬಳಲುತ್ತಿದ್ದಾರೆ, ಅವರಿಗೆ ಬೇರೊಬ್ಬರ ಸಹಾಯವಿಲ್ಲದೆ ನಡೆಯಲು ಸಹ ಸಾಧ್ಯವಿಲ್ಲ. ಚುನಾವಣೆ ಅಥವಾ ರಾಜಕೀಯದ ಕಾರಣಕ್ಕೆ ಅಂತಹ ವೃದ್ಧರನ್ನು ಗುರಿಯಾಗಿಸಿಕೊಂಡು ಮಾತನಾಡುವುದು ಎಷ್ಟು ಸರಿ ಎಂದು ದೆಹಲಿ ಸಿಎಂ ಆತಿಶಿ ಪ್ರಶ್ನಿಸಿದ್ದಾರೆ.

ದೆಹಲಿ ಮುಖ್ಯಮಂತ್ರಿ ಅತಿಶಿ ತಮ್ಮ ತಂದೆಯನ್ನೇ ಬದಲಾಯಿಸಿಕೊಂಡಿದ್ದಾರೆ ಎಂದು ಬಿಜೆಪಿ ನಾಯಕ ರಮೇಶ್ ಬಿಧುರಿ ಮಾತನಾಡಿದ್ದ ವಿಷಯಕ್ಕೆ ಸಂಬಂಧಿಸಿದಂತೆ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅತಿಶಿ ಬೇಸರ ಹೊರಹಾಕಿ, ಭಾವುಕರಾಗಿ ಮಾತನಾಡಿದರು. ನಮ್ಮ ರಾಜಕಾರಣ ಇಷ್ಟು ಕೀಳುಮಟ್ಟಕ್ಕೆ ಇಳಿದರೆ ಹೇಗೆ 10 ವರ್ಷ ಸಂಸದರಾಗಿದ್ದಾಗ ಕಲ್ಕಾಜಿಗೆ ಏನು ಕೆಲಸ ಮಾಡಿದ್ದಾರೆ ಎನ್ನುವುದನ್ನು ರಮೇಶ್ ಬಿಧುರಿ ತೋರಿಸಬೇಕು. ಅವರ ಕೆಲಸವನ್ನು ತೋರಿಸಿ ಮತ ಕೇಳಬೇಕೇ ಹೊರತು ನನ್ನ ತಂದೆಯನ್ನು ನಿಂದಿಸಿ ಅಲ್ಲ ಎಂದು ಆತಿಶಿ ಹೇಳಿದ್ದಾರೆ.

# ನೇಪಾಳದಲ್ಲಿ 7.1 ತೀವ್ರತೆಯ ಪ್ರಬಲ ಭೂಕಂಪ



**ಕಠ್ಮಂಡು:** ಭಾರತದ ನೆರೆ ದೇಶ ನೇಪಾಳದ ರಾಜಧಾನಿ ಕಠ್ಮಂಡುವಿನಲ್ಲಿ ಇಂದು ಬೆಳಗ್ಗೆ 6.30ರ ಸುಮಾರಿಗೆ ಪ್ರಬಲ ಭೂಕಂಪನ ಸಂಭವಿಸಿದೆ. ರಿಕ್ಟರ್ ಮಾಪಕದಲ್ಲಿ 7.1ರಷ್ಟು ತೀವ್ರತೆ ದಾಖಲಾಗಿದೆ. ಇತ್ತೀಚಿನ ವರದಿಗಳಂತೆ 53 ಮಂದಿ ಸಾವನ್ನಪ್ಪಿದ್ದು, 38 ಮಂದಿ ಗಾಯಗೊಂಡಿದ್ದಾರೆ.

ಹಿಮಾಲಯ ಪ್ರದೇಶ ವ್ಯಾಪ್ತಿಯ ಮೌಂಟ್ ಎವರೆಸ್ಟ್ ಪರ್ವತಕ್ಕೆ ಸಮೀಪದಲ್ಲಿರುವ ಭೂಪ್ರದೇಶದಲ್ಲಿ ಕಂಪನದ ಅನುಭವವಾಗಿದೆ. ನೇಪಾಳದ ಲಾಬ್ಚೆ ಎಂಬಲ್ಲಿಂದ ಸುಮಾರು 93 ಕಿಲೋ ಮೀಟರ್ ದೂರದ ಚೀನಾದ ಟಿಬೆಟ್‌ನಲ್ಲಿ ವ್ಯಾಪಿಸಿರುವ ಪರ್ವತ ಗಡಿ ಪ್ರದೇಶಗಳಲ್ಲಿ ಭೂಕಂಪನದ ಕೇಂದ್ರ ಬಿಂದುವನ್ನು ಗುರುತಿಸಲಾಗಿದೆ ಎಂದು ಯುಎಸ್ ಜಿಯಾಲಾಜಿಕಲ್ ಸರ್ವೇ ಮಾಹಿತಿ ನೀಡಿದೆ. ಇಲ್ಲಿಂದ ಸುಮಾರು 200 ಕಿಲೋ ಮೀಟರ್ ದೂರದ ದೇಶದ ಆಗ್ನೇಯ ದಿಕ್ಕಿನಲ್ಲಿರುವ ಕಠ್ಮಂಡುವಿನಲ್ಲಿ ಕಟ್ಟಡಗಳು ನಡುಗಿವೆ. ಭೂಮಿಯ 10 ಕಿಲೋ ಮೀಟರ್ ಆಳದಲ್ಲಿ ಕಂಪನ ಉಂಟಾಗಿದೆ ಎಂದು ತಿಳಿದು ಬಂದಿದೆ.

ಭೂಕಂಪನದಿಂದ ತಕ್ಷಣಕ್ಕೆ ಪ್ರಾಣ ಹಾನಿ ಅಥವಾ ಆಸ್ತಿ ನಷ್ಟದ ಕುರಿತು ಯಾವುದೇ ವರದಿಯಾಗಿಲ್ಲ. ಭಯಭೀತರಾದ ಜನರು ತಮ್ಮ ಮನೆಗಳಿಂದ ಹೊರಬಂದಿದ್ದರು ಎಂದು ವರದಿಯಾಗಿದೆ.

ಭಾರತದಲ್ಲೂ ಭೂಕಂಪನ: ನೇಪಾಳದಲ್ಲಿ ಸಂಭವಿಸಿದ ಭೂಕಂಪನದ ತೀವ್ರತೆ ಭಾರತದಲ್ಲೂ ಕಂಡುಬಂದಿದೆ. ದೆಹಲಿ ಎನ್‌ಸಿಆರ್ ಮತ್ತು ಬಿಹಾರದಲ್ಲಿ ಭೂಮಿ ನಡುಗಿದ ಅನುಭವವಾಗಿದೆ.


# ಬೈದ್ಯನಾಥನ ದರ್ಶನ ಪಡೆದ ಹೆಚ್‌ಡಿಡಿ

**ದಿಯೋಘರ್:** ಮಾಜಿ ಪ್ರಧಾನಿ ಮತ್ತು ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡ ಅವರಿಂದು ದಿಯೋಘರ್‌ನಲ್ಲಿರುವ ಬೈದ್ಯನಾಥ ದೇವಾಲಯಕ್ಕೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದರು.

ನಂತರ, ಅವರು ದುಮ್ಕಾದ ಬಸುಕಿನಾಥ ದೇವಸ್ಥಾನಕ್ಕೆ ಭೇಟಿ ನೀಡಿದರು. ಗಾಲಿಕುರ್ಚಿಯಲ್ಲಿ ದೇವಸ್ಥಾನಕ್ಕೆ ಆಗಮಿಸಿದ ಮಾಜಿ ಪ್ರಧಾನಿ ದೇವೇಗೌಡರಿಗೆ ಶಿಷ್ಟಾಚಾರದಂತೆ ಕಟ್ಟುನಿಟ್ಟಿನ ಭದ್ರತೆ ಮತ್ತು ಅವರ ಆರೋಗ್ಯದ ದೃಷ್ಟಿಯಿಂದ ವಿಶೇಷ ವ್ಯವಸ್ಥೆ ಮಾಡಲಾಗಿತ್ತು.

ದಿಯೋಘರ್‌ಗೆ ಆಗಮಿಸಿದ ಮಾಜಿ ಪ್ರಧಾನಿಯನ್ನು ಜಿಲ್ಲಾಧಿಕಾರಿ ವಿಶಾಲ್ ಸಾಗರ್ ಮತ್ತು ಎಸ್‌ಪಿ ಅಜಿತ್ ಪೀಟರ್ ಸ್ವಾಗತಿಸಿದರು. ದೇವಸ್ಥಾನ ಭೇಟಿಗೂ ಮುನ್ನ ಮಾಧ್ಯಮದವರೊಂದಿಗೆ ಹೆಚ್.ಡಿ. ದೇವೇಗೌಡರು ಮಾತನಾಡಿ, ದೇಶದ ಉತ್ತಮ ಭವಿಷ್ಯಕ್ಕಾಗಿ ಬಾಬಾ ಬೈದ್ಯನಾಥರಲ್ಲಿ ಪ್ರಾರ್ಥಿಸುತ್ತೇನೆ ಎಂದ ಅವರು, ಬೇರೆ ವಿಷಯದ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದರು.





# ಪಾರ್ವತಿಯಾದ ಕಾಜಲ್

ನಟ ಮೋಹನ್ ಬಾಬು ಅವರ ಪುತ್ರ ವಿಷ್ಣು ಮಂಚು ಅವರ ಕನಸಿನ ಚಿತ್ರವಾಗಿ ಕನ್ನಪ್ಪ ರೂಪುಗೊಳ್ಳುತ್ತಿದೆ. ಎವಿಎ ಎಂಟರ್‌ಟೈನ್‌ಮೆಂಟ್ಸ್, 24 ಫ್ರೇಮ್ಸ್ ಫ್ಯಾಕ್ಟರಿ ಜಂಟಾಗಿ ನಿರ್ಮಿಸುತ್ತಿರುವ ಈ ಚಿತ್ರದಲ್ಲಿ ದಕ್ಷಿಣ ಭಾರತ ಚಲನಚಿತ್ರೋದ್ಯಮದ ಹಲವಾರು ನಟರು, ಬಾಲಿವುಡ್ ಗಣ್ಯರು ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಮುಖ್ಯವಾಗಿ ಮೋಹನ್ ಲಾಲ್, ಪ್ರಭಾಸ್, ಅಕ್ಷಯ್ ಕುಮಾರ್, ಕಾಜಲ್ ಅಗರ್ವಾಲ್, ಮೋಹನ್ ಬಾಬು, ಶರತ್ ಕುಮಾರ್, ಮಧುಬಾಲ, ಮುಖೇಶ್ ರಿಷಿ, ಕರುಣಾಸ್, ಯೋಗಿ ಬಾಬು, ರಘು ಬಾಬು, ಐಶ್ವರ್ಯ ರಾಜೇಶ್ ಮುಂತಾದ 20ಕ್ಕೂ ಹೆಚ್ಚು ನಟರು ಐತಿಹಾಸಿಕ ಪಾತ್ರಗಳಲ್ಲಿ ನಟಿಸಿದ್ದಾರೆ.

ಈ ಚಿತ್ರದಲ್ಲಿ ನಟಿಸುತ್ತಿರುವ ಪ್ರೀತಿ ಮುಕುಂದನ್, ಪ್ರಭಾಸ್, ಅಕ್ಷಯ್ ಕುಮಾರ್, ವಿಷ್ಣು ಮಂಚು ಮುಂತಾದವರ ಪೋಸ್ಟರ್‌ಗಳು ಈಗಾಗಲೇ ಬಿಡುಗಡೆಯಾಗಿ ಉತ್ತಮ ಪ್ರತಿಕ್ರಿಯೆ ಪಡೆದಿರುವ ಹಿನ್ನೆಲೆಯಲ್ಲಿ... ಇದೀಗ ಪಾರ್ವತಿ ದೇವಿಯಾಗಿ ನಟಿಸುತ್ತಿರುವ ಕಾಜಲ್ ಅಗರ್ವಾಲ್ ಪೋಸ್ಟರ್ ಅನ್ನು ಚಿತ್ರತಂಡ ಬಿಡುಗಡೆ ಮಾಡಿದೆ.

ಬಿಳಿ ರೇಷ್ಮೆ ಸೀರೆಯಲ್ಲಿ, ಹಿಮಾಲಯ ಪರ್ವತಗಳ ತಪ್ಪಲಿನಲ್ಲಿ: ಒಂದು ಬಂಡೆಯ ಮೇಲೆ ಕಾಜಲ್ ಅಗರ್ವಾಲ್ ಕುಳಿತಿರುವುದು ಕಂಡುಬರುತ್ತಿದೆ. ಆಕೆಯ ಹಿಂದೆ ಮಹಾ ಕಾಳಿ ಅವತಾರವನ್ನು ಮಂಜಿನಿಂದ ವಿನ್ಯಾಸಗೊಳಿಸಲಾಗಿದೆ. ಇದಲ್ಲದೆ, ಕಾಜಲ್ ಅಗರ್ವಾಲ್ ಪಾರ್ವತಿ ದೇವಿಯ ಪಾತ್ರಕ್ಕೆ ತುಂಬಾ ಸೂಕ್ತ ಎಂದು ಅಭಿಮಾನಿಗಳು ಹೇಳುತ್ತಿದ್ದಾರೆ.

ಈ ಚಿತ್ರದ ಚಿತ್ರೀಕರಣ ಮುಗಿದಿದ್ದು, ಈ ವರ್ಷದ ಬೇಸಿಗೆ ರಜೆಯ ಸಂದರ್ಭದಲ್ಲಿ ಏಪ್ರಿಲ್ 25 ರಂದು ಬಿಡುಗಡೆ ಮಾಡಲು ಚಿತ್ರತಂಡ ಪ್ರಯತ್ನಿಸುತ್ತಿದೆ. 100 ರಿಂದ 150 ಕೋಟಿ ಬಜೆಟ್‌ನಲ್ಲಿ ನಿರ್ಮಾಣವಾದ ಈ ಚಿತ್ರಕ್ಕೆ ಶೆಲ್ಡನ್ ಚೌ ಛಾಯಾಗ್ರಹಣ, ಆಂಟೋನಿ ಸಂಪಾದನೆ ಮತ್ತು ಸ್ಟೀಫೆನ್ ದೇವಸ್ಸಿ ಸಂಗೀತ ನೀಡಿದ್ದಾರೆ.

ಅಭಿಮಾನಿಗಳ ಭಾರಿ ನಿರೀಕ್ಷೆಯ ನಡುವೆ ನಿರ್ಮಾಣವಾಗುತ್ತಿರುವ ಈ ಚಿತ್ರದ ಬಗ್ಗ ಕಾಲ ಕಾಲಕ್ಕೆ ಅಪ್‌ಡೇಟ್‌ಗಳನ್ನು ಬಿಡುಗಡೆ ಮಾಡುತ್ತಿರುವ ಚಿತ್ರತಂಡ, ಈಗ ಕಾಜಲ್ ಅಗರ್ವಾಲ್ ಅವರ ಫಸ್ಟ್ ಲುಕ್ ಪೋಸ್ಟರ್ ಅನ್ನು ಬಿಡುಗಡೆ ಮಾಡಿದೆ. ಈ ಚಿತ್ರದಲ್ಲಿ 'ಕನ್ನಪ್ಪ' ಪಾತ್ರದಲ್ಲಿ ನಟ ವಿಷ್ಣು ಮಂಚು ನಟಿಸುತ್ತಿದ್ದಾರೆ. ಈ ಚಿತ್ರಕ್ಕೆ ಮುಖೇಶ್ ಕುಮಾರ್ ಸಿಂಗ್ ನಿರ್ದೇಶನ ಮಾಡಿದ್ದಾರೆ. 'ಕನ್ನಪ್ಪ' ಚಿತ್ರದ ಬಗ್ಗೆ ಈ ಹಿಂದೆ ನೀಡಿದ ಸಂದರ್ಶನವೊಂದರಲ್ಲಿ ವಿಷ್ಣು ಮಂಚು ಮಾತನಾಡಿ, ಈ ಚಿತ್ರವನ್ನು ಯಾವುದೇ ಲಾಭದ ಉದ್ದೇಶದಿಂದ ತೆಗೆದಿಲ್ಲ, ಪರಮೇಶ್ವರನ ಆದೇಶದಂತೆ ಕನ್ನಪ್ಪನಾಗಿ ಶ್ರಮಪಟ್ಟು ಈ ಚಿತ್ರವನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ತೆಗೆದಿದ್ದೇವೆ ಎಂದು ತಿಳಿಸಿದ್ದಾರೆ. ಒಂದು ಮಹಾಕಾವ್ಯವಾಗಿ ರೂಪುಗೊಂಡಿರುವ ಈ ಚಿತ್ರ ಆಧ್ಯಾತ್ಮಿಕ ಅಭಿಮಾನಿಗಳಿಗೆ ಹಬ್ಬ ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ ಎಂದಿದ್ದಾರೆ.



# ಜೈಸ್ವಾಲ್ ಆಯ್ಕೆ ಬಹುತೇಕ ಖಚಿತ..!

ಯಶಸ್ವಿ ಜೈಸ್ವಾಲ್... ಟೀಮ್ ಇಂಡಿಯಾದ ಪ್ರಸ್ತುತ ಯಶಸ್ವಿ ಆರಂಭಿಕ ಬ್ಯಾಟರ್. ಜೈಸ್ವಾಲ್ ಈಗಾಗಲೇ ಟಿ20 ಹಾಗೂ ಟೆಸ್ಟ್ ತಂಡಗಳಲ್ಲಿ ಭಾರತದ ಪರ ಕಣಕ್ಕಿಳಿದಿದ್ದಾರೆ. ಈ ಎರಡೂ ಸ್ವರೂಪಗಳಲ್ಲೂ ಯಶಸ್ವಿಯಾಗಿದ್ದರೂ, ಜೈಸ್ವಾಲ್‌ಗೆ ಏಕದಿನ ತಂಡದಲ್ಲಿ ಮಾತ್ರ ಚಾನ್ಸ್ ನೀಡಿರಲಿಲ್ಲ.


ಇದೀಗ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿ ಒಂದೂವರೆ ವರ್ಷಗಳ ಬಳಿಕ ಯಶಸ್ವಿ ಜೈಸ್ವಾಲ್ ಅವರನ್ನು ಏಕದಿನ ತಂಡಕ್ಕೆ ಆಯ್ಕೆ ಮಾಡಲು ಬಿಸಿಸಿಐ ಆಯ್ಕೆ ಸಮಿತಿ ಮನಸ್ಸು ಮಾಡಿದೆ. ಅದರಂತೆ ಮುಂಬರುವ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಜೈಸ್ವಾಲ್ ಕಾಣಿಸಿಕೊಳ್ಳುವುದು ಬಹುತೇಕ ಖಚಿತವಾಗಿದೆ.

ಇಲ್ಲಿ ಯಶಸ್ವಿ ಜೈಸ್ವಾಲ್ ಅವರನ್ನು ಹೆಚ್ಚುವರಿ ಆರಂಭಿಕನಾಗಿ ಆಯ್ಕೆ ಮಾಡಲು ಬಿಸಿಸಿಐ ನಿರ್ಧರಿಸಿದೆ. ಏಕೆಂದರೆ ಏಕದಿನ ಪಂದ್ಯಗಳಲ್ಲಿ ಟೀಮ್ ಇಂಡಿಯಾ ಪರ ಓಪನರ್‌ಗಳಾಗಿ ರೋಹಿತ್ ಶರ್ಮಾ ಹಾಗೂ ಶುಭ್‌ಮನ್ ಗಿಲ್ ಕಣಕ್ಕಿಳಿಯುತ್ತಿದ್ದಾರೆ. ಇದೀಗ ಮೂರನೇ ಓಪನರ್ ಆಗಿ ಇಂಗ್ಲೆಂಡ್ ವಿರುದ್ಧದ ಸರಣಿಗೆ ಜೈಸ್ವಾಲ್ ಅವರನ್ನು ಆಯ್ಕೆ ಮಾಡಲಿದ್ದಾರೆ.

ಈಗಾಗಲೇ ಟಿ20 ಕ್ರಿಕೆಟ್‌ನಲ್ಲಿ ಆರಂಭಿಕನಾಗಿ ಕಣಕ್ಕಿಳಿದು 22 ಇನಿಂಗ್ಸ್‌ಗಳಿಂದ 723 ರನ್ ಕಲೆಹಾಕಿದ್ದಾರೆ. ಹಾಗೆಯೇ ಟೆಸ್ಟ್‌ನಲ್ಲಿ 36 ಇನಿಂಗ್ಸ್‌ಗಳಲ್ಲಿ ಓಪನರ್ ಆಗಿ ಕಾಣಿಸಿಕೊಂಡಿರುವ ಜೈಸ್ವಾಲ್ 2 ದ್ವಿಶತಕ ಹಾಗೂ 4 ಶತಕಗಳೊಂದಿಗೆ ಒಟ್ಟು 1798 ರನ್ ಬಾರಿಸಿದ್ದಾರೆ.

ಇದೀಗ ಏಕದಿನ ತಂಡಕ್ಕೆ ಎಂಟ್ರಿ ಕೊಡಲು ಸಜ್ಜಾಗಿ ನಿಂತಿರುವ ಯಶಸ್ವಿ ಜೈಸ್ವಾಲ್‌ಗೆ ಇಂಗ್ಲೆಂಡ್ ವಿರುದ್ಧದ ಸರಣಿಯಲ್ಲಿ ಚಾನ್ಸ್ ನೀಡಲಿದ್ದಾರಾ ಎಂಬುದೇ ಪ್ರಶ್ನೆ. ಏಕೆಂದರೆ ಸಿಕ್ಕ ಅವಕಾಶವನ್ನು ಬಳಸಿಕೊಳ್ಳುವಲ್ಲಿ ಯುವ ಎಡಗೈ ದಾಂಡಿಗ ನಿಪುಣ. ಹಾಗಾಗಿ ಆರಂಭಿಕನಾಗಿ ಕಣಕ್ಕಿಳಿದು ಯಶಸ್ವಿಯಾದರೆ ಮುಂಬರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಟೀಮ್ ಇಂಡಿಯಾ ಎಡಗೈ-ಬಲಗೈ ಜೋಡಿಯನ್ನು ಆರಂಭಿಕರಾಗಿ ಕಣಕ್ಕಿಳಿಸಬಹುದು.

# ನಟಿ ಹನಿ ರೋಸ್‌ಗೆ ಅಶ್ಲೀಲ ನಿಂದನೆ: ಓರ್ವ ಅಂದರ್, 30 ಜನರ ವಿರುದ್ಧ ಕೇಸ್



**ತಿರುವನಂತಪುರಂ:** 'ಸಾಮಾಜಿಕ ಜಾಲತಾಣದಲ್ಲಿ ವ್ಯಕ್ತಿಯೊಬ್ಬ ಅಶ್ಲೀಲ ಟೀಕೆ ಮಾಡಿ, ನನ್ನ ಗೌರವಕ್ಕೆ ಧಕ್ಕೆ ತರುತ್ತಿದ್ದಾನೆ'ಎಂದು ಮಲಯಾಳಂ ನಟಿ ಹನಿ ರೋಸ್ ಫೇಸ್‌ಬುಕ್‌ನಲ್ಲಿ ಆಕ್ರೋಶ ವ್ಯಕ್ತಪಡಿಸಿದ ಬೆನ್ನಲ್ಲೇ, ನಟಿಗೆ ನಿಂದನೆ ಮಾಡಿದ ಆರೋಪದಲ್ಲಿ ಪೊಲೀಸರು ಓರ್ವನನ್ನು ಬಂಧಿಸಿದ್ದು, 30 ಜನರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ನಟಿ ರೋಸ್ ನೀಡಿದ ದೂರಿನನ್ವಯ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಓರ್ವ ವ್ಯಕ್ತಿಯನ್ನು ಬಂಧಿಸಲಾಗಿದ್ದು, ತನಿಖೆ ನಡೆಸಲಾಗುತ್ತಿದೆ ಎಂದು ಕೊಚ್ಚಿ ಸೆಂಟ್ರಲ್ ಪೊಲೀಸರು ತಿಳಿಸಿದ್ದಾರೆ. ಆರಂಭದಲ್ಲಿ ಫೇಸ್‌ಬುಕ್‌ನಲ್ಲಿ ಬರೆದುಕೊಂಡಿದ್ದ ನಟಿ, ಆ ಬಳಿಕ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಆದರೆ ತನ್ನನ್ನು ಹಿಂಬಾಲಿಸಿದ ವ್ಯಕ್ತಿಯ ಗುರುತನ್ನು ಬಹಿರಂಗಪಡಿಸಿಲ್ಲ.

# ಇವೆಂಟ್‌ಗೆ ಗೈರಾಗಿದ್ದೇಕೆ ನಟಿ ಕಿಯಾರಾ?

ರಾಕಿಂಗ್ ಸ್ಟಾರ್ ಯಶ್ ನಟನೆಯ ಟಾಕ್ಸಿಕ್ ಸಿನಿಮಾದಲ್ಲಿ ಬಾಲಿವುಡ್ ಬ್ಯೂಟಿ ಕಿಯಾರಾ ಅಡ್ವಾನಿ ನಟಿಸ್ತಾ ಇರೋ ಸಂಗತಿ ನಿಮಗೆ ಗೊತ್ತೇ ಇದೆ. ರಾಮ್‌ಚರಣ್ ನಟನೆಯ ಗೇಮ್ ಚೇಂಜರ್ ಸಿನಿಮಾದಲ್ಲೂ ಕಿಯಾರಾನೇ ಲೀಡಿಂಗ್ ಲೇಡಿ. ಇತ್ತೀಚೆಗೆ ನಡೆದ ಗೇಮ್ ಚೇಂಜರ್ ಸಿನಿಮಾದ ಪ್ರೀಲಾಂಚ್ ಇವೆಂಟ್‌ಗೆ ಕಿಯಾರಾ ಗೈರಾಗಿದ್ರು. ಅದರ ಬೆನ್ನಲ್ಲೇ ಕಿಯಾರಾ ಆಸ್ಪತ್ರೆ ಸೇರಿರೋ ಸುದ್ದಿ ಸದ್ದು ಮಾಡ್ತಾ ಇದೆ

ಯೆಸ್ ಬಾಲಿವುಡ್ ಬ್ಯೂಟಿ ಕಿಯಾರಾ ಅಡ್ವಾನಿ ಕುರಿತ ಸುದ್ದಿಯೊಂದು ಸದ್ಯ ಸಿಕ್ಕಾಪಟ್ಟೆ ಸದ್ದು ಮಾಡ್ತಾ ಇದೆ. ಇತ್ತೀಚೆಗೆ ಆಂಧ್ರದಲ್ಲಿ ನಡೆದ ಗೇಮ್ ಚೇಂಜರ್ ಮೂವಿಯ ಪ್ರೀ ಲಾಂಚ್ ಇವೆಂಟ್‌ಗೆ ಕಿಯಾರಾ ಗೈರಾಗಿದ್ರು. ಗೇಮ್ ಚೇಂಜರ್ ಏನೂ ಸಣ್ಣ ಸಿನಿಮಾ ಅಲ್ಲ ಭರ್ತಿ 500 ಕೋಟಿ ಬಜೆಟ್‌ನಲ್ಲಿ ಸಿದ್ದವಾಗಿರೋ ಪ್ಯಾನ್ ಇಂಡಿಯಾ ಮೂವಿ. ಈ ಚಿತ್ರದಲ್ಲಿ ಗ್ಲೋಬಲ್ ಸ್ಟಾರ್ ರಾಮ್ ಚರಣ್ ಜೊತೆಗೆ ನಾಯಕಿಯಾಗಿ ಮಿಂಚಿರೋದು ಇದೇ ಕಿಯಾರಾ. ಇಷ್ಟು ದೊಡ್ಡ ಸಿನಿಮಾದ ನಾಯಕಿ ಪ್ರೀ ಲಾಂಚ್ ಇವೆಂಟ್‌ಗೆ ಚಕ್ಕರ್ ಹಾಕಿದ್ದೇಕೆ ಅನ್ನೋ ಪ್ರಶ್ನೆ ಫ್ಯಾನ್ಸ್ ನಡುವೆ ಹುಟ್ಟಿಕೊಂಡಿತ್ತು.

ಅದಕ್ಕೆ ಉತ್ತರ ಹುಡುಕಹೋದವರಿಗೆ ಕಿಯಾರಾ ಮುಂಬೈನಲ್ಲಿ ಆಸ್ಪತ್ರೆಯಲ್ಲಿ ಅಡ್ಮಿಟ್ ಆಗಿದ್ದಾಳೆ ಅನ್ನೋ ಶಾಕಿಂಗ್ ವಿಷ್ಯ ರಿವೀಲ್ ಆಗಿದೆ. ಹೌದು ಕಿಯಾರಾ ಆರೋಗ್ಯದಲ್ಲಿ ಏರುಪೇರಾದ ಕಾರಣ ಶುಕ್ರವಾರವೇ ಆಸ್ಪತ್ರೆಗೆ ದಾಖಲಾಗಿದ್ದಾರೆ. ಅಷ್ಟಕ್ಕೂ ಕಿಯಾರಾಗೆ ಅಂಥದ್ದೇನಾಗಿದೆ ಅಂತ ನೋಡಹೋದ್ರೆ, ಸತತ ಸಿನಿಮಾ ಕೆಲಸಗಳಲ್ಲಿ ಬ್ಯುಸಿಯಾಗಿ ಆರೋಗ್ಯ ನಿರ್ಲಕ್ಷಿಸಿದ್ದೇ ಈಕೆಯ ಆರೋಗ್ಯ ಹದಗೆಡೋದಕ್ಕೆ ಕಾರಣವಂತೆ.

ಫಗ್ಲಿ ಸಿನಿಮಾ ಮೂಲಕ ಬಾಲಿವುಡ್‌ಗೆ ಎಂಟ್ರಿ ಕೊಟ್ಟ ಕಿಯಾರಾ ದಶಕದಿಂದಲೂ ಬಿಜಿಯೆಸ್ಟ್ ನಟಿಮಣಿ. ಬಾಲಿವುಡ್ ಸಿನಿಮಾಗಳ ಜೊತೆಗೆ ಸೌತ್‌ನ ಬಿಗ್ ಪ್ರಾಜೆಕ್ಟ್‌ಗಳಲ್ಲಿ ಬಿಗ್ ಸ್ಟಾರ್ಸ್ ಜೊತೆಗೆ ನಟಿಸಿ ಮಿಂಚಿರೋ ಈ ಚೆಲುವೆ ಕಳೆದ ವರ್ಷ ಸಿದ್ದಾರ್ಥ್ ಮಲ್ಹೋತ್ರಾ ಜೊತೆ ಹಸೆಮಣೆ ಏರಿದ್ರು. ಆದ್ರೆ ಮದುವೆ ಬಳಿಕವೂ ಕಿಯಾರಾಗೆ ಆಫರ್‌ಗಳು ಕಮ್ಮಿಯಾಗಿಲ್ಲ. ಬಾಲಿವುಡ್‌ನ ಬಿಗ್ಗೆಸ್ಟ್ ಆಕ್ಷನ್ ಡ್ರಾಮಾ ವಾರ್-2ನಲ್ಲಿ ಕಿಯಾರಾ ನಟಿಸ್ತಾ ಇದ್ದಾಳೆ.

ಇತ್ತ ರಾಮ್ ಚರಣ್ ನಟನೆಯ – ಶಂಕರ್ ನಿರ್ದೇಶನದ ಗೇಮ್




ಚೇಂಜರ್ ನಲ್ಲಿ ನಾಯಕಿಯಾಗಿ ಮಿಂಚಿದ್ದು ಇದೇ ಜನವರಿ 10ಕ್ಕೆ ಆ ಸಿನಿಮಾ ರಿಲೀಸ್ ಆಗ್ತಾ ಇದೆ. ಇದೆಲ್ಲಾ ಒತ್ತಟ್ಟಿಗಿರಲಿ ನಮ್ಮ ರಾಕಿಭಾಯ್ ಯಶ್ ನಟನೆಯ ಮೋಸ್ಟ್ ಅವೇಟೆಡ್ ಸಿನಿಮಾ ಟಾಕ್ಸಿಕ್‌ಗೂ ಈಕೆಯೇ ನಾಯಕಿ. ಕೆಜಿಎಫ್ ಬಳಿಕ ಯಶ್ ಜೊತೆಗೆ ನಟಿಸೋದಕ್ಕೆ ಇಡೀ ಇಂಡಿಯನ್ ಸಿನಿರಂಗದ ಟಾಪ್ ನಟಿಯರೆಲ್ಲಾ ಸರತಿ ಸಾಲಲ್ಲಿ ನಿಂತಿದ್ರು. ಆದ್ರೆ ಈ ಅದೃಷ್ಟ ಸಿಕ್ಕಿದ್ದು ಮಾತ್ರ ಸಪೂರ ಸುಂದರಿ ಕಿಯಾರಾಗೆ.

ಒಂದು ಕಡೆಗೆ ಬಾಲಿವುಡ್‌ನ ವಾರ್ 2 , ಇನ್ನೊಂದೆಡೆ ಟಾಕ್ಸಿಕ್‌ನಂತಹಾ ಬಿಗ್ ಸಿನಿಮಾಗಳ ಶೂಟಿಂಗ್‌ನಲ್ಲಿ ಅವಿರತವಾಗಿ ತೊಡಗಿಕೊಂಡಿರೋ ಕಿಯಾರಾಗೆ ಗೇಮ್ ಚೇಂಜರ್ ಸಿನಿಮಾದ ಪ್ರಮೋಷನ್‌ನಲ್ಲಿ ಬೇರೆ ಭಾಗಿಯಾಗೋ ಒತ್ತಡ ಇದೆ. ಈ ಒತ್ತಡದ ನಡುವೆಯೇ ಕಿಯಾರಾ ಹೆಲ್ತ್ ಅಪ್‌ಸೆಟ್ ಆಗಿ ಆಸ್ಪತ್ರೆ ಸೇರಿದ್ದಾರೆ. ಫ್ಯಾನ್ಸ್ ಕಿಯಾರಾಗೆ ಗೆಟ್ ವೆಲ್ ಸೂನ್ ಅಂತಿದ್ದಾರೆ.





# ಎಮರ್ಜೆನ್ಸಿ'ಗೆ ಸಿಗುತ್ತಾ ಮುಕ್ತಿ?

ಕಂಗನಾ ರಣಾವತ್ ಅವರಿಗೆ ರಾಜಕೀಯ ಕೈಹಿಡಿದಿದ್ದರೂ, ಅವರ ಕೊನೆಯ ಚಿತ್ರ ಎಂದೇ ಬಿಂಬಿತವಾಗಿರುವ ಎಮರ್ಜೆನ್ಸಿಗೆ ಮಾತ್ರ ಇನ್ನೂ ಮುಕ್ತಿ ಸಿಕ್ಕಿಲ್ಲ.

ಚಿತ್ರ ಬಿಡುಗಡೆ ಮಾಡುವುದಾಗಿ ಹೇಳಿದ ತಕ್ಷಣ ವಿವಾದಗಳ ಸುಳಿ ಸುತ್ತಿಕೊಂಡು ಬಿಡುತ್ತಿದೆ. ನಾಲ್ಕೈದು ಬಾರಿ ಚಿತ್ರ ಬಿಡುಗಡೆಯ ಸಮೀಪಕ್ಕೆ ಬಂದು ನಂತರ ಸ್ಟಾಪ್ ಆಗಿದೆ. ಕಳೆದ ಬಾರಿ ಇನ್ನೇನು ಬಿಡುಗಡೆಗೆ ಸೆನ್ಸಾರ್ ಮಂಡಳಿ ಅನುಮತಿ ಸಿಕ್ಕಿದ್ದರೂ ಕುತೂಹಲದ ಘಟ್ಟದಲ್ಲಿ, ಅಚ್ಚರಿಯ ಬೆಳವಣಿಗೆಯ ನಡುವೆ, ಸೆನ್ಸಾರ್ ಮಂಡಳಿ ಯೂಟರ್ನ್ ಹೊಡೆಯಿತು.

ಕೊನೆಗೂ ಎಮರ್ಜೆನ್ಸಿಗೆ ಬಿಡುಗಡೆಯ ಭಾಗ್ಯ ಸಿಗಲೇ ಇಲ್ಲ. ಹೀಗೆ ನಾಲ್ಕೈದು ಬಾರಿ ಡೇಟ್ ಫಿಕ್ಸ್ ಆಗಿ ಮುಂದಕ್ಕೆ ಸಾಗುತ್ತಲೇ ಇರುವ ಈ ಚಿತ್ರಕ್ಕೆ ಈಗ ಹೊಸ ಮುಹೂರ್ತ ಫಿಕ್ಸ್ ಮಾಡಲಾಗಿದೆ. ಝೀ ಸ್ಟುಡಿಯೋಸ್ ಮತ್ತು ಮಣಿಕರ್ಣಿಕಾ ಫಿಲ್ಮ್ ಬ್ಯಾನರ್ ಅಡಿಯಲ್ಲಿ ಬರುತ್ತಿರುವ 'ಎಮರ್ಜೆನ್ಸಿ' ಚಿತ್ರವು ಮೊದಲ ಮಹಿಳಾ ಪ್ರಧಾನಿ ಇಂದಿರಾಗಾಂಧಿಯನ್ನು ಆಧರಿಸಿದ ಮೆಗಾ-ಬಜೆಟ್ ಚಲನಚಿತ್ರವಾಗಿದೆ. ಇದಾಗಲೇ ಹಲವು ಬಾರಿ ಮುಂದೂಡಲ್ಪಟ್ಟಿದ್ದ ಈ ಚಿತ್ರಕ್ಕೆ ಇದೇ ಜನವರಿ 17ರ ಡೇಟ್ ಫಿಕ್ಸ್ ಆಗಿದೆ.

ಇದಾಗಲೇ ಕಳೆದ ವರ್ಷ ಈ ಚಿತ್ರದ ಟ್ರೇಲರ್ ಬಿಡುಗಡೆ ಮಾಡಲಾಗಿತ್ತು. ಈಗ ಮತ್ತೊಂದು ಟ್ರೇಲರ್ ಬಿಡುಗಡೆ ಮಾಡಲಾಗಿದೆ. ಇದರಲ್ಲಿ ಎಮರ್ಜೆನ್ಸಿಯ ಘೋಷಣೆ ಆಗುತ್ತಿದ್ದಂತೆಯೇ, ಏಕಾಏಕಿ ನಿರ್ಧಾರ ತೆಗೆದುಕೊಳ್ಳಲು ಆಗುವುದಿಲ್ಲ, ಸಚಿವ ಸಂಪುಟದ ಪರ್ಮಿಷನ್ ಬೇಕು ಎಂದು ಹೇಳುತ್ತಿದ್ದಂತೆಯೇ, ಇಂದಿರಾ ಗಾಂಧಿ, ನಾನೇ ಕ್ಯಾಬಿನೆಟ್ ಎನ್ನುವ ಡೈಲಾಗ್ ಇದೆ. ಇ ದೇ ವೇಳೆ, ಇಂದಿರಾ ಅವರ ಬಹು ಚರ್ಚಿತ ಘೋಷಣೆಯಾಗಿರುವ ಇಂದಿರಾನೇ ಇಂಡಿಯಾ, ಇಂಡಿಯಾನೇ ಇಂದಿರಾ ಎಂದೂ ಈ ಪ್ರೊಮೋದಲ್ಲಿ ತೋರಿಸಲಾಗಿದೆ. ಕೊನೆಗೆ ಯುದ್ಧನೇ ಕೊನೆಗೆ ದಾರಿ ಎನ್ನುವ ಮೂಲಕ, ನಡೆದಿರುವ ಯುದ್ಧ, ಅದರಲ್ಲಿ ಮಹಿಳೆ, ಮಕ್ಕಳು ಎನ್ನಲೇ ಅಸಂಖ್ಯ ಭಾರತೀಯರ ಬರ್ಬರ ಹತ್ಯೆ, ಹೋರಾಟಗಾರರಿಗೆ ಆಗಿರುವ ಭಯಾನಕ ಶಿಕ್ಷೆಗಳನ್ನೂ ಈ ಪ್ರೊಮೋದಲ್ಲಿ ತೋರಿಸಲಾಗಿದೆ. ಈ ಚಿತ್ರದಲ್ಲಿ ಎಮರ್ಜೆನ್ಸಿಯ ಬಹಿರಂಗಗೊಳ್ಳದ ಸತ್ಯ ಇದೆ ಎಂದು ಹೇಳಿಕೊಂಡಿದೆ ಚಿತ್ರತಂಡ.

ಈ ಚಿತ್ರದಲ್ಲಿ ಇರುವ ಕೆಲವು ಅಂಶಗಳ ವಿರುದ್ಧ ಕೋರ್ಟ್‌ಗೆ ಹೋಗಿದ್ದ ಹಿನ್ನೆಲೆಯಲ್ಲಿ, ಕೇಂದ್ರ ಚಲನಚಿತ್ರ ಪ್ರಮಾಣೀಕರಣ ಮಂಡಳಿಗೆ ಬಿಡುಗಡೆಗೆ ಅನುಮತಿ ನೀಡಿದ ಬಳಿಕವೂ ಚಿತ್ರ ಬಿಡುಗಡೆಯನ್ನು ಸ್ಥಗಿತಗೊಳಿಸಲಾಗಿತ್ತು. ಈ ಕುರಿತು ಈ ಹಿಂದೆ ತಿಳಿಸಿದ್ದ ನಟಿ, ಮಂಡಳಿಗೆ ಬೆದರಿಕೆ ಕರೆಗಳು ಬರುತ್ತಿವೆ. ಈ ಸಿನಿಮಾದಲ್ಲಿ ಎಮರ್ಜೆನ್ಸಿ ಸಮಯದಲ್ಲಿ ಉಂಟಾದ ಪಂಜಾಬ್ ಗಲಭೆ ತೋರಿಸಲಾಗಿದೆ. ಅದನ್ನು ತೋರಿಸದಂತೆ, ಇಂದಿರಾಗಾಂಧಿಯವರ ಹತ್ಯೆಯನ್ನು ತೋರಿಸದಂತೆ ಹೇಳಲಾಗುತ್ತಿದೆ. ಸತ್ಯವನ್ನು ಮರೆಮಾಚುವಂತೆ ತಿಳಿಸುತ್ತಿರುವುದನ್ನು ನೋಡಿದರೆ ವಿಚಿತ್ರವಾಗಿ ತೋರುತ್ತದೆ ಎಂದಿದ್ದರು. ಇದೀಗ ಕೋರ್ಟ್ ಆದೇಶದ ಪ್ರಕಾರ ಹಲವು ದೃಶ್ಯಗಳಿಗೆ ಕತ್ತರಿ ಹಾಕಲಾಗಿದೆ. ಈಗ ಚಿತ್ರದಲ್ಲಿ ಉಳಿದುಕೊಂಡಿರುವುದು ಏನು ಎಂದು ನೋಡುವ ಕುತೂಹಲದಲ್ಲಿ ಪ್ರೇಕ್ಷಕರಿದ್ದಾರೆ.

ಜೂನ್ 25, 1975ರಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ಹೇರಿದ್ದ ರಾಷ್ಟ್ರೀಯ ತುರ್ತು ಪರಿಸ್ಥಿತಿ ಕರಾಳ ಮುಖವನ್ನು ಈ ಚಿತ್ರದಲ್ಲಿ ತೋರಿಸಲಾಗಿದೆ ಎಂದು ನಟಿ ಹೇಳಿದ್ದಾರೆ.

21 ತಿಂಗಳು ಕಾಲ ತುರ್ತು ಪರಿಸ್ಥಿತಿ ಅಸ್ತಿತ್ವದಲ್ಲಿ ಇತ್ತು. 1975, ಜೂನ್ 25ರಂದು ಭಾರತದ ಇತಿಹಾಸದಲ್ಲಿ ಕರಾಳ ದಿನವಾಗಿತ್ತು. ಸಂವಿಧಾನವನ್ನು ತಿರಸ್ಕರಿಸಿ ತುರ್ತು ಪರಿಸ್ಥಿತಿ ಹೇರಲಾಯ್ತು. ಭಾರತದ ಯುವ ಪೀಳಿಗೆ ಇದನ್ನ ಎಂದು ಮರೆಯೋದಿಲ್ಲ ಎಂದಿರುವ ನಟಿ, ತಮ್ಮ ಈ ಚಿತ್ರವನ್ನು ವೀಕ್ಷಿಸಿ, ನಮ್ಮ ಇತಿಹಾಸವನ್ನು ತಿಳಿದುಕೊಳ್ಳಿ ಎಂದಿದ್ದಾರೆ. ಈ ಕುರಿತು ಈ ಹಿಂದೆ ಹೇಳಿಕೆ ನೀಡಿದ್ದ ಅವರು, ಭಾರತೀಯ ಪ್ರಜಾಪ್ರಭುತ್ವದ ಇತಿಹಾಸದ ಕರಾಳ ಘಟ್ಟವನ್ನು ನೋಡಿ ಮತ್ತು ಅಧಿಕಾರದ ಲಾಲಸೆಯನ್ನು ನೋಡಿ ಎಂದಿದ್ದಾರೆ.

ಚಿತ್ರದಲ್ಲಿ ಅನುಪಮ್ ಖೇರ್, ಮಿಲಿಂದ್ ಸೋಮನ್, ಶ್ರೇಯಸ್ ತಲ್ಪಾಡೆ ಮತ್ತು ದಿವಂಗತ ಸತೀಶ್ ಕೌಶಿಕ್ ಅವರ ಸಂಗೀತವನ್ನು ಸಂಚಿತ್ ಬಲ್ಹಾರಾ ಅವರು ಸಂಯೋಜಿಸಿದ್ದಾರೆ. ಕಥೆ ಮತ್ತು ಸಂಭಾಷಣೆಗಳನ್ನು ರಿತೇಶ್ ಷಾ ಬರೆದಿದ್ದಾರೆ. ಚಿತ್ರದ ಬಿಡುಗಡೆ ಪದೇ ಪದೇ ಮುಂದೂಡುತ್ತಲೇ ಹೋಗುತ್ತಿತ್ತು. ನವೆಂಬರ್ 24, 2023 ರಂದು ಬಿಡುಗಡೆಯಾಗಬೇಕಿತ್ತು.

ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-44 Email-mussanje2010@gmail.com, Phone: **9448074878**